ಸಂಪುಟ: ೦೭/ ಸಂಚಿಕೆ: ೧೪೦/ಶುಕ್ರವಾರ ದಿನಾಂಕ : ೧೮-೦೭-೨೦೨೫/ ಪುಟ: ೬/ ಬೆಲೆ ೨-೦೦

ಸತ್ಯಕ್ಕೆ ಕಿರಣ ಸುಳ್ಳಿಗೆ ಕಿಡಿ

ಕಛೇರಿ ದೂರವಾಣಿ ಸಂಖ್ಯೆ 0831-3564491

# ಬೆಳಗಿನ ಸೂರ್ಯೋದಯ

ಕನ್ನಡ ಪ್ರಾದೇಶಿಕ ದಿನಪತ್ರಿಕೆ

ಬೆಳಗಾವಿ ■ ಧಾರವಾಡ ■ ಬಾಗಲಕೋಟ ■ ವಿಜಯಪುರ ■ ಗದಗ ■ ಕೊಪ್ಪಳ ■ ಹಾವೇರಿ ■ ಕಾರವಾರ

ಸಂಪಾದಕರು : ಗುರುರಾಜ ಈರಪ್ಪಾ. ಕದಮ, Editor : GURURAJ IRAPPA. KADAM Cell : 9620099959

Volume : 07/ ISSUE : 140/ FRIDAY Date : 18-07-2025/ RNI No. KARKAN/2019/77640/ Postal Reg No. PMG/KA/NK/BM/135/2025-27 / POST AT Vantamury Colony Post Office / email : belaginasuryodaya@gmail.com / Page : 6 / Rs. 2.00

## ಅಥಣಿ-ಕಾಗವಾಡ ತಾಲೂಕಿನ ವಿವಿಧ ಗ್ರಾಮಗಳಿಗೆ ಭೇಟಿ

### ಜಲಜೀವನ ಮಿಷನ್ ಯೋಜನೆಯ ಕಾಮಗಾರಿ ಪರಿಶೀಲಿಸಿದ : ಜಿಪಂ ಸಿಇಓ ರಾಹುಲ್ ಶಿಂಧೆ

ಅಥಣಿ ಮತ್ತು ಕಾಗವಾಡ : ಬೆಳಗಾವಿ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ರಾಹುಲ್ ಶಿಂಧೆ ರವರು ಗುರುವಾರದಂದು ಅಥಣಿ ತಾಲೂಕಿನ ಕನ್ನಾಳ ಗ್ರಾಮ ಪಂಚಾಯತಿಗೆ ಭೇಟಿ ನೀಡಿ ಜಲ ಜೀವನ ಮಿಷನ್ ಯೋಜನೆಯ ಕಾಮಗಾರಿಗಳನ್ನು ವೀಕ್ಷಣೆ ಮಾಡಿ ನಂತರ ಕಾರ್ಯಾತ್ಮಕ ನಳ ಸಂಪರ್ಕ ಕುರಿತು ಸ್ಥಳೀಯ ಫಲಾನುಭವಿಗಳ ಜೊತೆ ಚರ್ಚೆಮಾಡಿ ಮಾಹಿತಿ ಪಡೆದುಕೊಂಡರು. ನಂತರ ಗ್ರಾಮ ಪಂಚಾಯತಿಯ ಮುಂದೆ 15 ನೇ ಹಣಕಾಸು ಯೋಜನೆಯಡಿ ನಿರ್ಮಾಣವಾಗುತ್ತಿರುವ ಉದ್ಯಾನವನ ವೀಕ್ಷಣೆ ಮಾಡಿದರು. ಗ್ರಾಮ ಪಂಚಾಯತಿ ಸಭಾ ಭವನದಲ್ಲಿ ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿಯ ಜೊತೆ ಸ್ವಚ್ಛ ಭಾರತ ಮಿಷನ್(ಗ್ರಾ) ಯೋಜನೆಯ ಘಟಕಾಂಶಗಳ ಪ್ರಗತಿ, ಹೆಸ್ಕಾಂ ಬಿಲ್ಲುಗಳು ಪುನರವಿಮರ್ಶೆ,ಹೊಸ ಗ್ರಂಥಾಲಯಗಳ ಬಗ್ಗೆ ಚರ್ಚಿಸಿದರು. ಕನ್ನಾಳ ಗ್ರಾಮ ಪಂಚಾಯತಿ ವ್ಯಾಪ್ತಿಯ ಸರಕಾರಿ ಪ್ರಾಥಮಿಕ ಶಾಲೆಗೆ ಬೇಟಿ ನೀಡಿ ಮಕ್ಕಳ ಜೊತೆ ಬಿಸಿಯೂಟ ಹಾಗೂ ಸಮವಸ್ತ್ರ ಬಗ್ಗೆ ಚರ್ಚೆ ಮಾಡಿದರು.

ನಂತರ ಐಗಳಿ ಹಾಗೂ ಪಡತರವಾಡಿ ಗ್ರಾಮಗಳಲ್ಲಿನ ಜಲ ಜೀವನ ಮಿಷನ್ ಯೋಜನೆಯ ಕಾಮಗಾರಿಗಳಿಗೆ ಭೇಟಿ ನೀಡಿ ಯೋಜನೆ ಬಗ್ಗೆ ಸಾರ್ವಜನಿಕರೊಡನೆ ಚರ್ಚೆ ಮಾಡಿ ಮಾಹಿತಿ ಪಡೆದುಕೊಂಡರು. ನಂತರ ಕಟಗೇರಿ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಬರುವ ದಬ್ಬದಾಬಟ್ಟಿ ಗ್ರಾಮದ ಜಲ ಜೀವನ ಮಿಷನ್ ಯೋಜನೆಯ



ಕಾಮಗಾರಿಯ ಸ್ಥಳಗಳಿಗೆ ಭೇಟಿ ನೀಡಿ ಪರಿಶೀಲಿಸಿದರು.

ತರುವಾತ ರಡ್ಡೇರಹಟ್ಟಿ ಗ್ರಾಮಕ್ಕೆ ತೆರಳಿ ಅಲ್ಲಿಯೂ ಸಹ ಜಲ ಜೀವನ ಮಿಷನ್ ಯೋಜನೆಯ ಕಾಮಗಾರಿ ಸ್ಥಳಕ್ಕೆ ಭೇಟಿ ನೀಡಿದರು. ನಂತರ ಸಮೃದ್ಧಿ ಸಂಜೀವಿನಿ ವನ ಧನ ವಿಕಾಸ ಕೇಂದ್ರಕ್ಕೆ ಭೇಟಿ ಮಾಡಿ ವಿಕಾಸ ಕೇಂದ್ರದ ಪದಾಧಿಕಾರಿಗಳಿಗೆ ಹಾಗೂ ಎನ್ ಆರ್ ಎಲ್ ಎಮ್ (ಓಖಐಓ) ಸಿಬ್ಬಂದಿಯವರೆಗೆ ಸೂಕ್ತ ಸಲಹೆ ಮತ್ತು ಸೂಚನೆಗಳನ್ನು ನೀಡಿದರು.

ಮುಂದುವರೆದು, ಜಿಲ್ಲಾ ಪಂಚಾಯತ ಸಿಇಓ ರಾಹುಲ್ ಶಿಂಧೆ ರವರು ಕಾಗವಾಡ ತಾಲೂಕಿನ ಮೋಳೆ, ಕೆಂಪವಾಡ, ಮಂಗಸೂಳಿ ಗ್ರಾಮ ಪಂಚಾಯತಿ ವ್ಯಾಪ್ತಿಯ ಗ್ರಾಮಗಳಿಗೆ ಭೇಟಿ ನೀಡಿದರು.

ಮೋಳೆ ಗ್ರಾಮದ ದೇವರಡ್ಡಿ ತೋಟ ಮತ್ತು ಕೆಂಪವಾಡ ಗ್ರಾಮ ಪಂಚಾಯತ ವ್ಯಾಪ್ತಿಯ ಕೌಲಗುಡ್ಡ ಹಾಗೂ ಮಂಗಸೂಳಿ ಗ್ರಾಮದಲ್ಲಿ ಅನುಷ್ಠಾನಗೊಳಿಸಲಾದ ಜೆಜೆಎಂ ಕಾಮಗಾರಿಗಳಿಗೆ ಭೇಟಿ ನೀಡಿ ಫಲಾನುಭವಿಗಳೊಂದಿಗೆ ಚರ್ಚಿಸಿದರು. ಕುಡಿಯುವ ನೀರಿನ ಸಮಸ್ಯೆ ಬಗ್ಗೆ ಜನರೊಂದಿಗೆ ಸಂವಾದ ನಡಿಸಿದರು. ಪ್ರಸ್ತುತ ಅವಧಿ ಪೂರ್ಷ ಮಳೆಯಾಗುತ್ತಿದ್ದು, ಕುಡಿಯುವ ನೀರಿನ ಸಮಸ್ಯೆ ಇಲ್ಲ ಅಂತಾ ಅಲ್ಲಿನ ಗ್ರಾಮಸ್ಥರು ಮಾನ್ಯರಿಗೆ ತಿಳಿಸಿದರು.

ಬಳಿಕ ಜಲ ಜೀವನ ಮಿಷನ್ ಯೋಜನೆಯ ಕಾಮಗಾರಿಗಳನ್ನು ವೀಕ್ಷಣೆ ಮಾಡಿ ನಂತರ ಕಾರ್ಯಾತ್ಮಕ ನಳ ಸಂಪರ್ಕದ ಕುರಿತು ಫಲಾನುಭವಿಗಳ ಜೊತೆ ಚರ್ಚೆ ಮಾಡಿದರು. ಮಂಗಸೂಳಿ ಗ್ರಾಮದಲ್ಲಿನ ನಲ್ಲಿಗಳಿಗೆ ಮೀಟರ್ ಅಳವಡಿಸುವಂತೆ ಹಾಗೂ ಕೆಲವು ನಲ್ಲಿ ಸೋರಿಕೆಯಾಗುತ್ತಿದ್ದು, ಅವುಗಳನ್ನು 15 ದಿನಗಳ ಒಳಗಾಗಿ ದುರಸ್ತಿ ಮಾಡುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು. ನಿಗದಿತ ಅವಧಿಯಲ್ಲಿ ದುರಸ್ತಿ ಮಾಡದೇ ಹೋದಲ್ಲಿ ಸಹಾಯವಾಣಿ ನಂಬರಿಗೆ ಕರೆ ಮಾಡಲು ಸಾರ್ವಜನಿಕರಿಗೆ ಮಾನ್ಯರು ತಿಳಿಸಿದರು.

ಶೀರಗುಪ್ಪಿ ಗ್ರಾಮ ಪಂಚಾಯತ ಮತ್ತು ಶಹಾಪುರ ಗ್ರಾಮಕ್ಕೆ ಭೇಟಿ ನೀಡಿ ಜಲ ಜೀವನ ಮಿಷನ್ ಯೋಜನೆಯ ಕಾಮಗಾರಿಗಳನ್ನು ವೀಕ್ಷಣೆ ಮಾಡಿದರು. ನೂತನ ಜಾಕ್ ವೆಲ್ ನಿರ್ಮಾಣ ಮಾಡಿಕೊಡುವಂತೆ ಹಾಗೂ ನರೇಗಾ ಯೋಜನೆಯಡಿ ಹೆಚ್ಚುವರಿ ಕ್ರಿಯಾ ಯೋಜನೆಗೆ ಅವಕಾಶ ನೀಡುವಂತೆ ಶಹಾಪುರ ಗ್ರಾಮಸ್ಥರು ಮಾನ್ಯರಿಗೆ ಮನವಿ ಮಾಡಿದರು. ಬಳಿಕ ಶಿರಗುಪ್ಪಿ ಗ್ರಾಮದ ಕುಡಿಯುವ ನೀರಿನ ಟ್ಯಾಂಕ್ ಗೆ ಭೇಟಿ ನೀಡಿ ಪರಿಶೀಲನೆ ಮಾಡಿದರು.

ಈ ಸಂದರ್ಭದಲ್ಲಿ ಅಥಣಿ ತಾಪಂ ಕಾರ್ಯನಿರ್ವಾಹಕ ಅಧಿಕಾರಿ ಶಿವಾನಂದ ಕಲ್ಲಾಪುರ ಮತ್ತು ಕಾಗವಾಡ ತಾಪಂ ಕಾರ್ಯನಿರ್ವಾಹಕ ಅಧಿಕಾರಿ ವೀರಣ್ಣಾ ವಾಲಿ, ಕಾರ್ಯನಿರ್ವಾಹಕ ಅಭಿಯಂತರರು ಗ್ರಾ.ಕು.ನೀ ಮತ್ತು ನೈರ್ಮಲ್ಯ ಇಲಾಖೆ ವಿಭಾಗ ಚಿಕ್ಕೋಡಿ ಪಾಂಡುರಂಗರಾವ್, ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಉಪ ವಿಭಾಗ ಅಥಣಿ ರವೀಂದ್ರ ಮುರಗಾಲಿ, ದೀಪಕ ಕಾಂಬಳೆ ಜಿಲ್ಲಾ ಯೋಜನಾ ವ್ಯವಸ್ಥಾಪಕರು ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ವಿಭಾಗ ಚಿಕ್ಕೋಡಿ ಹಾಗೂ ತಾಲ್ಲೂಕಿನ ಎಲ್ಲ ಹಿರಿಯ ಹಾಗೂ ಕಿರಿಯ ಅಭಿಯಂತರರು ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಉಪ ವಿಭಾಗ ಅಥಣಿ ಹಾಗೂ ಗ್ರಾಮ ಪಂಚಾಯತ ಅಭಿವೃದ್ಧಿ ಅಧಿಕಾರಿಗಳು, ಅಧ್ಯಕ್ಷರು, ಉಪಾಧ್ಯಕ್ಷರು

## ಕಾಲ್ತುಳಿತ ಪ್ರಕರಣ : ನ್ಯಾ.ಜಾನ್ ಮೈಕಲ್ ಕುನ್ಹಾ ಆಯೋಗದ ವರದಿಯ ಮೇಲೆ ಕ್ರಮವಹಿಸಲು ಸಚಿವ ಸಂಪುಟ ನಿರ್ಧಾರ



ಬೆಂಗಳೂರು: ಆರ್‌ಸಿಬಿ ಗೆಲುವಿನ ಸಂಭ್ರಮಾಚರಣೆ ವೇಳೆ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ನಡೆದ ಕಾಲ್ತುಳಿತ ಪ್ರಕರಣ ಸಂಬಂಧ ನ್ಯಾ.ಜಾನ್ ಮೈಕಲ್ ಕುನ್ಹಾ ವರದಿಯನ್ನು ಸಚಿವ ಸಂಪುಟ ಸಭೆ ಅಂಗೀಕರಿಸಿದ್ದು, ಈ ಬಗ್ಗೆ ಚರ್ಚಿಸಿ, ಕ್ರಮಗಳ ಕುರಿತು ಶೀಘ್ರದಲ್ಲಿಯೇ ನಿರ್ಧಾರ ಪ್ರಕಟಿಸಲಾಗುವುದು ಎಂದು ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಎಚ್.ಕೆ.ಪಾಟೀಲ್ ಹೇಳಿದ್ದಾರೆ.

ಗುರುವಾರ ವಿಧಾನಸೌಧದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅಧ್ಯಕ್ಷತೆಯಲ್ಲಿ ನಡೆದ ಸಚಿವ ಸಂಪುಟ ಸಭೆಯ ಬಳಿಕ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಜೂ.4ರಂದು ಆರ್‌ಸಿಬಿ ಕ್ರಿಕೆಟ್ ತಂಡದ ವಿಜಯೋತ್ಸವ ಸಮಾರಂಭದಲ್ಲಿ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಉಂಟಾದ ಕಾಲ್ತುಳಿತಕ್ಕೆ ಸಂಬಂಧಿಸಿದಂತೆ ಹೈಕೋರ್ಟಿನ ನಿವೃತ್ತ ನ್ಯಾಯಾಧೀಶ ಜಾನ್ ಮೈಕಲ್ ಕುನ್ಹಾ ಅವರ ನೇತೃತ್ವದ ಏಕ ಸದಸ್ಯ ವಿಚಾರಣಾ ಆಯೋಗದ ವರದಿಯ ಮೇಲೆ ಕ್ರಮವಹಿಸಲು ಸಚಿವ ಸಂಪುಟ ನಿರ್ಧರಿಸಿದೆ ಎಂದು ಹೇಳಿದರು.

ಕುನ್ಹಾ ಅವರ ಏಕಸದಸ್ಯ ಆಯೋಗ ನೀಡಿರುವ ತನಿಖಾ ವರದಿಯಲ್ಲಿ ಪೊಲೀಸ್ ಅಧಿಕಾರಿಗಳ ನಿರ್ಲಕ್ಷ್ಯ ಹಾಗೂ ಸಂಬಂಧಿಸಿದ ಪೊಲೀಸ್ ಅಧಿಕಾರಿಗಳ ವಿರುದ್ಧ ಕ್ರಮಕ್ಕೆ ವರದಿಯಲ್ಲೂ ಶಿಫಾರಸು ಮಾಡಲಾಗಿದೆ. ಈ ಬಗ್ಗೆ ಯಾವ ಕ್ರಮ ಕೈಗೊಳ್ಳಬೇಕೆಂದು ಚರ್ಚೆ ಮುಂದಿನ ಸಚಿವ ಸಂಪುಟ ಸಭೆಯಲ್ಲಿ ಪ್ರಕಟಿಸಲಾಗುವುದು ಎಂದರು.

## ಅಂಗನವಾಡಿಗಳಲ್ಲಿ ಪೂರ್ವ ಪ್ರಾಥಮಿಕ ತರಗತಿ : ಮಧು ಬಂಗಾರಪ್ಪ - ಲಕ್ಷ್ಮೀ ಹೆಬ್ಬಾಳಕರ್ ಚರ್ಚೆ

ಬೆಂಗಳೂರು : ಅಂಗನವಾಡಿ ಕೇಂದ್ರಗಳಲ್ಲಿ ಪೂರ್ವ ಪ್ರಾಥಮಿಕ ತರಗತಿಗಳನ್ನು ಆರಂಭಿಸುತ್ತಿರುವ ಹಿನ್ನೆಲೆಯಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವರಾದ ಲಕ್ಷ್ಮೀ ಹೆಬ್ಬಾಳಕರ್ ಅವರು ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರಾದ ಮಧು ಬಂಗಾರಪ್ಪ ಅವರೊಂದಿಗೆ ಗುರುವಾರ ಪೂರ್ವಭಾವಿ ಸಭೆ ನಡೆಸಿದರು. ವಿಧಾನಸೌಧದಲ್ಲಿ ನಡೆದ ಸಭೆಯಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ಶಿಕ್ಷಣ ಇಲಾಖೆ ಕೈಗೊಳ್ಳಬೇಕಾದ ಕ್ರಮಗಳ ಬಗ್ಗೆ ಚರ್ಚೆ ನಡೆಸಲಾಯಿತು. ಅಂಗನವಾಡಿಯಲ್ಲಿ ಆರಂಭಿಸಲಾಗುವ ಪೂರ್ವ ಪ್ರಾಥಮಿಕ ತರಗತಿಗಳಲ್ಲಿ ಚಿಲಿಪಿಲಿ 2.0 ಪಠ್ಯಕ್ರಮ ಆಳವಡಿಕೆ, ಶಿಕ್ಷಣ ಇಲಾಖೆಯ ಪೂರ್ವ ಪ್ರಾಥಮಿಕ ತರಗತಿಗಳಿಗೆ ಈಗಾಗಲೇ ದಾಖಲಾಗಿರುವ ಮಕ್ಕಳಿಗೆ ಪೂರಕ ಪೌಷ್ಠಿಕ ಆಹಾರ, ತೂಕ ಮತ್ತು ಅಳತೆ ಬಗ್ಗೆಯೂ ಗಮನಹರಿಸಬೇಕು ಎಂದು ಉಭಯ



ಸಚಿವರು ಚರ್ಚೆ ನಡೆಸಿದರು.

ಸಭೆಯಲ್ಲಿ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆಯ ಕಾರ್ಯದರ್ಶಿ ರಶ್ಮಿ ಮಹೇಶ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಕಾರ್ಯದರ್ಶಿ ಡಾ.ಶಾಮ್ಲಾ ಇಕ್ಬಾಲ್, ಇಬ್ಬರು ಸಚಿವರ ಆಪ್ತ ಕಾರ್ಯದರ್ಶಿಗಳಾದ ಡಾ.ಟಿ.ಎಚ್.ವಿಶ್ವನಾಥ್, ಕಿಶೋರ್ ಕುಮಾರ್, ವಿಶೇಷ ಕರ್ತವ್ಯಾಧಿಕಾರಿ ಬಿ.ಎಚ್.ನಿಶ್ಚಲ್ ಸೇರಿದಂತೆ ಎರಡು ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

## ಉಳ್ಳಾಲದಲ್ಲಿ ಅಲ್ಪಸಂಖ್ಯಾತರ ವಿದ್ಯಾರ್ಥಿನಿಯರಿಗಾಗಿ ವಸತಿ ಸಹಿತ ಕಾಲೇಜು ನಿರ್ಮಾಣಕ್ಕೆ ಸಚಿವ ಸಂಪುಟ ಒಪ್ಪಿಗೆ



ಬೆಂಗಳೂರು: ದಕ್ಷಿಣ ಕನ್ನಡ ಜಿಲ್ಲೆಯ ಉಳ್ಳಾಲದಲ್ಲಿ ಅಲ್ಪಸಂಖ್ಯಾತರ ವಿದ್ಯಾರ್ಥಿನಿಯರಿಗಾಗಿ ವಸತಿ ಸಹಿತ ಪಿಯು ಕಾಲೇಜು ನಿರ್ಮಾಣಕ್ಕೆ ರಾಜ್ಯ ಸಚಿವ ಸಂಪುಟ ಅನುಮೋದನೆ ನೀಡಿದೆ.

ಗುರುವಾರ ವಿಧಾನಸೌಧದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅಧ್ಯಕ್ಷತೆಯಲ್ಲಿ ನಡೆದ ಸಚಿವ ಸಂಪುಟ ಸಭೆಯ ಬಳಿಕ ನಡೆದ ಸುದ್ದಿಗೋಷ್ಠಿಯಲ್ಲಿ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಎಚ್.ಕೆ.ಪಾಟೀಲ್ ಸಚಿವ ಸಂಪುಟ ಸಭೆಯ ನಿರ್ಣಯಗಳನ್ನು ತಿಳಿಸಿದರು. ಪ್ರಸ್ತುತ ವಾರ್ಷಿಕ ಸಾಲಿನಲ್ಲಿ ದಕ್ಷಿಣ ಕನ್ನಡ ಜಿಲ್ಲೆಯ ಉಳ್ಳಾಲದಲ್ಲಿ ಅಲ್ಪಸಂಖ್ಯಾತರ ವಿದ್ಯಾರ್ಥಿನಿಯರಿಗಾಗಿ ವಸತಿ ಸಹಿತ ಪಿಯು ಕಾಲೇಜು 15 ಕೋಟಿಗಳ ವೆಚ್ಚದಲ್ಲಿ ನಿರ್ಮಾಣ ಮಾಡಲು ಹಾಗೂ ಆವರ್ತಕ ಹಾಗೂ ಅನಾವರ್ತಕ ವೆಚ್ಚ ರೂ. 2.09 ಕೋಟಿಗಳ ವೆಚ್ಚ ಸೇರಿ ಒಟ್ಟು ರೂ. 17.9 ಕೋಟಿಗಳ ವೆಚ್ಚವನ್ನು ಭರಿಸಲಾಗುವುದು ಎಂದರು. ಅಲ್ಪಸಂಖ್ಯಾತರ ವಿದ್ಯಾರ್ಥಿನಿಯರಿಗಾಗಿ ವಸತಿ ಸಹಿತ ಪಿಯು ಕಾಲೇಜು ಅನ್ನು ಪಿಸಿಎಂಬಿ, ಪಿಸಿಎಂಸಿ, ಸಿಇಬಿಎ ಮತ್ತು ಎಚ್‌ಇಪಿಎಸ್ ವಿಭಾಗಗಳಲ್ಲಿ ಒಟ್ಟು 400 ಸಂಖ್ಯಾಬಲದೊಂದಿಗೆ ಪ್ರಸಕ್ತ ಸಾಲಿನಿಂದ ಮಂಜೂರು ಮಾಡಿ ವಿವಿಧ ವೃಂದದ ಹುದ್ದೆಗಳನ್ನು ಸೃಜಿಸಿ ಪ್ರಾರಂಭಿಸಲು ಸಚಿವ ಸಂಪುಟ ನಿರ್ಣಯಿಸಿದೆ ಎಂದೂ ಅವರು ಉಲ್ಲೇಖಿಸಿದರು.

## ಮನೆ ಮನೆಗೆ ಪೊಲೀಸ್ ಎಂಬ ವಿನೂತನ ಕಾರ್ಯಕ್ರಮಕ್ಕೆ ಚಾಲನೆ

ಬಾಗಲಕೋಟೆ : : ಪೊಲೀಸ್ ಇಲಾಖೆಯಿಂದ ಸಾರ್ವಜನಿಕರ ಸುರಕ್ಷತೆಗಾಗಿ ರೂಪಿಸಲಾದ ಮನೆ ಮನೆಗೆ ಪೊಲೀಸ್ ಎಂಬ ವಿನೂತನ ಕಾರ್ಯಕ್ರಮಕ್ಕೆ ಜಿಲ್ಲೆಯಾದ್ಯಂತ ಬುಧವಾರ ಚಾಲನೆ ನೀಡಲಾಯಿತು. ರಾಜ್ಯದ ಗೃಹಮಂತ್ರಿಗಳ ಮಹತ್ವಾಕಾಂಕ್ಷಿ ಯೋಜನೆ ಇದಾಗಿದ್ದು, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳ ಮಾರ್ಗದರ್ಶನದಲ್ಲಿ ನಗರದ ದೀಪಂ ಕಾಲೋನಿ ಮತ್ತು ಮದಿನಾ ಕಾಲೋನಿಯಲ್ಲಿ ಮನೆ ಮನೆಗೆ ಪೊಲೀಸ್ ಕಾರ್ಯಕ್ರಮಕ್ಕೆ ಬಾಗಲಕೋಟೆ ಶಹರ ಪೊಲೀಸ್ ಠಾಣೆಯ ಪೊಲೀಸ್ ನಿರೀಕ್ಷಕರಾದ ಗುರುನಾಥ ಚವ್ಹಾಣ ಚಾಲನೆ ನೀಡಿದರು. ನಂತರ ಮಾತನಾಡಿದ ಅವರು ಸಾರ್ವಜನಿಕರಿಗೆ ಅತ್ಯುತ್ತಮ ಸೇವೆ ಒದಗಿಸುವ ಉದ್ದೇಶದಿಂದ ಇಂತಹದೊಂದು ವಿನೂತನ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಸೈಬರ್ ಅಪರಾಧ, ಕರ್ನಾಟಕ ಡ್ರಗ್ಸ್ ಫ್ರೀ ಆಪ್, ಬಾಲ್ಯವಿವಾಹ ನಿಷೇಧ ಕಾಯ್ದೆ, ಸಾಮಾಜಿಕ ಜಾಲ ತಾಣಗಳಲ್ಲಿ ಬರುವ ಸತ್ಯಾಸತ್ಯತೆ ಬಗ್ಗೆ, ದ್ವಿಚಕ್ರ ವಾಹನ ಸವಾರರು ಕಡ್ಡಾಯವಾಗಿ ಹೆಲ್ಮೆಟ್ ಧರಿಸುವುದು, ಕಾರಿನಲ್ಲಿ ಸಂಚರಿಸುವವರು ಸೀಟ್ ಬೆಲ್ಟ್ ಧರಿಸುವುದು ಸೇರಿದಂತೆ ಇತರೆ ಸುರಕ್ಷತಾ ಕ್ರಮಗಳ ಬಗ್ಗೆ ಜನರಲ್ಲಿ ಅರಿವು ಮೂಡಿಸುವ ಕಾರ್ಯ ಮಾಡಲಾಗುತ್ತದೆ



ಎಂದರು.

ಪುರಷ ಪೊಲೀಸ್ ಹಾಗೂ ಮಹಿಳಾ ಪೊಲೀಸ್ ಸಿಬ್ಬಂದಿಗಳು ಸೇರಿದ ತಂಡವು ಮನೆ ಮನೆಗೆ ತೆರಳಿ ಸಾರ್ವಜನಿಕರ ಸುರಕ್ಷತೆಗಾಗಿ ಕೈಗೊಂಡ ಕಾರ್ಯಕ್ರಮಗಳ ಬಗ್ಗೆ ಮಾಹಿತಿ ನೀಡಲಾಗುತ್ತದೆ. ಸಾರ್ವಜನಿಕರು ವಾಸಿಸುವ ಮನೆ ಮತ್ತು ವಾರ್ಡಗಳಲ್ಲಿ ಹೆಚ್ಚಿನ ಬದ್ರತೆಗಾಗಿ, ಸಿಸಿಟಿವಿ ಅಳವಡಿಸುವ ಕುರಿತು ಜನರಲ್ಲಿ ಜಾಗೃತಿ ಮೂಡಿಸುವದರ ಜೊತೆಗೆ ಸಾರ್ವಜನಿಕರಿಂದ ಅಹವಾಲುಗಳನ್ನು ಸ್ವೀಕರಿಸಿ ಸಣ್ಣಪುಟ್ಟ ಸಮಸ್ಯೆಗಳನ್ನು ಸ್ಥಳದಲ್ಲಿಯೇ ಪರಿಹಾರ ಕಂಡುಕೊಳ್ಳುವ ಕೆಲಸ ಮಾಡಲಾಗುತ್ತಿದೆ. ಜಿಲ್ಲಾ ಕಂಟ್ರೋಲ್ ರೂಮ್ ಸಿಪಿಐ, ಬಿಟಿ ಸಿಬ್ಬಂದಿಗಳ ಮೊಬೈಲ್ ನಂಬರಗಳನ್ನು ಸಾರ್ವಜನಿಕರಿಗೆ ಕೊಟ್ಟಿದ್ದು, ತುರ್ತು ಪರಿಸ್ಥಿತಿಯಲ್ಲಿ 112ಗೆ ಕರೆ ಮಾಡಲು ತಿಳಿಸಲಾಗಿದೆ ಎಂದರು.

ಕಾರ್ಯಕ್ರಮದಲ್ಲಿ ಪಿ.ಎಸ್.ಐಗಳಾದ ಆರ್. ಎಸ್.ದೊಡಮನಿ, ಜೆ.ವಾಯ್.ನಧಾಪ್, ಹೆಚ್ಚುವರಿ ಸಿಪಿಐಗಳಾದ ಬಿ.ಬಿ.ಕೊಳ್ಳಿ, ಶರಣೇಶ ಜಾಲಿಹಾಳ, ಎ.ಎಸ್.ಐರವರಾದ ಡಿ.ಡಿ.ದೂಳಖೇಡ, ಎಚ್.ಎಸ್.ಹೂಗಾರ, ಕೆ.ವಿ.ಗುಳಬಾಳ ಸೇರಿದಂತೆ ಇತರರು ಉಪಸ್ಥಿತರಿದ್ದರು.

## ಕುಂಟುತ್ತ ಸಾಗಿದೆ ಇ- ಖಾತಾ ಹಂಚಿಕೆ

ಬೆಂಗಳೂರು, ಜು.17– ನಗರದ ಎಲ್ಲಾ ನಿವೇಶನದಾರರಿಗೂ ಇ ಖಾತೆ ಹಂಚಿಕೆ ಮಾಡುವ ಭರವಸೆ ನೀಡಿದ್ದ ಸರ್ಕಾರದ ಯೋಜನೆ ಕುಂಟುತ್ತಾ ಸಾಗತೊಡಗಿದೆ.ಯೋಜನೆ ಸಾಕಾರಕ್ಕೆ ಬಿಬಿಎಂಪಿ ಕಂದಾಯ ಅಧಿಕಾರಿಗಳು ಸಹಕಾರ ನೀಡುತ್ತಿಲ್ಲ. ಹೀಗಾಗಿ ಪ್ರತಿನಿತ್ಯ ಬೆರಳೆಣಿಕಯ ಖಾತಾ ಹಂಚಿಕೆಯಾಗುತ್ತಿದೆ.

ಒಂದು ದಿನಕ್ಕೆ ಒಂದು ವಾರ್ಡ್‌ನಲ್ಲಿ ಕೇವಲ 8 ಇ ಖಾತ ಮಾತ್ರ ಹಂಚಿಕೆ ಮಾಡಲಾಗುತ್ತಿದೆ. ಒಟ್ಟು 225 ವಾರ್ಡ್ ನಲ್ಲಿ 1,800 ಇ ಖಾತೆ ಮಾತ್ರ ವಿತರಿಸಲಾಗುತ್ತಿದೆ.ಕಳೆದ ಹತ್ತು ತಿಂಗಳಿನಿಂದ ಬಿಬಿಎಂಪಿ ಹಂಚಿರೋದು 5 ಲಕ್ಷದ 84 ಸಾವಿರ ಇ ಖಾತ ಮಾತ್ರ.. ಒಟ್ಟು 20 ಲಕ್ಷದ 57 ಸಾವಿರ ಸ್ವತ್ತುಗಳು ಪಾಲಿಕೆಯ ಅಧಿಕೃತ ಪಟ್ಟಿಯಲ್ಲಿದೆ..ಈ ಪೈಕಿ ಇನ್ನೂ 15 ಲಕ್ಷಕ್ಕೂ ಅಧಿಕ ಸ್ವತ್ತುಗಳಿಗೆ ಇ ಖಾತ ನೀಡಲು ಬಾಕಿ ಇರುವುದನ್ನು ನೋಡಿದರೆ ಬಿಬಿಎಂಪಿ ಅಧಿಕಾರಿಗಳ ದಿವ್ಯ ನಿರ್ಲಕ್ಷ್ಯ ಎದ್ದು ಕಾಣುವಂತಾಗಿದೆ.

ಖಾತೆಗೆ ಜನ ಅರ್ಜಿ ಹಾಕಿದರೂ ಇ ಖಾತ ನೀಡದೆ ಬಿಬಿಎಂಪಿ ಅಧಿಕಾರಿಗಳು ವಿಳಂಬ ಧೋರಣೆ ಅನುಸರಿಸುತ್ತಿದ್ದಾರೆ.ಈ ಧೋರಣೆಯಿಂದ ಸ್ವತ್ತಿನ ಖಾತೆದಾರರಲ್ಲಿ ಆತಂಕ ಮನೆ ಮಾಡುವಂತಾಗಿದೆ.ಸರಿಯಾದ ಸಮಯಕ್ಕೆ ಇ ಖಾತ ಸಿಗದೆ ತಮ ಆಸ್ತಿಯನ್ನು ಮಾರಾಟ ಮಾಡಲು ಇಲ್ಲವೆ ವರ್ಗಾವಣೆ ಮಾಡಲು ಸಾಧ್ಯವಾಗದೆ ಜನ ಪರಿತಪಿಸುವಂತಾಗಿದೆ.

## ವೈದ್ಯರೇ ಇಲ್ಲದ ತಾಲೂಕಾಸ್ಪತ್ರೆ ಆಸ್ಪತ್ರೆ : 30 ಹಾಸಿಗೆಯಿದ್ದ ಆಸ್ಪತ್ರೆ ಇದೀಗ 20ಕ್ಕೆ ಕುಸಿತ

# ರೋಗಿಗಳ ಯಮಯಾತನೆ ಕೇಳೋರಿಲ್ಲ

**ವರದಿ–ಮಲ್ಲಿಕಾರ್ಜುನ ತುಂಗಳ**

ರಬಕವಿ–ಬನಹಟ್ಟಿ,ಜು17: ಲಕ್ಷಕ್ಕೂ ಅಧಿಕ ಜನಸಾಂದ್ರತೆ ಹೊಂದಿರುವ ರಬಕವಿ–ಬನಹಟ್ಟಿ ಸಮುದಾಯ ಆರೋಗ್ಯ ಕೇಂದ್ರವು ರೋಗಿಗಳಿಗೆ ವರವಾಗುವ ಬದಲು ಮಾರಕವಾಗುವಲ್ಲಿ ಕಾರಣವಾಗಿದೆ.

ಕಳೆದ 15 ದಿನಗಳಿಂದ ತಜ್ಞ ವೈದ್ಯರಿಲ್ಲದೆ ಸಾರ್ವಜನಿಕರು ತೀವ್ರ ಸಂಕಷ್ಟ ಎದುರಿಸುವಲ್ಲಿ ಕಾರಣವಾಗಿದೆ. ಮೂವರು ವೈದ್ಯರನ್ನು ವರ್ಗಾವಣೆ ಮಾಡಿದ್ದು, ಹೊಸದಾಗಿ ವೈದ್ಯರು ಬಾರದ ಕಾರಣ ಆಸ್ಪತ್ರೆಯಲ್ಲಿ ರೋಗಿಗಳ ಯಮಯಾತನೆ ಹೇಳತೀರದು.

ತಾಲೂಕಿನಲ್ಲಿ ನೇಕಾರರು, ಕೂಲಿಕಾರ್ಮಿಕರು, ತೀರ ಬಡವರು ಇದ್ದಾರೆ. ಮುಖ್ಯ ವೈದ್ಯಾಧಿಕಾರಿ ಸೇರಿ 8 ಜನ ತಜ್ಞ ವೈದ್ಯರು ಬೆಕು. ಆಸ್ಪತ್ರೆಯಲ್ಲಿ ಎಲ್ಲ ಹುದ್ದೆಗಳು ಖಾಲಿ ಇವೆ. ಆಸ್ಪತ್ರೆ ಮುಖ್ಯ ವೈದ್ಯಾಧಿಕಾರಿ ಹುದ್ದೆಯೂ ಭರ್ತಿಯಾಗದಿರುವದು ವಿಪರ್ಯಾಸ.

ಸರ್ಕಾರಿ ಆಸ್ಪತ್ರೆ ನಂಬಿಕೊಂಡಿರುವ ಬಡ ಕುಟುಂಬಗಳು ತುರ್ತು ಚಿಕಿತ್ಸೆಗಾಗಿ ಆಸ್ಪತ್ರೆಗೆ ಬಂದರೆ ವೈದ್ಯರಿಲ್ಲದಿರುವದರಿಂದ ಅನಿವಾರ್ಯವಾಗಿ ಸಾಲ–ಶೂಲ ಮಾಡಿಕೊಂಡು ಖಾಸಗಿ ಆಸ್ಪತ್ರೆಗಳಿಗೆ ತೆರಳಬೇಕಾದ ದುಸ್ಥಿತಿ. ನಾಯಿ, ಹಾವು ಕಚ್ಚಿದರೆ ಮುಖ್ಯವಾಗಿ ಅಪಘಾತವಾದರೂ



ಆಸ್ಪತ್ರೆಗೆ ತುರ್ತು ಚಿಕಿತ್ಸೆಗೆಂದು ಭಯಾನಕ ಸ್ಥಿತಿ ಎದುರಾಗಿದೆ.

ಹೊರರೋಗಿಗಳ ಸಂಖ್ಯೆ ಅಧಿಕ: ದಿನಂಪ್ರತಿ 300 ರಿಂದ 400 ವರೆಗೆ ಹೊರರೋಗಿಗಳ ತಪಾಸಣೆ ನಡೆಯುತ್ತದೆ. ಕಳೆದ 15 ದಿನಗಳಿಂದ ಕೇವಲ ಒಬ್ಬರೇ ಅದೂ ಗುತ್ತಿಗೆಯಿಂದ ವೈದ್ಯಕೀಯ ಸೇವೆ ಸಲ್ಲಿಸುತ್ತಿರುವ ಅರಳಿಕೆ ತಜ್ಞರು ಚಿಕಿತ್ಸೆ ನೀಡುತ್ತಿದ್ದಾರೆ. ಪ್ರತಿ ದಿನ ಬರುವ ರೋಗಿಗಳ ಚಿಕಿತ್ಸೆ ನಡೆಸಿ ವೈದ್ಯರೂ ಸಹಿತ ಅನಾರೋಗ್ಯಕ್ಕೆ ತುತ್ತಾಗುತ್ತಿರುವ ಪ್ರಸಂಗ ನಡೆಯುತ್ತಿದೆ.

ನೂರಾರು ರೋಗಿಗಳು ಆಸ್ಪತ್ರೆಗೆ ಬರುವಲ್ಲಿ ಸುಮಾರು 15 ರಿಂದ 20 ರೋಗಿಗಳು ಆಸ್ಪತ್ರೆ ಒಳರೋಗಿಗಳಾಗುತ್ತಿದ್ದಾರೆ. ಇತ್ತ ಹಾಸಿಗೆಗಳ ಕೊರತೆ ಎದ್ದು ಕಾಣುತ್ತಿರುವದರಿಂದ ನಿನ್ನೆ, ಮೊನ್ನೆ ಚಿಕಿತ್ಸೆ ಪಡೆಯುತ್ತಿರುವ ರೋಗಿಗಳಿಗೆ ಅರ್ಧಮರ್ಧ ಚಿಕಿತ್ಸೆ ನೀಡಿ ಮನೆಗೆ ಕಳಿಸುವ ವ್ಯವಸ್ಥೆ ನಡೆಯುತ್ತಿದೆ.

20 ಹಾಸಿಗೆ ಮಾತ್ರ: ತಾಲೂಕಾ ಕೇಂದ್ರವಾಗಿರುವ ರಬಕವಿ–ಬನಹಟ್ಟಿ ಸರ್ಕಾರಿ ಆಸ್ಪತ್ರೆಯನ್ನು ಮೇಲ್ದರ್ಜೆಗೇರಿಸಬೇಕೆಂಬ ಕೂಗು ಕಳೆದೆರಡು ದಶಕಗಳಿಂದ ಮರಿಚೀಕೆಯಾಗಿದೆ. ಇದೀಗ ಡಯಾಲಿಸಸ್ ಕೇಂದ್ರ ಪ್ರಾರಂಭವಾಗಿದ್ದು, 30 ಹಾಸಿಗೆಗಳಲ್ಲಿ ಚಿಕಿತ್ಸೆ ಪಡೆಯುತ್ತಿದ್ದು 20 ಕ್ಕೆ ಕುಸಿತ ಕಂಡು ಇನ್ನುಳಿದ 10 ಹಾಸಿಗೆಗಳನ್ನು ಡಯಾಲಿಸಸ್ ರೋಗಿಗಳಿಗೆ ಮೀಸಲಿರಿಸಲು ಕಾರಣವಾಗಿದೆ.

ಹೀಗಾಗಿ ಕೆಲ ರೋಗಿಗಳನ್ನು ನೆಲಕ್ಕೆ ಮಲಗಿಸಿದರೆ, ಇನ್ನೂ ಕೆಲ ರೋಗಿಗಳನ್ನು ಒಂದೇ ಹಾಸಿಗೆಯಲ್ಲಿ ಇಬ್ಬರು ಮೂವರಂತೆ ಚಿಕಿತ್ಸೆ ನೀಡಲಾಗುತ್ತಿದೆ.

> 'ಸರ್ಕಾರದ ನಿಯಮದಂತೆ ವೈದ್ಯರ ವರ್ಗಾವಣೆ ಸಹಜ. ವಾರದೊಳಗೆ ವೈದ್ಯರ ನೇಮಕಾತಿ ನಡೆಯಬೇಕಿತ್ತು. ಕೊಂಚ ವಿಳಂಬವಾಗಿದೆ. ಶೀಘ್ರವೇ ವೈದ್ಯರ ನೇಮಕ ನಡೆಯಲಿದೆ.'
>
> **–ಸಿದ್ದು ಸವದಿ, ಶಾಸಕರು, ತೇರದಾಳ.**

ಸದ್ಯ ಸ್ತ್ರೀರೋಗ, ಚಿಕ್ಕ ಮಕ್ಕಳ ಹಾಗು ಸಾಮಾನ್ಯ ಚಿಕಿತ್ಸೆಗೆಂದು ಆಗಮಿಸುತ್ತಿರುವ ನೂರಾರು ರೋಗಿಗಳ ಗೋಳು ಹೇಳತೀರದಾಗಿದೆ.

ಸರ್ಕಾರ ಹಾಗು ಸಂಬಂಧಿಸಿದ ಅಧಿಕಾರಿಗಳು ತಕ್ಷಣವೇ ತಜ್ಞ ವೈದ್ಯರನ್ನು ನೇಮಕ ಮಾಡುವದರೊಂದಿಗೆ ದಿನಂಪ್ರತಿ ಆಗಮಿಸುವ ನೂರಾರು ರೋಗಿಗಳಿಗೆ ಸೂಕ್ತ ವ್ಯವಸ್ಥೆ ಕಲ್ಪಿಸಬೇಕಾದ ಅನಿವಾರ್ಯತೆಯಿದೆ.

## ರಾಜ್ಯದಲ್ಲಿ 'ಪರಮಾಣು ವಿದ್ಯುತ್ ಸ್ಥಾವರ' ಸ್ಥಾಪನೆಗೆ ಸಂಪುಟ ತಾತ್ವಿಕ ಅನುಮೋದನೆ

ಬೆಂಗಳೂರು: ರಾಜ್ಯದಲ್ಲಿ ಪರಮಾಣು ವಿದ್ಯುತ್ ಸ್ಥಾವರ ಸ್ಥಾಪಿಸಲು ಸಚಿವ ಸಂಪುಟ ಸಭೆ ತಾತ್ವಿಕ ಅನುಮೋದನೆ ನೀಡಿದೆ ಎಂದು ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಎಚ್.ಕೆ. ಪಾಟೀಲ್ ತಿಳಿಸಿದರು.

ಗುರುವಾರ ವಿಧಾನಸೌಧದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅಧ್ಯಕ್ಷತೆಯಲ್ಲಿ ನಡೆದ ಸಚಿವ ಸಂಪುಟ ಸಭೆಯ ಬಳಿಕ ಸುದ್ದಿಗೋಷ್ಠಿಯಲ್ಲಿ ಅವರು ಮಾತನಾಡಿದರು.

ಪರಮಾಣು ವಿದ್ಯುತ್ ಸ್ಥಾವರ ಸ್ಥಾಪಿಸಲು ತಾತ್ವಿಕ ಅನುಮೋದನೆ ಸಿಕ್ಕಿರುವುದರಿಂದ, ಎನ್‌ಟಿಪಿಸಿ ಸಂಸ್ಥೆಯು ಕರ್ನಾಟಕದಲ್ಲಿ ಪರಮಾಣು ವಿದ್ಯುತ್ ಸ್ಥಾಪನೆಗೆ ಗುರುತಿಸಿರುವ ಸಂಭಾವ್ಯ ಸ್ಥಳಗಳಲ್ಲಿ ಪ್ರಾಥಮಿಕ ಅಧ್ಯಯನ ನಡೆಸಲು ಅನುಮತಿ ನೀಡಲು ಸಚಿವ ಸಂಪುಟದಲ್ಲಿ ನಿರ್ಣಯ ಕೈಗೊಳ್ಳಲಾಗಿದೆ ಎಂದು ಅವರು ಹೇಳಿದರು.

ಅದೇ ರೀತಿ, ರಾಯಚೂರು ತಾಲೂಕಿನಲ್ಲಿ ನೂತನ ಜವಳಿ ಪಾರ್ಕ್ ಅನ್ನು ಸಾರ್ವಜನಿಕ ಖಾಸಗಿ ಸಹಭಾಗಿತ್ವ(ಪಿಪಿಪಿ) ಮಾದರಿಯಲ್ಲಿ ಒಟ್ಟು 24.50 ಕೋಟಿ ರೂ.ಗಳ ಮೊತ್ತದಲ್ಲಿ ಅಭಿವೃದ್ಧಿಪಡಿಸಲು ಹಾಗೂ ಆಯುಷ್ ಇಲಾಖೆಯ ಆಯುರ್ವೇದ, ಸಿದ್ದ ಮತ್ತು ಯುನಾನಿ ಔಷಧಗಳ ಅಮಲುಜಾರಿ ವಿಭಾಗ ಹಾಗೂ ಪರೀಕ್ಷಾ ಪ್ರಯೋಗಾಲಯವನ್ನು ಆಹಾರ ಸುರಕ್ಷತೆ ಮತ್ತು ಔಷಧ ಆಡಳಿತ ಇಲಾಖೆಯ ಜೊತೆಗೆ ವಿಲೀನಗೊಳಿಸಲು ನಿರ್ಣಯ ಕೈಗೊಳ್ಳಲಾಗಿದೆ ಎಂದು ಅವರು ಹೇಳಿದರು. ಹಾನಗಲ್ ತಾಲೂಕಿನ ಯಳವಟ್ಟಿ ಗ್ರಾಮದಲ್ಲಿ 28.3 ಎಕರೆ ಪ್ರದೇಶದಲ್ಲಿ ಮಾವು ಮತ್ತು ಇತರೆ ತೋಟಗಾರಿಕೆ ಬೆಳೆಗಳ ಬಹು ಉತ್ಪನ್ನಗಳ ನಿರ್ವಹಣೆ, ಸಂಗ್ರಹಣೆ, ಸಂಸ್ಕರಣೆ ಮತ್ತು ಸಂರಕ್ಷಣಾ ಘಟಕವನ್ನು ಸಾರ್ವಜನಿಕ ಖಾಸಗಿ ಸಹಭಾಗಿತ್ವದಲ್ಲಿ 35.07 ಕೋಟಿ ರೂ.ಗಳ ಮೊತ್ತದಲ್ಲಿ 'ಫುಡ್ ಪಾರ್ಕ್' ಸ್ಥಾಪಿಸಲು ಅನುಮೋದನೆ ನೀಡಲಾಗಿದೆ ಎಂದು ಎಚ್.ಕೆ.ಪಾಟೀಲ್ ತಿಳಿಸಿದರು.

ಕನಕಗಿರಿ ತಾಲೂಕಿನ ಸಿರಿವಾರ ಗ್ರಾಮದ ಪರಂಪೋಕದಲ್ಲಿ ತೋಟಗಾರಿಕೆ ತಂತ್ರಜ್ಞಾನ ಪಾರ್ಕ್ ಅನ್ನು ಸಾರ್ವಜನಿಕ ಖಾಸಗಿ ಸಹಭಾಗಿತ್ವ ಮಾದರಿಯಡಿ 83.79 ಕೋಟಿ ರೂ. ಅಂದಾಜು ವೆಚ್ಚದಲ್ಲಿ ಸ್ಥಾಪಿಸಲಾಗುವುದು. ಜತೆಗೆ, ಚಿಕ್ಕಬಳ್ಳಾಪುರದ ಮಂಡಿಕಲ್ಲು ಹೋಬಳಿ ಯರಮಾರೇನಹಳ್ಳಿ ಗ್ರಾಮದಲ್ಲಿ 5.23 ಎಕರೆ ಭೂಮಿ ಅಕ್ಷಯ ಪಾತ್ರೆ ಅಡುಗೆ ಮನೆ ಮತ್ತು ಆರ್ಥಿಕ ಹಾಗೂ ಸಾಮಾಜಿಕವಾಗಿ ಹಿಂದುಳಿದ ಗ್ರಾಮೀಣ ಮಕ್ಕಳಿಗೆ ಶಾಲಾ ಕಟ್ಟಡ ನಿರ್ಮಾಣಕ್ಕಾಗಿ ಇಸ್ಕಾನ್‌ಗೆ ಮಂಜೂರು ಮಾಡಲಾಗಿದೆ ಎಂದು ಅವರು ವಿವರಿಸಿದರು.

ರಾಜ್ಯ ನೈಸರ್ಗಿಕ ವಿಕೋಪ ಉಸ್ತುವಾರಿ ಕೇಂದ್ರದ ವತಿಯಿಂದ ರಾಜ್ಯದಲ್ಲಿ ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಅಳವಡಿಸಲಾಗಿರುವ ಸಮರ್ಪಕವಾಗಿ ಕಾರ್ಯ ನಿರ್ವಹಿಸದ 1,530 ಟೆಲಿಮೆಟ್ರಿಕ್ ಮಳೆ ಮಾಪನ ಕೇಂದ್ರಗಳ ಉಪಕರಣಗಳನ್ನು 19.89 ಕೋಟಿ ರೂ. ಅಂದಾಜು ಮೊತ್ತದಲ್ಲಿ ಬದಲಿಸಿ ಹೊಸದಾಗಿ ಸ್ಥಾಪಿಸಲು ಸಚಿವ ಸಂಪುಟ ಅನುಮೋದನೆ ನೀಡಿದೆ ಎಂದು ಎಚ್.ಕೆ.ಪಾಟೀಲ್ ಹೇಳಿದರು.

ಮೈಸೂರು ವಿಶ್ವವಿದ್ಯಾಲಯದಲ್ಲಿ ಡಾ.ಬಿ.ಆರ್.ಅಂಬೇಡ್ಕರ್ ಸಂವಿಧಾನ ಪೀಠವನ್ನು 10 ಕೋಟಿ ರೂ.ಗಳ ಅಂದಾಜು ಮೊತ್ತದಲ್ಲಿ ಸ್ಥಾಪಿಸಲು ಅನುಮೋದನೆ ನೀಡಲಾಗಿದೆ ಎಂದ ಅವರು, ಉತ್ತರ ಕರ್ನಾಟಕ ಪ್ರವಾಸಿ ವೃತ್ತವನ್ನು ಸಾರ್ವಜನಿಕ ಖಾಸಗಿ ಸಹಭಾಗಿತ್ವದಲ್ಲಿ 166.22 ಕೋಟಿ ರೂ. ಮೊತ್ತದಲ್ಲಿ ಅಭಿವೃದ್ಧಿಪಡಿಸಲು ನಿರ್ಧರಿಸಲಾಗಿದೆ ಎಂದು ಹೇಳಿದರು.

ಗ್ರೇಟರ್ ಬೆಂಗಳೂರು ಪ್ರಾಧಿಕಾರ ವ್ಯಾಪ್ತಿಯಲ್ಲಿನ ಆಸ್ತಿಗಳಿಗೆ ಎ ಮತ್ತು ಬಿ ಖಾತಾ ನೀಡುವುದನ್ನು ನಿಯಂತ್ರಿಸಲು ನಿರ್ಣಯ ಕೈಗೊಳ್ಳಲಾಗಿದೆ. ಅದೇ ರೀತಿ, ಅಂತರ್ಜಲ ಬಳಕೆಗೆ ನಿರಾಕ್ಷೇಪಣಾ ನೀಡುವ ಸಂಬಂಧ ಕೇಂದ್ರಿಯ ಅಂತರ್ಜಲ ಪ್ರಾಧಿಕಾರ ಹೊರಡಿಸಿರುವ ಮಾರ್ಗಸೂಚಿಯನ್ನು ಸೂಕ್ತ ಮಾರ್ಪಾಡುಗಳೊಂದಿಗೆ ರಾಜ್ಯದಲ್ಲಿ ಜಾರಿಗೊಳಿಸಲು ಸಚಿವ ಸಂಪುಟ ಒಪ್ಪಿಗೆ ನೀಡಿದೆ ಎಂದು ಅವರು ಉಲ್ಲೇಖಿಸಿದರು.

ಚಿಕ್ಕಮಗಳೂರು ಜಿಲ್ಲೆ ನರಸಿಂಹರಾಜಪುರ ಪಟ್ಟಣದ ರಸ್ತೆಯನ್ನು 60 ಕೋಟಿ ರೂ. ಮೊತ್ತದಲ್ಲಿ ಅಗಲೀಕರಣ ಮಾಡುವ ಕಾಮಗಾರಿಗಳನ್ನು ಕೈಗೊಳ್ಳಲಾಗುವುದು. ಯಲಬುರ್ಗಾ ತಾಲೂಕು ಪ್ರಜಾಸೌಧ ಕಟ್ಟಡ ಕಾಮಗಾರಿಗೆ 16 ಕೋಟಿ ರೂ.ಅನುಮೋದನೆ, ಕೋಲಾರ ಜಿಲ್ಲೆಯ ಏತ ನೀರಾವರಿ ಯೋಜನೆಯ ಕಾಮಗಾರಿಯ 5 ವರ್ಷಗಳ ಪೋಷಣೆ ಮತ್ತು ನಿರ್ವಹಣೆ ಕಾಮಗಾರಿಗೆ 128 ಕೋಟಿ ರೂ. ಮೊತ್ತದಲ್ಲಿ ಕೈಗೊಳ್ಳಲು ಆಡಳಿತಾತ್ಮಕ ಅನುಮೋದನೆ ನೀಡಲಾಗಿದಿದೆ ಎಂದು ಎಚ್.ಕೆ.ಪಾಟೀಲ್ ಹೇಳಿದರು.

ಕಿತ್ತೂರು ಕೋಟೆ ಆವರಣದಲ್ಲಿ 30 ಕೋಟಿ ರೂ. ವೆಚ್ಚದ ಥೀಮ್ ಪಾರ್ಕ್ ನಿರ್ಮಾಣ ಹಾಗೂ ಕುಶಾಲನಗರದ ಹುಲುಗುಂದ ಗ್ರಾಮದ ಬಳಿ ಕಮಾನು ಸೇತುವೆಯನ್ನು 36.50 ಕೋಟಿ ರೂ. ಮೊತ್ತದಲ್ಲಿ ನಿರ್ಮಿಸಲು, ಹೇಮಾವತಿ ಯೋಜನೆಯಡಿಯಲ್ಲಿನ ನಾಗಮಂಗಲ ಶಾಖಾ ನಾಲೆಯ ಸರಪಳಿ ಅಭಿವೃದ್ಧಿಪಡಿಸುವ 560 ಕೋಟಿ ರೂ.ಗಳ ಮೊತ್ತದ ಕಾಮಗಾರಿಗಳಿಗೆ ಸಚಿವ ಸಂಪುಟ ಅನುಮೋದನೆ ನೀಡಿದೆ ಎಂದು ಅವರು ಮಾಹಿತಿ ನೀಡಿದರು.


# ಹಸಿರು ಸೇನೆ ಜಿಲ್ಲಾ ಅಧ್ಯಕ್ಷರಾಗಿ ಲವಾ ಕುಡ್ಡೆಮ್ಮಿ ಆಯ್ಕೆ



ಘಟಪ್ರಭಾ: ರೈತ ಸಂಘ ಹಸಿರು ಸೇನೆ (ಅಹಿಂದ) ಬೆಳಗಾವಿ ಜಿಲ್ಲಾ ಘಟಕದ ಅಧ್ಯಕ್ಷರಾಗಿ ಲವಾ ಗೋವಿಂದ ಕುಡ್ಡೆಮ್ಮಿ ಅವರು ಆಯ್ಕೆ ಮಾಡಲಾಗಿದೆ. ಅವರ ಆಯ್ಕೆಯನ್ನು ರಾಜ್ಯಾಧ್ಯಕ್ಷ ಗುರುನಾಥ ಹೆಗಡೆ ಮತ್ತು ಮಹಿಳಾ ರಾಜ್ಯಾಧ್ಯಕ್ಷರಾದ ಶ್ರೀಮತಿ ಸರೋಜಿನಿ ತುಳಸಿಗೇರಿ ಅವರನ್ನು ಘಟಪ್ರಭಾದ ಮುಗಳಖೋಡ ಶಾಖಾ ಮಠದಲ್ಲಿ ನಡೆದ ಕಾರ್ಯಕ್ರಮದಲ್ಲಿ ಘೋಷಣೆ ಮಾಡಲಾಯಿತು. ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದ ಸಾಮಾಜಿಕ ಕಾರ್ಯಕರ್ತ ಶ್ರೀಕಾಂತ ವಿ ಮಹಾಜನ, ಸಮತಾ ಸೈನಿಕ ದಳದ ಬೆಳಗಾವಿ ಜಿಲ್ಲೆಯ ಮುಖಂಡರಾದ ಕೃಷ್ಣಾ ಗಂಡವ್ವಗೋಳ, ಲವಾ ಕುಡ್ಡೆಮ್ಮಿ ಅವ–ರಿಗೆ ಹಾಗೂ ಸಂಘಟನೆಯ ಸರ್ವ ಸದಸ್ಯರಿಗೆ ಶುಭ ಕೋರಿದರು.

ಬೆಳಗಾವಿ ಜಿಲ್ಲೆಯ ಅಹಿಂದ ಸಂಘಟನೆಯ ಬೆಳಗಾವಿ ಜಿಲ್ಲೆಯ ಅಧ್ಯಕ್ಷರಾದ ಬಾಳೇಶ ಮುನ್ನೊಳಿ, ಗೋಕಾಕ ತಾಲೂಕು ಅಧ್ಯಕ್ಷ ಪ್ರಕಾಶ ಬಿರನಾಳೆ ಸೇರಿದಂತೆ ರಾಯಬಾಗ, ಚಿಕ್ಕೋಡಿ ಅಥಣಿ, ಗೋಕಾಕ, ಬೆಳಗಾವಿ ಸೇರಿದಂತೆ ರೈತರು, ಹಾಗೂ ನಾಗರೀಕರು ಭಾಗವಹಿಸಿದ್ದರು.

# ಐನಾಪೂರದಲ್ಲಿ ವಾಲ್ಮೀಕಿ ಸಮುದಾಯ ಭವನ ನಿರ್ಮಾಣಕ್ಕೆ ಭೂದಾನ ಮಾಡಿದ ದಾನಿಗೆ ಸನ್ಮಾನ



ಮೋಳೆ:–ಕ್ಷೇತ್ರದ ಸರ್ವಾಂಗೀಣ ಅಭಿವೃದ್ಧಿಗೆ ಮುಖ್ಯಮಂತ್ರಿಗಳು ಮತ್ತೇ 50 ಕೋಟಿ ರೂ ಅನುದಾನ ನೀಡಲಿದ್ದು,ಗ್ರಾಮೀಣ ಭಾಗದ ರೈತರ ತೋಟ ಪಟ್ಟಿಗಳಿಗೆ ಹೋಗಿ ಬರಲು ಎಲ್ಲ ಒಳ ರಸ್ತೆಗಳನ್ನು ನಿರ್ಮಿಸಲಾಗುವುದೆಂದು ಕಾಗವಾಡ ಶಾಸಕ ರಾಜು ಕಾಗೆ ಹೇಳಿದರು.

ಅವರು ಗುರುವಾರ ರಂದು ಕಾಗವಾಡ ತಾಲ್ಲೂಕಿನ ಐನಾಪೂರ ಪಟ್ಟಣದ ಪದ್ಮಾವತಿ ಸಮುದಾಯ ಭವನ,ವಾಲ್ಮೀಕಿ ಸಮುದಾಯ ಭವನ, ಮೋಳೆ ಗ್ರಾಮದ ಕೋಳೆಕರ ಓಣಿಯ ಸಮುದಾಯ ಭವನ,ಹಾಗೂ ಶಿವ ಬಸವ ಭಜನಾ ಮಂಡಳದ ಸಮುದಾಯ ಭನವಗಳ ಕಾ ಮಗಾರಿಗಳಿಗೆ ಅಡಿಗಲ್ಲು ಸಮಾರಂಭ ನೆರವೇರಿಸಿ ಮಾತನಾಡುತ್ತಿದ್ದರು.

ಸಮುದಾಯ ಭವನಗಳು ಕೇವಲ ಜಾತ್ರೆ ಧಾರ್ಮಿಕ ಕಾರ್ಯಕ್ರಮಕ್ಕೆ ಸಿಮೀತವಾಗದೆ ಧಾರ್ಮಿಕ ಚಟುವಟಿಕೆ ಜೋತೆಗೆ ಆಯಾ ಸಮುದಾಯದ ಮಹಿಳೆಯರ ಆರ್ಥಿಕ ಸಾವಲಂಬನೆಗಾಗಿ ಸ್ವಯಂ ಉದ್ಯೋಗ ಶಿಬಿರಗಳನ್ನು ಹಮ್ಮಿಕೊಂಡು ಸಮಾಜದ ಸರ್ವಾಂಗೀಣ ಅಭಿವೃದ್ಧಿಗೆ ವೇದಿಕೆ ಆಗಬೇಕು ಎಂದು ಶಾಸಕ ರಾಜು ಕಾಗೆ ಹೇಳಿದರು.

ಸಮುದಾಯ ಭವನಗಳಿಗೆ ತಲಾ ಇಪ್ಪತ್ತು ಲಕ್ಷ ರೂಪಾಯಿಗಳಂತೆ ಪಂಚಾಯತ ರಾಜ್ಯ ಇಲಾಖೆ ವತಿಯಿಂದ ಮಂಜೂರಾದ ನಾಲ್ಕು ಸಮುದಾಯ ಭವನಗಳ ಕಾಮಗಾರಿಗಳಿಗೆ ಭೂಮಿ ಪೂಜೆ ಸಲ್ಲಿಸಿ

ಮಾತನಾಡಿ ಕಳೆದ ಸುಮಾರು ಮೂವತ್ತು ವರ್ಷಗಳಲ್ಲಿ ಶಾಸಕನಾಗಿ ಕ್ಷೇತ್ರದಲ್ಲಿ ಸುಮಾರು ಒಂದು ಸಾವಿರಕ್ಕೂ ಹೆಚ್ಚು ಸಮುದಾಯ ಭವನಗಳ ನಿರ್ಮಾಣ ಮಾಡಿದ್ದೇನೆ ಇನ್ನು ಸುಮಾರು ಸಮುದಾಯ ಭವನಗಳ ಬೇಡಿಕೆ ಇದ್ದು ಹಂತ ಹಂತವಾಗಿ ಅವುಗಳನ್ನು ಪೂರ್ಣಗೊಳಿಸಲಾಗುವುದು,ಮುಖ್ಯಮಂತ್ರಿ ಸಿದ್ದರಾಮಯ್ಯನವರು ಪ್ರತಿ ಕ್ಷೇತ್ರಕ್ಕೆ ಹೆಚ್ಚುವರಿಯಾಗಿ 50 ಕೋಟಿ ಅನುದಾನ ನೀಡುವವರಿದ್ದು ಅದರಲ್ಲಿ ರೈತರು ಬೆಳೆದ ಬೆಳಗಳನ್ನು ಸಾಗಿಸಲು ಅನುಕೂಲವಾಗಲು ಗ್ರಾಮೀಣ ಭಾಗದ ರಸ್ತೆ ಅವಶ್ಯಕ ಇದ್ದು ಅವುಗಳನ್ನು ಅಭಿವೃದ್ಧಿ ಪಡಿಸಲಾಗುವುದು ಎಂದು ಹೇಳಿದರು. ಈ ವೇಳೆ ವಾಲ್ಮೀಕಿ ಸಮುದಾಯ ಭವನಕ್ಕೆ ಭೂ ದಾನ ನೀಡಿದ ಸಿದರಾಮ ಕುಡಚಿ ಇವರಿಗೆ ಶಾಸಕ ರಾಜು ಕಾಗೆ ಸನ್ಮಾನಿಸಿದರು.

ಈ ವೇಳೆ ಇಂಜಿನಿಯರ್ ಮಡಿವಾಳ ಪಾಟೀಲ, ಪಟ್ಟಣ ಪಂಚಾಯತ್ ಮಾಜಿ ಅಧ್ಯಕ್ಷೆ ಸರೋಜನಿ ಗಾಣಿಗೇರ, ಮುಖಂಡರಾದ ಪ್ರವೀಣ ಗಾಣಿಗೇರ, ಅರುಣ ಗಾಣಿಗೇರ, ಸಂಜಯ ಬಿರಡಿ, ಸುರೇಶ ಗಾಣಿಗೇರ,ಪಚಮನರಾವ್ ಪಾಟೀಲ. ಅಪ್ಪಾಸಾಬ ಚೌಗಲಾ,ಅನುಪ ಶೆಟ್ಟಿ,ರಾಜು ಹಂಚ್ಚಿಬಟ್ಟಿ,ಪ್ರಕಾಶ ಕೋರ್ಬು,ಡಾ.ಅರವಿಂದರಾವ್ ಕಾರ್ಚಿ,ಅನೀಲಕುಮಾರ ಸತ್ತಿ,ಸುರೇಶ ಅಡಿಸೇ–ರಿ,ಮಹೇಶ ಸೊಲ್ಲಾಪೂರೆ,ಸಂಜು ಕುಸನಾಳೆ, ಪಂಚಾಯತ್ ಇಲಾಖೆಯ ಅಧಿಕಾರಿ ಮಡಿವಾಳಪ್ಪ ಪಾಟೀಲ, ದಾದಾ ಜಂತೆಣ್ಣರ,ವಿಶ್ವನಾಥ ನಾಮದಾರ,ನವೀಣ ಗಾಣಿಗೇರ,ಸಂದೀಪ ಮಾನಗಾಂವೆ,ಧೋಂಡಿ ಹರಳೆ,ಶಿವಾನಂದ ಹೊಸಮನಿ,ಸಿದ್ದು ಹವಳೆ,ಸಿದರಾಯ ಮಲ್ಲುಖಾನ, ಹಣಮಂತ ಬಣಚೋಡ,ಬಾಳಾಸಾಬ ಯರಂಡೋಲಿ.ಸತೀಶ ಯಂಡೋಲಿ,ಶಿವಾಜಿ ಕೋಳೇಕರ,ರಾಜು ಕನಾಳೆ,,ಧರ್ಮಾಜಿ ಕೋಳೆಕರ,ಶಂಕರ ಮಗದುಮ್ಮ, ಬಾಳು ನರಟ್ಟಿ,ಅಪ್ಪಾಸಾಬ ಪಾಟೀಲ,ಗಜು ಮುಂಜೆ,ಅಶೋಕ ಹುಗ್ಗಿ,ಶಿವಾನಂದ ಮಡಿವಾಳ, ಸುನೀಲ ಚಮಕೇ–ರಿ,ಸೇರಿದಂತೆ ಅನೇಕರು ಇದ್ದರು.

# ಹಳೆಯ ವಿದ್ಯಾರ್ಥಿಗಳು "ಸ್ನೇಹಲೋಕದಲ್ಲಿ ಬಾಲ್ಯ ಸ್ನೇಹಿತರ ಬಳಗ"ದ ವತಿಯಿಂದ ಶಿಕ್ಷಕ ಬಾಗವಾನ ಅವರಿಗೆ ಗೌರವ ಸನ್ಮಾನ



ಮುದ್ದೇಬಿಹಾಳ: ವಿ.ಬಿ.ಸಿ. ಹೈಸ್ಕೂಲ್‌ನಲ್ಲಿ 30 ವರ್ಷಗಳ ಕಾಲ ಹಿಂದಿ ಶಿಕ್ಷಕರಾಗಿ ಸೇವೆ ಸಲ್ಲಿಸಿ ನಿವೃತ್ತರಾದ ಶಿಕ್ಷಕ ಹೆಚ್.ಆರ್. ಬಾಗವಾನ್ ಅವರನ್ನು ಅವರ ಹಳೆಯ ವಿದ್ಯಾರ್ಥಿಗಳು "ಸ್ನೇಹಲೋಕದಲ್ಲಿ ಬಾಲ್ಯ ಸ್ನೇಹಿತರ ಬಳಗ"ದ ವತಿಯಿಂದ ಸನ್ಮಾನಿಸಿ ಗೌರವಿಸಿದರು. ಈ ಕಾರ್ಯಕ್ರಮವು ಶಿಕ್ಷಕರ ನಿಸ್ವಾರ್ಥ ಸೇವೆ ಮತ್ತು ವಿದ್ಯಾರ್ಥಿಗಳ ಮೇಲಿನ ಅವರ ಪ್ರಭಾವವನ್ನು ಎತ್ತಿಹಿಡಿಯಿತು.

ಕಾರ್ಯಕ್ರಮದಲ್ಲಿ ಮಾತನಾಡಿದ ಗ್ರಾಪಂ ಅಧಿಕಾರಿ ಬಿ.ಎಂ. ಸಾಗರ, ಸಾಹಿತಿ ಹಾಗೂ ಬರಹಗಾರ ಅನಿಲ್ ತೇಲಂಗಿ, ಮತ್ತು ಶಿಕ್ಷಕರಾದ ಹಣಮಂತ ಕನ್ನೂರ ಹಾಗೂ ಸುರೇಶ ನಾಯಕ, ಸಮಾಜದಲ್ಲಿ ಶಿಕ್ಷಕರಿಗಿರುವ ಮಹತ್ವದ ಸ್ಥಾನವನ್ನು ಒತ್ತಿ ಹೇಳಿದರು. ಉತ್ತಮ ಸಂಸ್ಕಾರದೊಂದಿಗೆ ವಿದ್ಯೆಯನ್ನು ನೀಡುವ ಗುರುವು ಸಮಾಜದಲ್ಲಿ ಗೌರವಯುತ ಸ್ಥಾನವನ್ನು ಹೊಂದಿದ್ದಾನೆ. ದೇಶದ ಸತ್ಪ್ರಜೆಯಾಗಿ ಒಬ್ಬ ಪರಿಪೂರ್ಣ ವ್ಯಕ್ತಿಯನ್ನು ರೂಪಿಸುವ ಶಕ್ತಿ ಶಿಕ್ಷಕರಿಗಿದೆ ಎಂದು ನುಡಿದರು.

ಗೌರವ ಸನ್ಮಾನ ಸ್ವೀಕರಿಸಿ ಮಾತನಾಡಿದ ಹೆಚ್. ಆರ್. ಬಾಗವಾನ್, ಅಕ್ಷರ ಕಲಿಸುವ ಗುರುವಿಗೆ ಹೆಚ್ಚಿನ ಜವಾಬ್ದಾರಿ ಇದೆ ಎಂದು ಹೇಳಿದರು. ಇಂದಿನ ದಿನಗಳಲ್ಲಿ ಕೆಲವು ಶಿಕ್ಷಕರು ವಿದ್ಯಾರ್ಥಿಗಳಿಂದ ಗುಟ್ಕಾ, ಸಿಗರೇಟ್ ತ–ರಿಸುವಂತಹ ಕೆಟ್ಟ ಪ್ರವೃತ್ತಿಯನ್ನು ಹೊಂದಿದ್ದಾರೆ ಮತ್ತು ಸರಿಯಾದ ಪಾಠಗಳನ್ನು ಮಾಡುವುದಿಲ್ಲ, ಇದು ಶಿಕ್ಷಕ ವೃತ್ತಿಗೆ ಅಗೌರವ ತರುತ್ತದೆ ಎಂದು ಕಳವಳ ವ್ಯಕ್ತಪಡಿಸಿದರು. ಸಮಾಜದಲ್ಲಿ ಶಿಕ್ಷಕರ ಪಾತ್ರ ದೊಡ್ಡದು, ಮಕ್ಕಳಿಂದ ನಮಗೆ ಗೌರವ ಮತ್ತು ಸಂಬಳ ಸಿಗುತ್ತದೆ ಎಂಬುದನ್ನು ಮರೆಯಬಾರದು ಎಂದರು. ವಿದ್ಯೆ ಕಲಿಸಿದ ಗುರುವನ್ನು ಸ್ಮರಿಸಿಕೊಂಡು ಸನ್ಮಾನಿಸಿದ ಹಿರಿಯ ವಿದ್ಯಾರ್ಥಿಗಳ ಕಾರ್ಯ ಮಾದರಿ ಎಂದು ಶ್ಲಾಘಿಸಿದರು.

ಈ ಸಂದರ್ಭದಲ್ಲಿ ಸಿದ್ದಲಿಂಗಯ್ಯ ಹಿರೇಮಠ, ಪ್ರವೀಣ ನಾಡಗೌಡ, ಮಲ್ಲು ಬಿರಾದಾರ, ಮಹಮ್ಮದ್ ಶಫೀಕ್ ಮಕಾನದಾರ, ಮುತ್ತಣ್ಣ ಹಡಪದ, ಹರೀಶ ನಾಯಕ, ರಾಜಶೇಖರ ಹೋಳಿ, ಮಲ್ಲು ಹೋಕ್ರಾಣಿ, ಶಂಕರ ಕಡಿ, ಅನಿಲ್ ಚೌಡಿಕೇರ, ನ್ಯಾಯವಾದಿ ಶಬ್ಬಿರ ಬಾಗಲಕೋಟೆ, ಧನಗೂಂಡ ಸೇರಿದಂತೆ ಹಲವು ಸ್ನೇಹಿತರು ಮತ್ತು ಹಳೆಯ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಗೋವಿನಜೋಳದಲ್ಲಿ ಮುಳ್ಳುಸಜ್ಜೆ ಕಳೆ ನಿರ್ವಹಣೆ ಕಾರ್ಯಾಗಾರ

ಹಾವೇರಿ. ಧಾರವಾಡ ಕೃಷಿ ವಿಶ್ವವಿದ್ಯಾಲಯ, ಹನಮನಮಟ್ಟಿ ಐಸಿಎಆರ್ ಕೃಷಿ ವಿಜ್ಞಾನ ಕೇಂದ್ರ, ಕೃಷಿ ಮಹಾವಿದ್ಯಾಲಯ ಹಾಗೂ ಧಾರವಾಡ ಅಖಿಲ ಭಾರತ ಸಮನ್ವಯ ಸಂಶೋಧನಾ ಯೋಜನೆ(ಗೋವಿನಜೋಳ) ಸಹಯೋಗದಲ್ಲಿ ಗೋವಿನಜೋಳದಲ್ಲಿ ಮುಳ್ಳುಸಜ್ಜೆ ಕಳೆ ನಿರ್ವಹಣೆಯ ಕಾರ್ಯಾಗಾರ ಜುಲೈ 18 ರಂದು ಬೆಳಿಗ್ಗೆ 10 ಗಂಟೆಗೆ ಹನುಮನಮಟ್ಟಿ ಕೃಷಿ ವಿಜ್ಞಾನ ಕೇಂದ್ರದಲ್ಲಿ ಜರುಗಲಿದೆ. ಧ ಾ ರ ' ವ ಾ ಡ ' ಕೃಷಿ ವಿಶ್ವವಿದ್ಯಾಲಯ ಕುಲಪತಿ ಡಾ.ಪಿ.ಎಲ್.ಪಾಟೀಲ ಅಧ್ಯಕ್ಷತೆ ವಹಿಸಲಿದ್ದು, ಧಾರವಾಡ ಕೃಷಿ ವಿಶ್ವವಿದ್ಯಾಲಯದ ವಿಸ್ತರಣಾ ನಿರ್ದೇಶಕ ಡಾ.ಎಂ.ವಿ.ಮಂಜುನಾಥ್, ಧಾರವಾಡ ಕೃಷಿ ವಿಶ್ವವಿದ್ಯಾಲಯದ ಸಂಶೋಧನಾ ನಿರ್ದೇಶಕ ಡಾ.ಬಿ.ಡಿ.ಬಿರಾದರ ಹಾಗೂ ಹಾವೇರಿ ಕೃಷಿ ಇಲಾಖೆ ಜಂಟಿ ಕೃಷಿ ನಿರ್ದೇಶಕ ಡಾ.ಮಲ್ಲಿಕಾರ್ಜುನ ಕೆ ಅವರು ಉಪಸ್ಥಿತರಿರುವರು. ಧಾರವಾಡ ಕೃಷಿ ವಿಶ್ವವಿದ್ಯಾಲಯ ಅಖಿಲ ಭಾರತ ಸಮನ್ವಯ ಸಂಶೋಧನಾ ಯೋಜನೆ(ಗೋವಿನಜೋಳ) ಪ್ರಾಧ್ಯಾಪಕ ಹಾಗೂ ಮುಖ್ಯಸ್ಥ ಡಾ.ಎಸ್.ಆರ್.ಸಲಕಿನಕೊಪ್ಪ, ಹನುಮನಮಟ್ಟಿ ಕೃಷಿ ಮಹಾವಿದ್ಯಾಲಯದ ಪ್ರಾಧ್ಯಾಪಕ ಹಾಗೂ ಮುಖ್ಯಸ್ಥ ಡಾ.ಅಶೋಕ ಪಿ ಹಾಗೂ ಹನುಮನಮಟ್ಟಿ ಕೃಷಿ ವಿಜ್ಞಾನ ಕೇಂದ್ರದ ವಿಷಯ ತಜ್ಞ ಡಾ.ಸಿದ್ದಗಂಗಮ್ಮ ಕೆ.ಆರ್. ಅವರು ಉಪನ್ಯಾಸಕರಾಗಿ ಭಾಗವಹಿಸಲಿದ್ದಾರೆ.

# ಲೀಡ್ ಬ್ಯಾಂಕ್‌ದ ಸಲಹಾ ಸಮಿತಿ : ಪ್ರಗತಿ ಪರಿಶೀಲನಾ ಸಭೆ

## ಕೈಗಾರಿಕೋದ್ಯಮಿಗಳಿಗೆ ಬ್ಯಾಂಕ್‌ನವರು ಸೂಕ್ತ ಮಾರ್ಗದರ್ಶನ ನೀಡಲಿ : ಸಂಸದ ಬಸವರಾಜ ಬೊಮ್ಮಾಯಿ



ಗದಗ : ಸಣ್ಣ ಕೈಗಾರಿಕೆ ಸೇರಿದಂತೆ ವಿವಿಧ ಕೈಗಾರಿಕೋದ್ಯಮಿಗಳಿಗೆ ಬ್ಯಾಂಕ್‌ನವರು ಸಾಲ ಒದಗಿಸುವಲ್ಲಿ ಸೂಕ್ತಕ್ರಮ ವಹಿಸಿ ಮಾರ್ಗದರ್ಶನ ನೀಡಬೇಕು. ಕೈಗಾರಿಕೆ ಕ್ಷೇತ್ರದಲ್ಲಿ ಸಮರ್ಪಕ ಪ್ರಮಾಣದಲ್ಲಿ ಸಾಲ ನೀಡಿಕೆಯಾದರೆ ಇದರಿಂದ ಜಿಲ್ಲೆಯಲ್ಲಿ ಕೈಗಾರಿಕೆಗಳ ಅಭಿವೃದ್ಧಿಯಾಗಿ ಯುವಜನ–ರಿಗೆ ಹೆಚ್ಚಿನ ಉದ್ಯೋಗಾವಕಾಶಗಳೂ ಸಹ ಲಭಿಸಲಿವೆ ಎಂದು ರಾಜ್ಯದ ಮಾಜಿ ಮುಖ್ಯಮಂತ್ರಿ ಹಾಗೂ ಸಂಸದರಾದ ಬಸವರಾಜ ಬೊಮ್ಮಾಯಿ ತಿಳಿಸಿದರು.

ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಗುರುವಾರ ಲೀಡ್ ಬ್ಯಾಂಕ್‌ದ ( ಡಿಸಿಸಿ ಮತ್ತು ಡಿಎಲ್‌ಆರ್‌ಸಿ) ಸಲಹಾ ಸಮಿತಿ ಸಭೆ ಮತ್ತು ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಜಿಲ್ಲೆಯ ಆರ್ಥಿಕ ಮತ್ತು ಸಾಮಾಜಿ–ಕ ಅಭಿವೃದ್ಧಿಯಲ್ಲಿ ಬ್ಯಾಂಕ್‌ಗಳು ಪ್ರಮುಖ ಪಾತ್ರ ವಹಿಸುತ್ತವೆ. ಬ್ಯಾಂಕ್ ನವರು ಜನಸ್ನೇಹಿಯಾಗಿ ಕರ್ತವ್ಯ ನಿರ್ವಹಿಸಿದರೆ ಜಿಲ್ಲೆಯು ಶೀಘ್ರವಾಗಿ ಅಬಿವೃದ್ಧಿ ಹೊಂದಲು ಸಹಕಾರಿಯಾಗುತ್ತದೆ. ಸಣ್ಣ ಕೈಗಾರಿಕೆ ಸೇ–ರಿದಂತೆ ವಿವಿಧ ಕೈಗಾರಿಕೆ ಉದ್ದಿಮೆಗಳಿಗೆ ಬ್ಯಾಂಕ್‌ನವರು ಸಾಲ ನೀಡುವ ಪ್ರಕ್ರಿಯೆಯಲ್ಲಿ ಏನಾದರೂ ಸಮಸ್ಯೆಗಳೇನಾದರೂ ಎದುರಾದಲ್ಲಿ ಜಿಲ್ಲಾಡಳಿತ ಹಾಗೂ ವಿವಿಧ ಇಲಾಖೆಗಳೊಂದಿಗೆ ಸೂಕ್ತ ರೀತಿಯಲ್ಲಿ ಚರ್ಚಿಸಿ ಕ್ರಮ ಕೈಗೊಳ್ಳಬೇಕು ಎಂದರು.

ಸರ್ಕಾರದಿಂದ ಜಾರಿಗೊಂಡಿರುವ ವಿವಿಧ ಜನಪರ ಯೋಜನೆಗಳ ಆರ್ಥಿಕ ಸೌಲಭ್ಯವನ್ನು ಬ್ಯಾಂಕ್‌ಗಳ ಮುಖಾಂತರ ನಿಗದಿತ ಕಾಲಮಿತಿಯಲ್ಲಿಯೇ ದೊರಕಿಸಿದರೆ ಫಲಾನುಭವಿಗಳಿಗೆ ಹೆಚ್ಚಿನ ಅನುಕೂಲವಾಗುತ್ತದೆ. ಬಡಜನರು ಹಾಗೂ ರೈತರಿಗೆ ಬ್ಯಾಂಕ್‌ನವರ ಸರಿಯಾದ ಮಾರ್ಗದರ್ಶನ ಹಾಗೂ ಸಹಕಾರ ಅಗತ್ಯವಾಗಿದೆ ಎಂದು ಹೇಳಿದರು.

ಗದಗ ಜಿಲ್ಲೆ ಕೃಷಿ ಪ್ರಧಾನ ಜಿಲ್ಲೆಯಾಗಿದ್ದು ರೈತರಿಗೆ ಸಾಲ ನೀಡುವಾಗ ವಿನಾಕಾರಣ ವಿಳಂಬ ಮಾಡಬಾರದು. ಗದಗ ಜಿಲ್ಲೆಯಲ್ಲಿ ಆಹಾರ ಸಂಸ್ಕರಣಾ ಘಟಕಗಳಿಗೆ ಹೆಚ್ಚಿನ ಪ್ರೋತ್ಸಾಹವಿದೆ. ಈ ನಿಟ್ಟಿನಲ್ಲಿ ಆಯಾ ಸಂಬಂಧಿತ ಇಲಾಖೆಯವರೊಂದಿಗೆ ಯೋಜನೆಯ ಅನುಷ್ಟಾನಕ್ಕೆ ಪೂರಕವಾಗುವಂತೆ ಸಭೆ ಜರುಗಿಸಿ ಕ್ರಮ ಕೈಗೊಳ್ಳಬೇಕು ಎಂದು ತಿಳಿಸಿದರು.

ಸರ್ಕಾರದ ವಿವಿಧ ಯೋಜನೆಗಳ ಸೌಲಭ್ಯ ಪಡೆಯುತ್ತಿರುವ ಫಲಾನುಭವಿಗಳ ಖಾತೆಗೆ ಡಿಬಿಟಿ ಮುಖಾಂತರ ಹಣ ಜಮೆಯಾಗುತ್ತಿದ್ದರೆ ಅಂತಹ ಹಣವನ್ನು ಯಾವುದೇ ಕಾರಣಕ್ಕೂ ಬ್ಯಾಂಕ್ ನಿಂದ ಸಾಲ ನೀಡಿಕೆಯ ಹಣದೊಂದಿಗೆ ಹೊಂದಾಣಿಕೆ ಮಾಡಬಾರದು.

ಬ್ಯಾಂಕ್ ನಿಂದ ವಿವಿಧ ಯೋಜನೆಗಳ ಸೌಲಭ್ಯ ಪಡೆಯವ ಬಯಸುವ ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ಬಂದಾಗ ವಿನಾ ಕಾರಣ ಅರ್ಜಿಯನ್ನು ತಿರಸ್ಕ–ರಿಸದೇ ಅವರಿಗೆ ಸೂಕ್ತ ಮಾರ್ಗದರ್ಶನ ನೀಡಿ ಅರ್ಜಿಯನ್ನು ಸ್ವೀಕರಿಸಿ ಜಿಲ್ಲೆಯ ಆರ್ಥಿಕ ಪ್ರಗತಿಗೆ ಬ್ಯಾಂಕ್ ಅಧಿಕಾರಿಗಳು ಕಾರ್ಯನಿರ್ವಹಿಸುವಂತಾಗಲಿ ಎಂದರು.

ಬ್ಯಾಂಕ್‌ನವರು ವಿಶೇಷ ಆಸಕ್ತಿಯಿಂದ ಕೆಲಸ ನಿರ್ವಹಿಸಿದರೆ ಯೊಜನೆಗಳ ಫಲಾನುಭವಿಗಳಿಗೆ ಸೌಲಭ್ಯ ಒದಗಿಸಲು ಸಾಧ್ಯವಾಗುತ್ತದೆ. ಕೃಷಿ ಕ್ಷೇತ್ರಕ್ಕೆ ಸಾಲ ನೀಡಿಕೆಗೆ ಹೆಚ್ಚು ಒತ್ತು ನೀಡಬೇಕೆಂದು ತಿಳಿಸಿದ ಸಂಸದವರು ( ಎಂಎಸ್‌ಎಂಇ ) ಸಣ್ಣ ಮತ್ತು ಮಧ್ಯಮ ಕೈಗಾರಿಕೆಗಳಿಗೆ ಸಾಲ ನೀಡಿಕೆಗೆ ಹೆಚ್ಚಿನ ಪ್ರಾಧಾನ್ಯತೆ ಕೊಡಬೇಕೆಂದು ಸಂಸದ ಬಸವರಾಜ ಬೊಮ್ಮಾಯಿ ಸೂಚಿಸಿದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭರತ್ ಎಸ್ ಅವರು ಮಾತನಾಡಿ, ಬ್ಯಾಂಕ್ ನವರಿಗೆ ವಿವಿಧ ಯೋಜನೆಗಳಿಗೆ ಸಂಬಂಧಿಸಿದಂತೆ ಸಾಲ ನೀಡಿಕೆಯಲ್ಲಿ ಯಾವುದೇ ರೀತಿಯ ಸಮಸ್ಯೆಗಳು ಉದ್ಭವಿಸಿದರೆ ಜಿಲ್ಲಾಡಳಿತ ಮತ್ತು ಇಲಾಖೆಯ ಅಧಿಕಾರಿಗಳ ಗಮನಕ್ಕೆ ತರಬೇಕು ಎಂದರು.

ಲೀಡ್ ಬ್ಯಾಂಕ್ ಮ್ಯಾನೇಜರ್ ಸಂತೋಷ್ ಎಂ.ವಿ ಮಾತನಾಡಿ, ಜಿಲ್ಲೆಯಲ್ಲಿ ಲೀಡ್ ಬ್ಯಾಂಕ್‌ನ 182 ಶಾಖೆಗಳು ಕಾರ್ಯನಿರ್ವಹಿಸುತ್ತಿವೆ. ಜಿಲ್ಲೆಯಲ್ಲಿ ಜೂನ್ 2025 ರ ಅಂತ್ಯಕ್ಕೆ ಸಾಲ ಠೇವಣಿ ಅನುಪಾತ 98.16 % ಆಗಿರುತ್ತದೆ. ಎಲ್ಲ ಬ್ಯಾಂಕಿನ ನಿಯಂತ್ರಣಾಧಿಕಾರಿಗಳು ಸಾಲ ಠೇವಣಿ ಅನುಪಾತವನ್ನು ಸುಧಾರಿಸಲು ಶಾಖೆಗಳಿಗೆ ನಿರ್ದೇಶನ ನೀಡಲಾಗಿದೆ ಎಂದು ತಿಳಿಸಿದರು.

ಜಿಲ್ಲೆಯಲ್ಲಿ ಪ್ರಸಕ್ತ ವಾರ್ಷಿಕ ಸಾಲ ಯೋಜನೆಯಡಿ 30–6–2025 ರವರೆಗೆ ಕೃಷಿ ವಲಯಕ್ಕೆ 85461.97 ಲಕ್ಷ ರೂ ಸಾಲ ನೀಡಿಕೆಯಾಗಿದೆ. ತಾಲೂಕಾವಾರು ವಿವರ ಇಂತಿದೆ ( ಲಕ್ಷ ರೂ.ಗಳಲ್ಲಿ) : ಗದಗ 31186.12 ರೂ, ಗಜೇಂದ್ರಗಡ– 5260.25, ಲಕ್ಷ್ಮೇಶ್ವರ– 5005.72 , ಮುಂಡರಗಿ–7612.03, ನರಗುಂದ– 11916.55 ರೂ, ರೋಣ– 16473.70 ರೂ, ಶಿರಹಟ್ಟಿ –8007.60 ಸಾಲ ನೀಡಿಕೆಯಾಗಿದೆ ಎಂದರು.

ಕೃಷಿ, ಎಂಎಸ್‌ಎಂಇ, ಶಿಕ್ಷಣ, ಹೌಸಿಂಗ್, ಇತರೆ ಸೇರಿದಂತೆ ಆದ್ಯತಾ ವಲಯಕ್ಕೆ 128065.08 ಲಕ್ಷ ರೂ. ಸಾಲ ನೀಡಿಕೆಯಾಗಿದೆ. ತಾಲೂಕಾವಾರು ವಿವರ ಇಂತಿದೆ (ಲಕ್ಷ ಗಳಲ್ಲಿ) ಗದಗ ?58450.64 , ಗಜೇಂದ್ರಗಡ–6786.15, ಲಕ್ಷ್ಮೇಶ್ವರ? 7076.77, ಮುಂಡರಗಿ– 10236.22, ನರಗುಂದ–16310.93, ರೋಣ–19382.60 ಶಿರಹಟ್ಟಿ– 9821.77 ಸಾಲ ನೀಡಿಕೆಯಾಗಿದೆ ಎಂದು ಮಾಹಿತಿನೀಡಿದರು.

ಜಿಲ್ಲೆಯಲ್ಲಿ ಪ್ರಧಾನ ಮಂತ್ರಿ ಮುದ್ರಾ ಯೋಜನೆಯಡಿ ಶಿಶು ಯೋಜನೆಯಲ್ಲಿ 38696 ಅರ್ಜಿಗಳು ಸ್ವೀಕರಿಸಿ 8142 ಲಕ್ಷ ರೂ, ಕಿಶೋರ ಯೋಜನೆಯಡಿ 33748 ಅರ್ಜಿಗಳು ಸ್ವೀಕರಿಸಿ 31742.94 ಲಕ್ಷ ರೂ. ಹಾಗೂ ತರುಣ ಯೋಜನೆಯಡಿ 1796 ಅರ್ಜಿಗಳನ್ನು ಸ್ವೀಕರಿಸಿ 10935.22 ಲಕ್ಷ ರೂ. ವಿತರಿಸಲಾಗಿದೆ ಎಂದು ಸಭೆಗೆ ಲೀಡ್ ಬ್ಯಾಂಕ್ ಮ್ಯಾನೇಜರ್ ಸಂತೋಷ್ ಅವರು ಮಾಹಿತಿ ಒದಗಿಸಿದರು.

ಸಭೆಯಲ್ಲಿ ಉದ್ಯೋಗಿನಿ, ಪಿಎಂಇಜಿಪಿ (ಪ್ರೈಮ್ ಮಿನಿಸ್ಟರ್ ಎಂಪ್ಲಾಯಮೆಂಟ್ ಜನರೇಶನ್ ಪ್ರೋಗ್ರಾಮ್), ಪಿಎಂ ಸ್ವನಿಧಿ, ಸೇರಿದಂತೆ ವಿವಿಧ ಯೋಜನೆಗಳ ಪ್ರಗತಿ ಪರಿಶಿಲನೆ ನಡಸಲಾಯಿತು.

ಇದೇ ಸಂದರ್ಭದಲ್ಲಿ 2025–26ನೇ ಸಾಲಿನ ವಾರ್ಷಿಕ ಕ್ರಿಯಾ ಯೋಜನೆ / ಜಿಲ್ಲಾ ಸಾಲ ಯೋಜನೆ ( ಎಸಿಪಿ/ಡಿಸಿಪಿ ) ಕೈಪಿಡಿಯನ್ನು ಬಿಡುಗಡೆ ಮಾಡಲಾಯಿತು.

ಸಭೆಯಲ್ಲಿ ಜಿಲ್ಲಾಧಿಕಾರಿಸಿ.ಎನ್.ಶ್ರೀಧರ್, ಎಸ್.ಬಿ.ಐ ಆರ್.ಬಿ.ಓ ಪ್ರಾದೇಶಿಕ ವ್ಯವಸ್ಥಾಪಕ ನಾಗಸುಬ್ಬಾ ರೆಡ್ಡಿ ಬಿ, ಆರ್.ಬಿ.ಐ ದ ಎಜಿಎಂ (ಎಲ್.ಡಿ.ಓ) ಸೂರಜ್ ಎಸ್, ನಬಾರ್ಡ ದ ಎ.ಜಿ.ಎಂ.( ಡಿ.ಡಿ.ಎಂ) ಮಯೂರ ಕಾಂಬಳೆ, ಜಿ.ಪಂ. ನಗರಾಬಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಬಸನಗೌಡ್ರ ಕೊಟ್ಟೂರ, ಜಂಟಿ ಕೃಷಿ ನಿರ್ದೇಶಕಿ ತಾರಾಮಣಿ ಜಿ.ಎಚ್, ಜಿ.ಪಂ. ಯೋಜನಾಧಿಕಾರಿ ಚಳಗೇರಿ, ಮಹಿಳಾ ಮತ್ತು ಮಕ್ಕಳ ಇಲಾಖೆ ನಿರುಪಣಾಧಿಕಾರಿ ರಾಧಾ ಮಣ್ಣೂರ, ಸೇ–ರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು, ಬ್ಯಾಂಕ್‌ನ ಅಧಿಕಾರಿಗಳು ಹಾಜರಿದ್ದರು.

## 19 ರಂದು ಗುರುಪೂಜಾ ಉತ್ಸವ

ತಾಳಿಕೋಟೆ, ರಾಷ್ಟ್ರೀಯ ಸ್ವಯಂ ಸೇವಕ ಸಂಘದ ವತಿಯಿಂದ ಪಟ್ಟಣದ ಶ್ರೀ ವಿಠ್ಠಲ ಮಂದಿರದಲ್ಲಿ ಇದೇ ದಿ.19 ಶನಿವಾರರಂದು ಗುರುಪೂಜಾ ಉತ್ಸವ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

ಅಂದು ಸಾಯಂಕಾಲ 7–10ಕ್ಕೆ ಆರಂಭಗೊಳ್ಳಲಿರುವ ಈ ಕಾರ್ಯಕ್ರಮದ ಅತಿಥಿಗಳಾಗಿ ಮಾಜಿ ಸೈನಿಕರಾದ ಸಂಬಾಜಿ ಡಿಸಲೆ ಅವರು ಆಗಮಿಸುವರು.

ವಕ್ತಾರರಾಗಿ ರಾಷ್ಟ್ರೀಯ ಸ್ವಯಂ ಸೇವಕ ಸಂಘದ ಪ್ರಾಂತ ವ್ಯವಸ್ಥಾ ಪ್ರಮುಖರಾದ ಶ್ರೀನಿವಾಸ ನಾಡಗೇರ ಅವರು ಆಗಮಿಸಲಿದ್ದಾರೆಂದು ತಾಲೂಕಾ ಕಾರ್ಯವಾಹ ಸಂಗಮೇಶ ಮದರಕಲ್ಲ ಅವರು ತಿಳಿಸಿದ್ದಾರೆ.

## ನೂತನ ಪಿಎಸ್‌ಐ ಜ್ಯೋತಿ ಖೋತ್ ಅಧಿಕಾರ ಸ್ವಿಕಾರ



ತಾಳಿಕೋಟೆ, ಪಟ್ಟಣದ ಪೋಲೀಸ್ ಠಾಣೆಗೆ ನೂತನವಾಗಿ ವಗಾ ರ್ವಣೆಗೊಂಡು ಆಗಮಿಸಿದ ಪಿಎಸ್‌ಐ ಶ್ರೀಮತಿ ಜ್ಯೋತಿ ಖೋತ್ ಅವರು ಬುಧವಾರರಂದು ಅಧಿಕಾರ ಸ್ವಿಕರಿಸಿದರು.

ಈ ಪಿಎಸ್‌ಐ ಆಗಿ ಕಾರ್ಯನಿರ್ವಹಿಸುತ್ತಿದ್ದ ರಾಮನಗೌಡ ಸಂಕನಾಳ ಅವರು ಸಿಪಿಐ ಆಗಿ ಬಡ್ತಿಹೊಂದಿ ವರ್ಗಾವಣೆಗೊಂಡಿದ್ದ–ರಿಂದ ಆ ಸ್ಥಾನಕ್ಕೆ ಶ್ರೀಮತಿ ಜ್ಯೋತಿ ಖೋತ್ ಅವರು ಅಧಿಕಾರ ವಹಿಸಿಕೊಂಡರು. ಶ್ರೀಮತಿ ಜ್ಯೋತಿ ಖೋತ್ ಅವರು ವಿಜಯಪುರ ಎಪಿಎಂಸಿ ವಿಭಾಗದ ಪೊಲೀಸ್‌ಠಾಣೆಯಲ್ಲಿ ಸೇವೆ ಸಲ್ಲಿಸುತ್ತಿದ್ದರು.

## ರಾಣೇಬೆನ್ನೂರು ಟಾಂಗಾಕೂಟ ಬಯಲು ಜಾಗೆ ನಿಷೇಧಿತ ಸ್ಥಳ ಘೋಷಣೆ

ಹಾವೇರಿ. : ರಾಣೇಬೆನ್ನೂರು ನಗರದ ಟಾಂಗಾಕೂಟ ಬಯಲು ಜಾಗೆಯನ್ನು ದಿನಾಂಕ 20–07–2025 ರಿಂದ ದಿನಾಂಕ 17–09–2025ರವರೆಗೆ ನಿಷೇಧಿತ ಸ್ಥಳವೆಂದು ಘೋಷಿಸಿ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ ಡಾ.ವಿ–ಜಯಮಹಾಂತೇಶ ದಾನಮ್ಮನವರ ಅವರು ಆದೇಶ ಹೊರಡಿಸಿದ್ದಾರೆ.

ಈ ಅವಧಿಯಲ್ಲಿ ಯಾವುದೇ ರಾಜ–ಕೀಯ, ಸಾಮಾಜಿಕ ಹಾಗೂ ಧಾರ್ಮಿಕ ಸಭೆ–ಸಮಾರಂಭಗಳನ್ನು ನಡೆಸುವುದನ್ನು ನಿಷೇಧಿಸಿ ಆದೇಶ ಹೊರಡಿಸಿದ್ದಾರೆ.

## ವಿವಿಧ ತರಬೇತಿಗೆ ಅರ್ಜಿ ಆಹ್ವಾನ

ಹಾವೇರಿ. : ಉತ್ತರ ಕನ್ನಡ ಜಿಲ್ಲೆ ಹಳಿಯಾಳ ಕೆನರಾ ಬ್ಯಾಂಕ್ ದೇಶಪಾಂಡೆ ಆರ್ ಸೆಟ್ ತರಬೇತಿ ಸಂಸ್ಥೆಯಲ್ಲಿ ಗ್ರಾಮೀಣ ಭಾಗದ ನಿರುದ್ಯೋಗಿ ಯುವಕ ಮತ್ತು ಯುವತಿಯ–ರಿಗೆ ಜುಲೈ ತಿಂಗಳಲ್ಲಿ ಜೂಟ್ ಬ್ಯಾಗ್, ಆಗಸ್ಟ್‌ನಲ್ಲಿ ಮಹಿಳೆಯರಿಗಾಗಿ ಹೊಲಿಗೆ ಮತ್ತು ಮೊಬೈಲ್‌ಫೋನ್ ರಿಪೇರಿ ಮತ್ತು ಸರ್ವಿಸಿಂಗ್ ಉಚಿತ ತರಬೇತಿ ಆಯೋಜಿಸಿದೆ.

ತರಬೇತಿಯು ಊಟ ಮತ್ತು ವಸತಿಯೊಂದಿಗೆ ಉಚಿತವಾಗಿರುತ್ತದೆ. ಅಭ್ಯರ್ಥಿಗಳು 18 ರಿಂದ 45 ವರ್ಷದೊಳಗಿರಬೇಕು. ಗ್ರಾಮೀಣ ಭಾಗದ ನಿರುದ್ಯೋಗಿ ಯುವಕರಿಗೆ ಆದ್ಯತೆ ನೀಡಲಾಗುವುದು. ಆಸಕ್ತ ಅಭ್ಯರ್ಥಿಗಳು ದಿನಾಂಕ 25–07–2025ರೊಳಗಾಗಿ ತಮ್ಮ ಹೆಸರು, ವಿಳಾಸ ನೋಂದಾಯಿಸಲು ಕೆಳಕಂಡ ದೂರವಾಣಿ ಸಂಪರ್ಕಿಸಬಹುದು ಅಥ–ವಾ ವೆಬ್‌ಸೈಟ್ **https://rsrtihaliyal.org** ನಲ್ಲಿ ಸಹ ಅರ್ಜಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ನಿರ್ದೇಶಕರು, ಕೆನರಾ ಬ್ಯಾಂಕ್ ದೇಶಪಾಂಡೆ ಆರ್‌ಸೆಟ್ ಸಂಸ್ಥೆ, ಹಳಿಯಾಳ ಉತ್ತರ ಕನ್ನಡ ಜಿಲ್ಲೆ ಈ ವಿಳಾಸಕ್ಕೆ ಅಥವಾ ಮೊ.8217236973/9844796998 ಹಾಗೂ 94834 85489 ಸಂಪರ್ಕಿಸಲು ಕೋರಲಾಗಿದೆ.

# ಮಹಿಳೆಯರಿಗೆ ಅಗ್ನಿ ಶಾಮಕ ದಳದಿಂದ ಜಾಗ್ರತಿ ಶಿಬಿರ

## ವಿವಿಧ ಕ್ಷೇತ್ರಗಳಲ್ಲಿ ಅಧ್ಯಯನ ಪ್ರವಾಸ



ನೇಸರಗಿ.ಮಹಿಳೆಯರು ತಮ್ಮ ಅಡುಗೆ ಮನೆ ಕಾರ್ಯದ ಬಹುಮುಖ್ಯ ಅಂಗ ಸಿಲಿಂಡರ ಬಳಕೆಯಲ್ಲಿ ಅನಿಲ ಸೋರಿ ಬೆಂಕಿ ಹತ್ತಿದಾಗ ಮಹಿಳೆಯರು ಮಾಡಬೇಕಾದ ಮುಂಜಾಗ್ರತೆ ಕ್ರಮದ ಬಗ್ಗೆ ಬೈಲಹೊಂಗಲ ಅಗ್ನಿ ಶಾಮಕ ದಳದ ಅಧಿಕಾರಿಗಳು ಮತ್ತು ಸಿಬ್ಬಂದಿ ಗುರುವಾರದಂದು

ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಭಿವೃದ್ಧಿ ಯೋಜನೆ ಬಿ. ಸಿ ಟ್ರಸ್ಟ್ (ರಿ) ಯೋಜನೆ ಇವರ ಸಹಯೋಗದಲ್ಲಿ ಸಮೀಪದ ವನ್ನೂರು ಹಣಬರಹಟ್ಟಿ ಗ್ರಾಮದ ಶ್ರೀ ಲಕ್ಷ್ಮೀದೇವಿ ಮತ್ತು ಸಂಕಲ್ಪ ಜ್ಞಾನ ವಿಕಾಸ ಕೇಂದ್ರದ ಸದಸ್ಯರಿಗೆ ಮಹಿಳಾ ಜ್ಞಾನ ವಿಕಾಸ ಕಾರ್ಯಕ್ರಮದಡಿಯಲ್ಲಿ ತಾಲೂಕು ಅಧ್ಯಯನ ಜಾಗ್ರತಿ ಶಿಬಿರ,ಎಲ್ಲ ವಿಭಾಗಗಳ ಅಧ್ಯಯನ ಪ್ರವಾಸ ಕಾರ್ಯಕ್ರಮ ಏರ್ಪಡಿಸಲಾಗಿತ್ತು.

ಈ ಕಾರ್ಯಕ್ರಮದಲ್ಲಿ ಬೈಲಹೊಂಗಲ ತಾಲೂಕಿನ ಜ್ಞಾನವಿಕಾಸ ಸಮನ್ವಯ ಅಧಿಕಾರಿ ಶೈಲಾ ಜೆ. ಇವರು ಸದಸ್ಯರಿಗೆ ಆರೋಗ್ಯ ರಕ್ಷಾ ನೆಟ್ವರ್ಕ್ ಆಸ್ಪತ್ರೆಯಾದ ಇಶಾ ಮಲ್ಟಿ ಸ್ಪೆಷಲಿಸ್ಟ್ ಆಸ್ಪತ್ರೆಗೆ ಭೇಟಿ ಮಾಡಿ ಆರೋಗ್ಯ ರಕ್ಷಾ ಸೌಲಭ್ಯಗಳ ಬಗ್ಗೆ ಮತ್ತು ಆಸ್ಪತ್ರೆ ದೊರಕುವ ಸೌಲಭ್ಯಗಳ ಬಗ್ಗೆ ಮಾಹಿತಿ,ಮಹಿಳಾ ಸಾಂತ್ವನ ಕೇಂದ್ರದಲ್ಲಿ ಮಹಿಳೆಯರಿಗಾಗಿ ಸಿಗುವ ಸೌಲಭ್ಯದ ಬಗ್ಗೆ ಮಾಹಿತಿ,ತಾಲೂಕಿನ ಕೋರ್ಟ್ ಭೇಟಿ ಮಾಡಿ ಮಹಿಳಾ ಹಕ್ಕುಗಳ ಮತ್ತು ಕಾನೂನುಗಳ ಬಗ್ಗೆ ಮಾಹಿತಿ, ಸ್ವ ಉದ್ಯೋಗ ಘಟಕ ಭೇಟಿ ಮಾಡಿ ಜೀರೋದಿಂದ ಪ್ರಾರಂಭವಾದ ಚೆಗಳಿ ಪೇಪರ್ ಬ್ಯಾಗ್, ಚನುಮರಿ ವ್ಯಾಪಾರಗಳ ಬಗ್ಗೆ ಮಾಹಿತಿ ನೀಡಿದರು. ಸೇವಾ ಪ್ರತಿನಿಧಿ ಆಶಾ, ಗೀತಾ ಹಾಗೂ ಸರ್ವ ಸದಸ್ಯರ ಸಮ್ಮುಖದಲ್ಲಿ ಈ ದಿನ ತಾಲೂಕು ಅಧ್ಯಯನ ಪ್ರವಾಸ ಅತ್ಯುತ್ತಮವಾಗಿ ನಿರ್ವಹಣೆ ಮಾಡಲಾಯಿತು.

# ಅರೋಗ್ಯ ತಪಾಸಣಾ ಶಿಬಿರ ಕಾರ್ಯಕ್ರಮ



ರಾಯಬಾಗ : ತಾಲೂಕಿನ ಬಂಡವಾಡ ವಲಯದ ನವಗ್ರಾಮ ಕಾರ್ಯಕ್ಷೇತ್ರದ ಕನ್ನಡತಿ ಜ್ಞಾನವಿಕಾಸ ಕೇಂದ್ರ ಸಭೆಯಲ್ಲಿ ಅರೋಗ್ಯ ತಪಾಸಣಾ ಶಿಬಿರ ಕಾರ್ಯಕ್ರಮ ಹಮ್ಮಿಕೊಳ್ಳಲಾಯಿತು,

ಕಾರ್ಯಕ್ರಮವನ್ನು ತಾಲೂಕಿನ ಮಾನ್ಯ ಗೌರವಾನ್ವಿತ ಯೋಜನಾಧಿಕಾರಿಯವರಾದ ಮಹೇಶ್ವರಪ್ಪ ಜಿ ಸರ್, ಮತ್ತು ಡಾ, ಆದ–ರ್ಶ ವಸವಾಡೆ, ಛ ಜನರಲ್ ಸರ್ಜಾನ್, ಮಲ್ಟಿ ಸ್ಪೆಷಲಿಟಿ ಆಸ್ಪತ್ರೆ ಅಂಕಲಿ, ಡಾಕ್ಟರ್ ಪುರುಷೋತ್ತಮ್ ಹೂಗಾರ್ ಎಂ ಎಸ್ ಸ್ತ್ರೀ ರೋಗ ತಜ್ಞರು,ಹಾಗೂ ಗ್ರಾಮ ಪಂಚಾಯತ್ ಅಧ್ಯಕ್ಷರಾದ ರೇವನು ದುಪದಾಳೆ,ಡಾ, ರಾಹುಲ್ ಬಂತೆ, ಸಿದ್ದಿ ವಿನಾಯಕ್ ಕ್ಲಿನಿಕ್ ರಾಯಬಾಗ, ಡಾ, ಮುಜಾಯಿದ್ ಅಜಿದಖಾನ್, ಟಝ ಹಲ್ಲಿನ ಸೂಪರ್ ತಜ್ಞರು ಕುಡಚಿ, ಡಾ, ಓಮಕಾರ ಪೋಳ, ಮೆಹತಾ ಮಲ್ಟಿ ಸ್ಪೆಷಾಲಿಟಿ ಹಾಸ್ಪಿಟಲ್ ಸಾಂಗಲಿ, ಡಾ, ಸುಶಾಂತ್ ಕೋಕಾಟೆ ಕಣ್ಣಿನ ತಜ್ಞರು ಸಾಂಗಲಿ, ಡಾ, ದಯಾನಂದ ಕೋರೆ ಆದರ್ಶ ಮಲ್ಟಿಸ್ಪೆಷಲಿಟಿ ಆಸ್ಪತ್ರೆ ಅಂಕಲಿ, ಡಾಕ್ಟರ್ ಎಲ್ಲಪ್ಪ ಬಂತೆ,ಸಿದ್ರಾಮ್ ರೇವಪ್ಪ ಪೂಜೇರಿ ಅಪ್ಪಯ್ಯ ನಾಯಿಕ್, ಶಾಂತಿನಾಥ ಹುರಳೆ, ಪ್ರಗತಿ ಪರ ರೈತರು, ಡಾ, ಜಿರಳೆ, ಡಾ, ಪಿಂಟು ಭೋಸೆಕರ್, ಒಕ್ಕೂಟ ಅಧ್ಯಕ್ಷರಾದ ಶ್ರೀಮತಿ ದೀಪಾ ಮಂಟೂರ್, ರಿಹಾನ್ ನದಾಪ,,ದ್ವೀಪ ಬೆಳಗಿಸುವುದರ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು,

ನಂತರ ಪ್ರಾಸ್ತಾವಿಕವಾಗಿ ಮಾನ್ಯ ಗೌರವಾನ್ವಿತ ಯೋಜನಾಧಿಕಾರಿಯವರಾದ ಮಹೇಶ್ವರಪ್ಪ ಜಿ ಸರ್ ಅವರು ಎಲ್ಲಾ ತಾಯಂದಿ–ರಿಗೆ ಜ್ಞಾನವಿಕಾಸ ಕಾರ್ಯಕ್ರಮಗಳ ಬಗ್ಗೆ ನಡೆದು ಬಂದ ಹಾದಿಯ ಬಗ್ಗೆ ಪೂಜ್ಯರು ಮತ್ತು ಹಲವಾರು ಕಾರ್ಯಕ್ರಮಗಳನ್ನು ಅನುಷ್ಠಾನ ಮಾಡುತ್ತಿದ್ದಾರೆ ಇಂತಹ ಕಾರ್ಯಕ್ರಮಗಳ ಸದುಪಯೋಗ ಪಡೆದುಕೊಳ್ಳಿ ಎಂದು ಮಾಹಿತಿ ನೀಡಿದರು, ಸಭೆಯಲ್ಲಿ ಡಾಕ್ಟರ್ ದಯಾನಂದ ಕೋರೆ ಆದರ್ಶ ಮಲ್ಪೆ ಸ್ಪೆಷಾಲಿಟಿ ಆಸ್ಪತ್ರೆ ಅಂಕಲಿ ಸರ್ ಅವರು ಎಲ್ಲಾ ಸದಸ್ಯರನ್ನ ಉದ್ದೇಶಿಸಿ ಆಯುಷ್ಮಾನ್ ಸೌಲಭ್ಯ ಹಲ್ಲಿನ ಬಗ್ಗೆ ಬಿಪಿ ಶುಗರ್ ಥೈರಾಯ್ಡ್ ಎಲ್ಲ ತರದ ತಪಾಸನೆ ಗ್ರಾಮೀಣ ಪ್ರದೇಶದ ಸದಸ್ಯರಿಗೆ ಒದಗಿಸಲು ಗ್ರಾಮ ಅಭಿವೃದ್ಧಿ ಯೋಜನೆ ಇಂತಹ ಸಿಬಿರಗಳನ್ನ ಹಮ್ಮಿಕೊಂಡಿದ್ದು ನಮಗೆ ಸಂತೋಷದ ವಿಷಯವಾಗಿದ್ದು ಕಡಿಮೆ ಬೆಲೆಯಲ್ಲಿ ಕನ್ನಡಕ ಮಾಡಿಕೊಡುವುದಾಗಿ ಇಸಿಜಿ ಹಾಗೂ ಇನ್ನೆತರೆ ತಪಾಸಣೆಗಳನ್ನು ಮಾಡಿಸಿಕೊಳ್ಳಿ ಎಂದು ಮಾಹಿತಿ ಮಾರ್ಗದರ್ಶನ ನೀಡಿದರು, ನಂತರದಲ್ಲಿ ಡಾಕ್ಟರ್ ಆದರ್ಶ ವಸವಾಡೆ ಎಂ ಎಸ್ ಜನರಲ್ ಸರ್ಜನ್ ಆದರ್ಶ ಮಲ್ಟಿ ಸ್ಪೆಷಾಲಿಟಿ ಆಸ್ಪತ್ರೆ ಅಂಕಲಿ ಸರ್ ಅವರು ಹಲ್ಲಿನ ತಪಾಸನೆ ಮತ್ತು ಉಚಿತವಾಗಿ ಹಲ್ಲಿನ ಸೆಟ್ ಹಾಕುವುದಾಗಿ ಪ್ರತಿಯೊಬ್ಬರು ಈ ಕಾರ್ಯಕ್ರಮದ ಪ್ರಯೋಜನ ಪಡೆದುಕೊಳ್ಳಿ ಎಂದು ಮಾಹಿತಿ ನೀಡಿದರು, ಸಭೆಯಲ್ಲಿ ಎಲ್ಲಾ ಮಲ್ಟಿ ಸ್ಪೆಷಾಲಿಟಿ ಆಸ್ಪತ್ರೆ ಸಾಂಗ್ ಬಳಗದವರು ಕಾರ್ಯಕ್ರಮಕ್ಕೆ ಶುಭವನ್ನ ಹಾರೈಸಿದರು ಹಾಗೂ ವಲಯದ ಮೇಲ್ವಿಚಾರಕರಾದ ಶ್ರೀಯುತ ಈರಪ್ಪ ದಾಸ್ತಿಕೊಪ್ಪ ನಿರೂಪಿಸಿದರು, ಜ್ಞಾನವಿಕಾಸ ಸಮನ್ವಯ ಅಧಿಕಾರಿ ಅವರು ಶ್ರೀಮತಿ ಸುರೇಖಾ ಹೆಬ್ಬಳ್ಳಿ ಅವರು ಸ್ವಾಗತಿಸಿದರು, ಹಾಗೂ ಶ್ರೀಮತಿ ರೇಣುಕಾ ಬಂಡಿ ಧನ್ಯವಾದ ಮಾಡಿದರು, ಹಾಗೂ ಶ್ರೀಮತಿ ರೇಖಾ ಚೌಹಾನ್, ಸೌಮ್ಯ, ಅನ್ನಪೂರ್ಣ, ಪ್ರಶಾಂತ್ ಹಾಗೂ ಕೇಂದ್ರದ ಸದಸ್ಯರು ಉಪಸ್ಥಿತರಿದ್ದರು.

# ಬಾಲ ಕಾರ್ಮಿಕ ಮತ್ತು ಕಿಶೋರ ಕಾರ್ಮಿಕ ಮಕ್ಕಳ ತಪಾಸಣೆ

## ಓರ್ವ ಕಿಶೋರ ಕಾರ್ಮಿಕ ಪತ್ತೆ -ಮಾಲೀಕನಿಗೆ ನೋಟೀಸ್ ಜಾರಿ

ಹಾವೇರಿ. : ಪ್ಯಾನ್ ಇಂಡಿಯಾ ರಕ್ಷಣೆ ಮತ್ತು ಪುನರ್ವಸತಿ ಅಂಗವಾಗಿ ಹಿರೇಕೆರೂರು ತಾಲೂಕಿನಲ್ಲಿ ಬುಧವಾರ ವಿವಿಧ ಗ್ಯಾರೇಜ್, ವಾಣಿಜ್ಯ ಅಂಗಡಿಗಳಲ್ಲಿ ಕಾರ್ಮಿಕ ನಿರೀಕ್ಷಕರ ನೇತೃತ್ವದಲ್ಲಿ ಬಾಲ ಕಾರ್ಮಿಕ ಮತ್ತು ಕಿಶೋರ ಕಾರ್ಮಿಕ ಮಕ್ಕಳ ತಪಾಸಣೆ ಕಾರ್ಯ ನಡೆಸಿ, ಓರ್ವ ಕಿಶೋರ ಕಾರ್ಮಿಕನನ್ನು ರಕ್ಷಣೆ ಮಾಡಿ, ನೇರವಾಗಿ ಶಾಲೆಗೆ ಸೇರಿಸಲಾಯಿತು.

ಮಗುವನ್ನು ಕೆಲಸಕ್ಕೆ ನೇಮಿಸಿಕೊಂಡ ಮಾಲೀಕನಿಗೆ ಸ್ಥಳದಲ್ಲೇ ನೋಟೀಸ್ ಜಾರಿ ಮಾಡಲಾಯಿತು ಹಾಗೂ ಮಕ್ಕಳನ್ನು ಕೆಲಸಕ್ಕೆ ನೇಮಿಸಿಕೊಳ್ಳದಂತೆ ಹಾಗೂ ಬಾಲ ಕಾರ್ಮಿಕ ನಿಷೇಧ ಕಾಯ್ದೆ ಕುರಿತು ಜಾಗೃತಿ ಮೂಡಿಸಲಾಯಿತು.

ಈ ಸಂದರ್ಭದಲ್ಲಿ ತಹಶೀಲ್ದಾರ ಶ್ರೀಮತಿ ಎಂ.ರೇಣುಕಾ, ಕಾರ್ಮಿಕ ನಿರೀಕ್ಷಕ ದೇವೇಂದ್ರ ನಾಟೀಕಾರ, ಸಮಾಜ ಕಲ್ಯಾಣ ಇಲಾಖೆಯ ಶ್ರೀಮತಿ ಶೋಭಾ,ಶಾಲಾ ಶಿಕ್ಷಣ ಇಲಾಖೆಯ ದಾದಾಪೀರ ಹರಗೋಲ್, ಪೋಲೀಸ್ ಇಲಾಖೆಯ ಜಗದೀಶ ಬ್ಯಾಡಗಿ ಜಿಲ್ಲಾ ಬಾಲ ಕಾರ್ಮಿಕಯೋಜನಾ ಸೊಸೈಟಿ ಯೋಜನಾ ನಿರ್ದೇಶಕ ರಾಘವೇಂದ್ರ ಬ. ಶಿರೂರ, ಚೈಲ್ಡ್ ಲೈನ್‌ನ ಶ್ರೀಮತಿ ಶ್ವೇತಾ ಸಕ್ರಿಹಳ್ಳಿ, ಕಂದಾಯ ನಿರೀಕ್ಷಕ ಬಿಎಲ್.ಪೂಜಾರಿ, ಗ್ರಾಮ ಆಡಳಿತಾಧಿಕಾರಿ ಫರ್ಜಾನ ಇತರರು ಹಾಜರಿದ್ದರು.

# ಕರ್ನಾಟಕ ಪ್ರದೇಶ ಜನತಾದಳ (ಜಾತ್ಯತೀತ) ಸದಸ್ಯತ್ವ ಅಭಿಯಾನ ಕಾರ್ಯಕ್ರಮ ಉದ್ಘಾಟನೆ

ಇಂಡಿ: ರಾಜ್ಯ ಸರ್ಕಾರ ಗ್ಯಾರಂಟಿ ಯೋಜನೆಗಳ ನೆಪದಲ್ಲಿ ರೈತರ ಬಡವರ ಹಿತ ಕಾಪಾಡುವಲ್ಲಿ ತುಂಬಾ ವಿಫಲವಾಗಿದೆ. ನಿಂಬೆ ಬೆಳೆಗಾರರು ಸೂಕ್ತದರ ಇಲ್ಲದ ಕಾರಣ ತುಂಬಾ ಕಷ್ಟದಲ್ಲಿ ಇದ್ದಾರೆ. ರೈತ-ರಿಂದ ಬೆಂಬಲ ಬೆಲೆಯಲ್ಲಿ ನಿಂಬೆ ಖರೀದಿಸಿ ರೈತರ ಹಿತ ಕಾಪಾಡಬೇಕು ಎಂದು ರಾಜ್ಯ ಸರ್ಕಾರಕ್ಕೆ ಕರ್ನಾಟಕ ರಾಜ್ಯ ಜಾತ್ಯತೀತ ಜನತಾದಳ ರಾಜ್ಯ ಯುವ ಘಟಕದ ಅಧ್ಯಕ್ಷ ನೀಖಿಲ ಕುಮಾರ ಸ್ವಾಮಿ ಆಗ್ರಹಿಸಿದರು.

ಪಟ್ಟಣದ ಶ್ರೀ ಶಾಂತೇಶ್ವರ ಮಂಗಲ ಕಾರ್ಯಾಲಯದಲ್ಲಿ ಹಮ್ಮಿಕೊಂಡ ಕರ್ನಾಟಕ ಪ್ರದೇಶ ಜನತಾದಳ (ಜಾತ್ಯತೀತ) ಸದಸ್ಯತ್ವ ಅಭಿಯಾನ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ರಾಜ್ಯ ಸರ್ಕಾರದಲ್ಲಿ ಮುಖ್ಯಮಂತ್ರಿಗಳ ಹಾಗೂ ಕೆಪಿಸಿಸಿ ಅಧ್ಯಕ್ಷ ಸ್ಥಾನಕ್ಕಾಗಿ ಗುದ್ದಾಟ ಪ್ರಾರಂಭವಾಗಿದೆ. ಈ ಹಿಂದೆ ರಾಜ್ಯದಲ್ಲಿ ಜೆಡಿಎಸ್ ಪಕ್ಷ ಅಧಿಕಾರದಲ್ಲಿ ಇದ್ದಾಗ ಈ ಭಾಗದಲ್ಲಿ ನೀರಾವರಿ ಯೋಜನೆ ಮಾಡುವುದರ ಮೂಲಕ ಜನ ಮನಗೆದ್ದಿರುವ ರೈತ ಪರ ಪಕ್ಷ ನಮ್ಮದಾಗಿದೆ. ಕಾರ್ಯಕರ್ತರು ಬುತ ಮಟ್ಟದಿಂದ ಸಂಘಟನೆ ಮಾಡಬೇಕು. ಮುಂದೆ ರಾಜ್ಯದಲ್ಲಿ ಜೇಡಿಎಸ್ ಅಧಿಕಾರಕ್ಕೆ



ಬರಲು ತಾವೆಲ್ಲರು ಶ್ರಮಿಸಬೇಕು ಎಂದರು. ಮಾಜಿ ವಿಪಸದಸ್ಯ ಬಿ. ಜಿ. ಪಾಟೀಲ, ಜೆಡಿ-ಎಸ್ ತಾಲೂಕಾ ಅಧ್ಯಕ್ಷ ಬಿ.ಡಿ.ಪಾಟೀಲ, ಪಂಚಪ್ಪ ಕಲಬುರ್ಗಿ, ದೇವರಹಿಪ್ಪರಗಿ ಶಾಸಕರಾದ ರಾಜುಗೌಡ ಪಾಟೀಲ ಸೇ-ರಿದಂತೆ ಅನೇಕರು ಮಾತನಾಡಿದರು.

ಪಟ್ಟಣದ ರೈಲು ನಿಲ್ದಾಣ ರಸ್ತೆಯ ಅಮರ ಹೊಟೇಲ ಹತ್ತಿರ ನೀಖಿಲ ಕುಮಾರಸ್ವಾಮಿ ಆಗಮಿಸುತ್ತಿದಂತೆ ತೆರೆದ ವಾಹನದಲ್ಲಿ ಬೈಕ ರ್ಯಾಲಿ ಮೂಲಕ ಸಿಂದಗಿ ರಸ್ತೆ ಶ್ರೀ ಶಾಂತೇಶ್ವರ ಮಂಗಲ ಕಾರ್ಯಾಲಯದವರೆಗೆ ಕಾರ್ಯಕರ್ತರು ಗೊಷಣೆಗಳನ್ನು ಕೂಗುತ್ತಾ ಬೈಕ್ ರ್ಯಾಲಿ ಮಾಡಿದರು.

ಈ ಸಂದರ್ಭದಲ್ಲಿ ರಾಜ್ಯ ಪ್ರಧಾನಕಾಯದರ್ಶಿ ಮಾಜಿ ಸಚಿವ ವೆಂಕಟರಾವ ನಾಡಗೌಡ, ಮಾಜಿ ಸಚಿವ ಹನಮಂತಪ್ಪ ಅಲ್ಕೋಡ, ಮಾಜಿ ಶಾಸಕರಾದ ಮಾಜಿ ಶಾಸಕರಾದ ವಿರಭದ್ರಪ್ಪ ಹಾಲರವಿ, ದೊಡ್ಡಪ್ಪಗೌಡ ಪಾಟೀಲ, ರಾಜ್ಯ ಮಹಿಳಾ ಅಧ್ಯಕ್ಷರಾದ ಶ್ರೀಮತಿ ರಶ್ಮಿ ರಾಮೇಗೌಡ, ಜಿಲ್ಲಾ ಅಧ್ಯಕ್ಷ ಬಸವನಗೌಡ ಮಾಡಗಿ, ಬಸವನಬಾಗೇವಾಡಿ ಜೆಡಿ-ಎಸ್ ಪರಾಜಿತ ಅಭ್ಯರ್ಥಿ ಅಪ್ಪುಗೌಡ ಪಾಟೀಲ ವಿಜಯಕುಮಾರ ಬೋಸಲೆ, ಶ್ರೀಶೈಲಗೌಡ ಪಾಟೀಲ, ವಿರಾಜ ಪಾಟೀಲ, ಮರೇಪ್ಪ ಗಿರಣಿವಡ್ಡರ, ರಾಮು ರಾಠೋಡ, ಸಂಓನಗೌಡ ಪಾಟೀಲ, ಮೈಬುಬು ಬೆನೂರ, ಶಿವು ದೇವರ, ಪೀರಪ್ಪ ಹೋಟಗಾರ, ಸಿದ್ದು ಡಂಗಾ, ಬಸಗೊಂಡ್ ಪಾಟೀಲ ಅರ್ಜನಾಳ, ರುದ್ರೇಶ್ ಖೈನೂರ, ರೇವಣಸಿದ್ಧ ಗೋಡಕೆ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

ಪೋಟೊ ಕ್ಯಾಪ್ಸನ್ 16 ಇಂಡಿ 01: ಪಟ್ಟಣದ ಶ್ರೀ ಶಾಂತೇಶ್ವರ ಮಂಗಲ ಕಾರ್ಯಾಲಯದಲ್ಲಿ ಹಮ್ಮಿಕೊಂಡ ಕರ್ನಾಟಕ ಪ್ರದೇಶ ಜನತಾದಳ (ಜಾತ್ಯತೀತ) ಸದಸ್ಯತ್ವ ಅಭಿಯಾನ ಕಾರ್ಯಕ್ರಮವನ್ನು ರಾಜ್ಯ ಸರ್ಕಾರಕ್ಕೆ ಕರ್ನಾಟಕ ರಾಜ್ಯ ಜಾತ್ಯತೀತ ಜನತಾದಳ ರಾಜ್ಯ ಯುವ ಘಟಕದ ಅಧ್ಯಕ್ಷ ನೀಖಿಲ ಕುಮಾರ ಸ್ವಾಮಿ ಉದ್ಘಾಟಿಸಿದರು.

# ಯುವ ನಿಧಿ ಯೋಜನೆ- ಜಿಲ್ಲಾ ಮಟ್ಟದ ವಿಶೇಷ ನೋಂದಣಿ ಅಭಿಯಾನ

ಹಾವೇರಿ. ಕರ್ನಾಟಕ ಸರ್ಕಾರದ ಮಹತ್ವಾಕಾಂಕ್ಷೆ ಯೋಜನೆಯಾದ "ಯುವನಿಧಿ" ಯೋಜನೆಗೆ ಅರ್ಜಿ ಸಲ್ಲಿಸುವ ಪ್ರಕ್ರಿಯೆ ಚಾಲ್ತಿಯಲ್ಲಿದ್ದು, ದಿನಾಂಕ 07-08-2025 ರವರೆಗೆ ಜಿಲ್ಲಾ ಮಟ್ಟದ ವಿಶೇಷ ನೋಂದಣಿ ಅಭಿಯಾನ ಹಮ್ಮಿಕೊಳ್ಳಲಾಗಿದೆ.

ಅರ್ಹ ಪದವಿ, ಸ್ನಾತಕೋತ್ತರ ಪದವಿ ಮತ್ತು ಡಿಪ್ಲೋಮಾ ಉತ್ತೀರ್ಣರಾದ ಅಭ್ಯರ್ಥಿಗಳು ಹತ್ತಿರದ ಗ್ರಾಮ ಒನ್ ಸೇವಾ ಕೇಂದ್ರ, ಬಾಪೂಜಿ ಸೇವಾ ಕೇಂದ್ರ ಕರ್ನಾಟಕ ಒನ್ ಕೇಂದ್ರ, ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದಲ್ಲಿ ಹಾಗೂ ಮೊಬೈಲ್‌ನಲ್ಲಿ ಸೇವಾ ಸಿಂಧು ಪೋರ್ಟಲ್ ಮೂಲಕ ಅರ್ಜಿ ಸಲ್ಲಿಸಬಹುದಾಗಿದೆ.

ಸೌಲಭ್ಯಗಳು: ಪದವಿ/ಸ್ನಾತಕೋತ್ತರ ಪದವಿ ಮತ್ತು ಡಿಪ್ಲೋಮಾ ತೇರ್ಗಡೆ ನಂತರ 180 ದಿನಗಳ ಅವಧಿಗೆ ನಿರುದ್ಯೋಗಿಯಾಗಿರುವ ಪದವಿಧರರಿಗೆ ರೂ.3000/- ಹಾಗೂ ಡಿಪ್ಲೋಮ ಮಾಡಿದವರಿಗೆ ರೂ. 1500/-ನಿರುದ್ಯೋಗ ಭತ್ಯೆ ನೀಡಲಾಗುತ್ತದೆ.

ನಿರುದ್ಯೋಗ ಭತ್ಯೆಯನ್ನು ನೇರ ನಗದು ವರ್ಗಾವಣೆ ಮೂಲಕ ಗರಿಷ್ಠ ಎರಡು ವರ್ಷದವರೆಗೆ ಅಥವಾ ಕೆಲಸ ಸಿಗುವವರೆಗೆ ನೀಡಲಾಗುತ್ತದೆ.

ಅರ್ಹತೆಗಳು ಮತ್ತು ನಿಬಂಧನೆಗಳು: 2023, 2024 ಮತ್ತು 2025 ರಲ್ಲಿ ಪದವಿ/ಸ್ನಾತಕೋತ್ತರ ಪದವಿ ಮತ್ತು ಡಿಪ್ಲೋಮಾ ಉತ್ತೀರ್ಣರಾದ ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ಅರ್ಹರಾಗಿದ್ದಾರೆ. ಪದವಿ/ಸ್ನಾತಕೋತ್ತರ ಪದವಿ/ಡಿಪ್ಲೋಮಾ ತೇರ್ಗಡೆಯಾದ ನಂತರದಿಂದ ಅರ್ಜಿ ಸಲ್ಲಿಸಲು 2 ವರ್ಷದವರೆಗೆ ಮಾತ್ರ ಅವಕಾಶವಿರುತ್ತದೆ.

ಅಭ್ಯರ್ಥಿಗಳು ಸರ್ಕಾರಿ, ಖಾಸಗಿ ಉದ್ಯೋಗ ಹೊಂದಿಲ್ಲದವರು, ಸ್ವ-ಉದ್ಯೋಗ ಹೊಂದಿಲ್ಲದವರು, ಮತ್ತು ಉನ್ನತ ವ್ಯಾಸಂಗ ಮುಂದುವರೆಸದೆ ಇರುವವರು ಅರ್ಹರಾಗಿರುತ್ತಾರೆ. ಕಡ್ಡಾಯವಾಗಿ ಆಧಾರ್ ಸೀಡೆಡ್ ಬ್ಯಾಂಕ್ ಖಾತೆ ಮತ್ತು ಆಧಾರ್ ಲಿಂಕ್ ಇರುವ ಮೊಬೈಲ್ ನಂಬರ್ ಹೊಂದಿರಬೇಕು.

ಅಭ್ಯರ್ಥಿಗಳು ಅಂಕಪಟ್ಟಿಗಳನ್ನು ಮ್ಯಾನುವಲ್ ಅಪ್ಲೋಡ್ ಮಾಡಿರುವವರು ಸಂಬಂಧಿತ ಕಚೇ-ರಿಗಳಲ್ಲಿ ರಹವಾಸಿ ಪರಿಶೀಲಿಸಿ ದೃಢೀಕ-ರಿಸಿಕೊಳ್ಳಬೇಕು.

ಮೊದಲ ಕಂತಿನ ಹಣ ಪಾವತಿಯಾದ ನಂತರ ಪ್ರತಿ ಮೂರು ತಿಂಗಳಿಗೊಮ್ಮೆ (ಮೇ, ಆಗಸ್ಟ್, ನವಂಬರ್ ಮತ್ತು ಫೆಬ್ರವರಿ) ದಿನಾಂಕ 25ರೊಳಗಾಗಿ ಸೇವಾ ಸಿಂಧು ಪೋರ್ಟಲ್ **(https://sevasindhugs.karnataka.gov.in)** ಮೂಲಕ ಸ್ವಯಂ ಘೋಷಣೆ ಮಾಡುವುದು ಕಡ್ಡಾಯವಾಗಿರುತ್ತದೆ. ಕರ್ನಾಟಕದಲ್ಲಿ ಕನಿಷ್ಠ ಆರು ವರ್ಷದವರೆಗೆ ರಹವಾಸಿ ಹೊಂದಿರಬೇಕು. ತಪ್ಪು ಮಾಹಿತಿ ನೀಡಿದಲ್ಲಿ ದಂಡ ವಿಧಿಸಲಾಗುವುದು.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ, ಜಿಲ್ಲಾಡಳಿತ ಭವನ, ಹಾವೇರಿ ದೂರವಾಣಿ ದಂಖ್ಯೆ 08375-249291 ಅಥ-'ವಾ ಸಹಾಯವಾಣಿ 1800599715 ನ್ನು ಸಂಪರ್ಕಿಸಬಹುದಾಗಿದೆ.

# ವಿವಿಧ ಕಾಯ್ದೆಗಳ ಅರಿವು ಕಾರ್ಯಕ್ರಮ

ಹಾವೇರಿ. ಬಾಲ್ಯ ವಿವಾಹ ಹಾಗೂ ಪೋಕ್ಸೋ ಪ್ರಕರಣ ತಡೆಗೆ ಎಲ್ಲರೂ ಶ್ರಮಿಸಬೇಕು ಎಂದು ಸವಣೂರು ಕ್ಷೇತ್ರ ಶಿಕ್ಷಣಾಧಿಕಾರಿ ಎಮ್. ಎಫ್. ಬಾರ್ಕಿ ಹೇಳಿದರು.

ಸವಣೂರ ತಾಲೂಕಿನ ಹೂವಿನಶಿಗ್ಲಿ ಗ್ರಾಮದ ಸರ್ಕಾರಿ ಪ್ರೌಢ ಶಾಲೆಯಲ್ಲಿ ಮಂಗಳವಾರ ಬಾಲ್ಯವಿವಾಹ ಕಾಯ್ದೆ, ಪೊಕ್ಸಿ ಕಾಯ್ದೆ. ಬಾಲಗರ್ಭಿಣಿ, ಮಕ್ಕಳ ಕಾವಲು ಸಮಿತಿ ಹಾಗೂ ಮಕ್ಕಳ ಹಕ್ಕುಗಳ ಕಾಯ್ದೆಗಳ ಕುರಿತು ಆಯೋಜಿಸಲಾದ ಅರಿವು ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಇತ್ತೀಚಿನ ದಿನಗಳಲ್ಲಿ ಪೋಕ್ಸೋ ಪ್ರಕರಣಗಳು ಹೆಚ್ಚಾಗಿ ಕಂಡುಬರುತ್ತಿರುವುದು ವಿಷಾಧಕರ ಸಂಗತಿಯಾಗಿದೆ. ಬಾಲ್ಯವಿವಾಹ ನಿಷೇಧ ಕಾಯ್ದೆ ಬಗ್ಗೆ ಅರಿವು ಹೊಂದಿದ್ದರೂ ಸಹ ಸಾರ್ವಜನಿಕರು ಗೌಪ್ಯವಾಗಿ ಬಾಲ್ಯವಿವಾಹ ಮಾಡುತಿದ್ದು, ಇದರ ಬಾಲ ಗರ್ಭಿಣಿಯರ ಸಂಖ್ಯೆ ಹೆಚ್ಚಾಗುತ್ತಿದೆ. ಮಕ್ಕಳ ಹಕ್ಕುಗಳ ಬಗ್ಗೆ ಹೆಚ್ಚಿನ ಅರಿವು ಮೂಡಿಸುವುದು ಅಗತ್ಯವಾಗಿದೆ ಎಂದು ಹೇಳಿದರು.

ಶಿಶು ಅಭಿವೃದ್ಧಿ ಯೋಜನಾಧಿಕಾರಿ ಶ್ರೀಮತಿ ಉಮಾ ಕೆ. ಎಸ್ ಅವರು ಮಾತನಾಡಿ, ಸರ್ಕಾರ ಅನೇಕ ಸೌಲಭ್ಯಗಳನ್ನು ಜಾರಿಗೆ ತಂದಿದ್ದರೂ ಕೂಡ, ಪಾಲಕರು ಹಲವಾರು ಕಾರಣಗಳಿಂದ ಬಾಲ್ಯವಿವಾಹ ಮಾಡುತ್ತಿದ್ದಾರೆ. ಪಾಲಕರು ಹಾಗೂ ಪೋಷಕರು ತಮ್ಮ ಮಕ್ಕಳ ಮುಂದಿನ ಭವಿಷ್ಯದ ಬಗ್ಗೆ ಯೋಚನೆಮಾಡಿ, ಮಕ್ಕಳಿಗೆ ಉತ್ತಮ ಶಿಕ್ಷಣ ಕೊಡಿಸುವ ಮೂಲಕ ಉಜ್ವಲ ಭವಿಷ್ಯ ರೂಪಿಸಬೇಕು ಎಂದು ಹೇಳಿದರು.

ವೈದ್ಯಾಧಿಕಾರಿ ಡಾ.ಚಂದ್ರಕಲಾ ಜೆ ಅವರು ಮಾತನಾಡಿ, ಆಸ್ಪತ್ರೆಯಲ್ಲಿ ಬಾಲಗರ್ಭಿಣಿಯರ ಸಂಖ್ಯೆ ಹೆಚ್ಚಾಗುತ್ತಿದ್ದು, ಇದರಿಂದ ಮಕ್ಕಳ ಆರೋಗ್ಯದ ಬಗ್ಗೆ ತುಂಬಾ ಅಡ್ಡ ಪರಿಣಾಮಗಳು ಉಂಟಾಗುತ್ತದೆ ಹಾಗೂ ಜನಿಸಿದ ಮಗುವು ಅಪೌಷ್ಠಿಕದಿಂದ ಬಳಲುತ್ತದೆ. ಪೋಷಕರು ಬಾಲ್ಯವಿವಾಹ ನಿಷೇಧ, ಪೋಕ್ಸೊ, ಮಕ್ಕಳ ಕಾವಲು ಸಮಿತಿ ಹಾಗೂ ಮಕ್ಕಳ ಹಕ್ಕುಗಳ ಕಾಯ್ದೆಗಳ ಕುರಿತು ತಿಳಿದುಕೊಳ್ಳಬೇಕು ಹಾಗೂ ಮಕ್ಕಳಿಗೆ ಕಡ್ಡಾಯವಾಗಿ ಶಿಕ್ಷಣ ಕೊಡಿಸಬೇಕು ಎಂದು ಸಲಹೆ ನೀಡಿದರು.

ಹೂವಿನಶಿಗ್ಲಿ ಗ್ರಾ.ಪಂ.ಅಧ್ಯಕ್ಷೆ ಶ್ರೀಮತಿ ಲಕ್ಷ್ಮವ್ವ ಗಡ್ಡಣ್ಣನವರ ಅಧ್ಯಕ್ಷತೆ ವಹಿಸಿದ್ದರು. ಗ್ರಾ.ಪಂ.ಸದಸ್ಯ ನಿಂಗಪ್ಪ ಸೊರಟೂರ, ಎಸ್.ಡಿ.ಎಮ್.ಸಿ ಅಧ್ಯಕ್ಷ ದುಂಡಪ್ಪ ಗುಡಗೇರಿ ಎ.ಎಸ್.ಐ ಶ್ರೀಮತಿ ಗೀತಾ ತಿರುಮಲೆ, ಮುಖ್ಯೋಪಾಧ್ಯಾಯ ಪಿ.ವಿ.ಗುತ್ತಲ, ಡಿಸಿಪಿ ಜಗದೀಶ ವಡಕಣ್ಣನವರ, ಹಾಗೂ ಕೃಷ್ಣ ಹುರಳಿಕುಪ್ಪಿ ಇತರರು ಭಾಗವಹಿಸಿದ್ದರು.




# ಗೃಹ ಆರೋಗ್ಯ ಯೋಜನೆ-ಮನೆ ಮನೆಗೆ ಆರೋಗ್ಯ ಸೇವೆಗಳು ಗೃಹ ಆರೋಗ್ಯ ಯೋಜನೆಗೆ ಸಚಿವರಿಂದ ಚಾಲನೆ

ಹಾವೇರಿ. 'ಗೃಹ ಆರೋಗ್ಯ ಯೋಜನೆ'ಗೆ ಆಶಾ ಕೈಪಿಡಿ ಬಿಡುಗಡೆ ಮಾಡುವ ಮೂಲಕ ಜವಳಿ, ಕಬ್ಬು ಅಭಿವೃದ್ಧಿ ಸಕ್ಕರೆ ಮತ್ತು ಕೃಷಿ ಮಾರುಕಟ್ಟೆ ಹಾಗೂ ಹಾವೇರಿ ಜಿಲ್ಲಾ ಉಸ್ತುವಾರಿ ಸಚಿವರಾದ ಶಿವಾನಂದ ಪಾಟೀಲ ಅವರು ಚಾಲನೆ ನೀಡಿದರು.

ಹಾವೇರಿ ವೈದ್ಯಕೀಯ ವಿಜ್ಞಾನ ಸಂಸ್ಥೆಯಲ್ಲಿ ಬುಧವಾರ ಜರುಗಿದ ಸಭೆಯಲ್ಲಿ 'ಗೃಹ ಆರೋಗ್ಯ ಯೋಜನೆ'ಗೆ ಚಾಲನೆ ನೀಡಿದ ಸಮಯದಲ್ಲಿ ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಖಾತೆ ಸಚಿವರಾದ ಡಾ.ಶರಣಪ್ರಕಾಶ ಎಸ್.ಪಾಟೀಲ, ಮಾಜಿ ಮುಖ್ಯಮಂತ್ರಿಗಳು ಹಾಗೂ ಲೋಕಸಭಾ ಸದಸ್ಯರಾದ ಬಸವರಾಜ ಬೊಮ್ಮಾಯಿ, ಶಾಸಕರು ಹಾಗೂ ವಿಧಾನಸಭೆ ಉಪ ಸಭಾಧ್ಯಕ್ಷರಾದ ರುದ್ರಪ್ಪ ಮಾನಪ್ಪ ಲಮಾಣಿ, ಕರ್ನಾಟಕ ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ ಉಪಾಧ್ಯಕ್ಷ ಎಸ್. ಆರ್.ಪಾಟೀಲ, ಬೆಂಗಳೂರು ವೈದ್ಯಕೀಯ ಶಿಕ್ಷಣ ನಿರ್ದೇಶನಾಲಯದ ನಿರ್ದೇಶಕಿ ಡಾ.ಬಿ.ಎಲ್.ಸುಜಾತಾ ರಾಥೋಡ, ಜಿಲ್ಲಾಧಿಕಾರಿ ಡಾ.ವಿಜಯಮಹಾಂತೇಶ ದಾನಮ್ಮನವರ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ರುಚಿ ಬಿಂದಲ್, ನೂತನ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಶ್ರೀಮತಿ ಯಶೋಧಾ ವಂಟಗೋಡಿ, ವೈದ್ಯಕೀಯ ನಿರ್ದೇಶಕ ಡಾ.ಪ್ರದೀಪಕುಮಾರ ಎಂ.ವಿ., ಆರೋಗ್ಯ ಇಲಾಖೆ ಅಧಿಕಾರಿಗಳು ಉಪಸ್ಥಿತರಿದ್ದರು.

ಕರ್ನಾಟಕ ಸರ್ಕಾರದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯು ರಾಜ್ಯಾದ್ಯಂತ 'ಗೃಹ ಆರೋಗ್ಯ ಯೋಜನೆ' ವಿಸ್ತರಣೆ ಮಾಡಿದೆ. ರಾಜ್ಯಾದ್ಯಂತ ಅಸಾಂಕ್ರಾಮಿಕ



ರೋಗಗಳ ಆರೋಗ್ಯ ತಪಾಸಣೆ ಮತ್ತು ನಿರ್ವಹಣೆಯನ್ನು ಬಲಪಡಿಸುವ ಗುರಿ ಹೊಂದಿರುವ ಯೋಜನೆಯಾಗಿದೆ. ಈ ಯೋಜನೆಗೆ ಮಾನ್ಯ ಮುಖ್ಯ ಮಂತ್ರಿಗಳು ದಿನಾಂಕ 24-10-2024 ರಂದು ಬೆಂಗಳೂರಿನ ವಿಧಾನಸೌಧದಲ್ಲಿ ಚಾಲನೆ ನೀಡಿದ್ದರು.

ಗೃಹ ಆರೋಗ್ಯ ಕಾರ್ಯಕ್ರಮವು ಕೋಲಾರ ಜಿಲ್ಲೆಯಲ್ಲಿ ಪ್ರಾಯೋಗಿಕವಾಗಿ ಆರಂಭಿಸಲಾಗಿದ್ದು, ಪ್ರಮುಖ ಆರೋಗ್ಯ ತಂಡಗಳು ಅಸಾಂಕ್ರಾಮಿಕ ರೋಗಗಳಿಗಾಗಿ ಮನೆ-ಮನೆಗೆ ತೆರಳಿ ಆರೋಗ್ಯ ತಪಾಸಣೆ ಮತ್ತು ನಿರ್ವಹಣೆ ನಡೆಸಲಾಗಿದೆ. ಅದರ ಯಶಸ್ಸಿನ ನಂತರ, ಅಗತ್ಯ ಆರೋಗ್ಯ ಸೇವೆಗಳಿಗೆ ಸಮಾನ ಪ್ರವೇಶವನ್ನು ಖಚಿತವಡಿಸಿಕೊಳ್ಳಲು ಈ ಯೋಜನೆಯನ್ನು ರಾಜ್ಯದ ಎಲ್ಲಾ ಜಿಲ್ಲೆಗಳಿಗೆ ವಿಸ್ತ-ರಿಸಲಾಗುತ್ತಿದೆ.

ಪ್ರಾರಂಭದಲ್ಲಿ, 30 ವರ್ಷ ಮತ್ತು ಅದಕ್ಕಿಂತ ಹೆಚ್ಚಿನ ವಯಸ್ಸಿನ ವ್ಯಕ್ತಿಗಳಲ್ಲಿ ಪ್ರಮುಖ ಅಸಾಂಕ್ರಾಮಿಕ ರೋಗಗಳ ಆರೋಗ್ಯ ತಪಾಸಣೆ ಮತ್ತು ನಿರ್ವಹಣೆ ನಡೆಸಲಾಗುವುದು. ಮಧುಮೇಹ, ರಕ್ತದೊತ್ತಡ ಮತ್ತು ಮೂರು ಸಾಮಾನ್ಯ ಕ್ಯಾನ್ಸರ್‌ಗಳು ಬಾಯಿ, ಸ್ತನ ಮತ್ತು ಗರ್ಭಕಂಠದ ಕ್ಯಾನ್ಸರ್ ತಪಾಸಣೆ ಮಾಡಲಾಗುತ್ತದೆ.

ಉಚಿತ ಆರೋಗ್ಯ ತವಾಸಣೆ: 30 ವರ್ಷ ಮತ್ತು ಅದಕ್ಕಿಂತ ಹೆಚ್ಚಿನ ವಯಸ್ಸಿನ ವ್ಯಕ್ತಿಗಳಿಗೆ 14 ಅಸಾಂಕ್ರಾಮಿಕ ರೋಗಗಳಾದ ಮಧುಮೇಹ, ಅಧಿಕ ರಕ್ತದೊತ್ತಡ, ಬಾಯಿ ಕ್ಯಾನ್ಸರ್, ಸ್ತನ ಕ್ಯಾನ್ಸರ್, ಗರ್ಭಕಂಠದ ಕ್ಯಾನ್ಸರ್, ಡಯಾಬೆಟಿಕ್ ಫೂಟ್ ಮತ್ತು ರೆಟಿನೋಪತಿ, ಮಾನಸಿಕ ಆರೋಗ್ಯ ಅಸ್ವಸ್ಥತೆಗಳು, ನರವೈಜ್ಞಾನಿಕ ಅಸ್ವಸ್ಥತೆಗಳು, ನಿದ್ರೆಯಲ್ಲಿ ಉಸಿರುಗಟ್ಟುವಿಕೆ, ದೀರ್ಘಕಾಲದ ಮೂತ್ರಪಿಂಡದ ಕಾಯಿಲೆ, ದೀರ್ಘಕಾಲದ ಪ್ರತಿರೋಧಕ ಶ್ವಾಸಕೋಶದ ಕಾಯಿಲೆ, ಆಲೋಹಾಲ್ ರಹಿತ ಕೊಬ್ಬಿನ ಪಿತ್ತಜನಕಾಂಗದ ಕಾಯಿಲೆ ಮತ್ತು ರಕ್ತಹೀನತೆಯ (19-29 ವರ್ಷ ವಯಸ್ಸಿನವರಿಗೆ) ಆರೋಗ್ಯ ತಪಾಸಣೆಯನ್ನು ಆಯುಷ್ಮಾನ್ ಆರೋಗ್ಯ ಮಂದಿರಗಳಲ್ಲಿ (ಎಎಂ) ಉಚಿತವಾಗಿ ನಡೆಸಲಾಗುವುದು.

ಚಿಕಿತ್ಸೆ ಮತ್ತು ಅನುಸರಣೆ: ರೋಗನಿರ್ಣಯವಾದ ನಂತರ, ವ್ಯಕ್ತಿಗಳು ಅವರ ಹತ್ತಿರದ ಆಯುಷ್ಮಾನ್ ಆರೋಗ್ಯ ಮಂದಿರಗಳಲ್ಲಿ ತೆರಳಿ ಆರೋಗ್ಯ ತವಾಸಣೆ, ನಿರ್ವಹಣೆ ಮತ್ತು ಉಚಿತವಾಗಿ ಅಸಾಂಕ್ರಾಮಿಕ ರೋಗಗಳ ಶಿಷ್ಟಾಚಾರದ ಔಷಧಿಗಳನ್ನು ಒದಗಿಸಲಾಗುವುದು.

ಉದ್ದೇಶಗಳು: ಅಸಾಂಕ್ರಾಮಿಕ ರೋಗಗಳನ್ನು ಆರಂಭಿಕ ಹಂತದಲ್ಲಿ ಪತ್ತೆ ಹಚ್ಚಿ ಮತ್ತು ಜಾಗೃತಿ ಹೆಚ್ಚಿಸುವುದು,

ಸಕಾಲದಲ್ಲಿ ಆರೋಗ್ಯ ತಪಾಸಣೆ ಮತ್ತು ನಿರ್ವಹಣೆಗಾಗಿ ಸಾರ್ವಜನಿಕರಲ್ಲಿ ಅರಿವು ಮೂಡಿಸುವುದು ಹಾಗೂ

ವಿಕೇಂದ್ರೀಕೃತ ಆರೋಗ್ಯ ಸೇವೆಗಳ ಮೂಲಕ ನಿರಂತರ ಆರೈಕೆಯನ್ನು ಖಚಿತಪಡಿಸುವುಸದಾಗಿದೆ.

ಆರೋಗ್ಯ ಸಿಬ್ಬಂದಿಯ ಪಾತ್ರ: ಆಶಾ ಕಾರ್ಯಕರ್ತೆಯರು: ಮನೆ ಮನೆಗೆ ಭೇಟಿ ನೀಡಿ ಸಾರ್ವಜನಿಕರಲ್ಲಿ ಅರಿವು ಮೂಡಿಸುವುದು ಮತ್ತು ಜಾಗೃತಿ ಮೂಡಿಸಿ, ಆರೋಗ್ಯ ತಪಾಸಣೆಗಾಗಿ ಆಯುಷ್ಮಾನ್ ಆರೋಗ್ಯ ಮಂದಿರಕ್ಕೆ ಕಳುಹಿಸುವುದಾಗಿದೆ.

ಅಊಔ ಗಳು/ ಕಊಅಔ ಗಳು: ಆಯುಷ್ಮಾನ್ ಆರೋಗ್ಯ ಮಂದಿರಗಳಲ್ಲಿ (ಎ.ಎ.ಎಂ) ಆರೋಗ್ಯ ತವಾಸಣೆ ನಡೆಸಿ ಎನ್.ಸಿ.ಡಿ ಪೋರ್ಟಲ್‌ಗೆ ಡೇಟಾವನ್ನು ನಮೂದಿಸುತ್ತಾರೆ. ಆರೋಗ್ಯ ತಪಾಸಣೆ, ನಿರ್ವಹಣೆ ಮತ್ತು ಹೆಚ್ಚಿನ ಚಿಕಿತ್ಸೆಗಾಗಿ ಮೇಲ್ದರ್ಜೆ ಆಸ್ಪತ್ರೆಗಳಿಗೆ ಕಳುಹಿಸಬಹುದಾಗಿದೆ.

ವೈದ್ಯಕೀಯ ಅಧಿಕಾರಿಗಳು: ರೋಗನಿರ್ಣಯ, ಚಿಕಿತ್ಸೆ ಮತ್ತು ದೀರ್ಘಕಾಲೀನ ನಿರ್ವಹಣೆ ಸೇವೆಗಳನ್ನು ಒದಗಿಸಲಾಗುವುದು.

ಕಾರ್ಯಕ್ರಮದ ಘೋಷಣೆ: "ಮನೆ ಬಳಿಗೆ ಆರೋಗ್ಯ ಸೇವೆಗಳು" ಅಸಾಂಕ್ರಾಮಿಕ ರೋಗಗಳ ಆರೋಗ್ಯ ತಪಾಸಣೆ ಮತ್ತು ನಿರ್ವಹಣೆಯನ್ನು ಕೈಗೆಟುಕುವಿಕೆ ಮತ್ತು ಆರಂಭಿಕ ಹಂತದಲ್ಲಿ ಪತ್ತೆ ಹಚ್ಚಿ ಮತ್ತು ಜಾಗೃತಿ ವಹಿಸುವುದಾಗಿದೆ.

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯು ಸಾರ್ವತ್ರಿಕ ಆರೋಗ್ಯ ರಕ್ಷಣೆಯನ್ನು ಸಾಧಿಸಲು ಮತ್ತು ಯಾವುದೇ ನಾಗರಿಕರು ತಡೆಗಟ್ಟುವ ಮತ್ತು ಗುಣಪಡಿಸುವ ಆರೋಗ್ಯ ಸೇವೆಗಳನ್ನು ಪ್ರವೇಶಿಸುವುದರಿಂದ ವಂಚಿತರಾಗುವುದಿಲ್ಲ ಎಂದು ಖಚಿತಪಡಿಸಿಕೊಳ್ಳಲು ಬದ್ಧವಾಗಿದೆ.

## ಬೂದಿಹಾಳ-ಪೀರಾಪೂರ ಏತ ನೀರಾವರಿ ಹೋರಾಟ : ಕತ್ತೆ ಮೆರವಣಿಗೆಗೆ ಬ್ರೇಕ್ ಹಾಕಿದ ಪೋಲೀಸ್‌ರು- ಕಿಡಿ ಕಾರಿದ ಪ್ರತಿಭಟನಾಕಾರರು

# ರೈತ ವಿರೋಧಿ ನೀತಿ ಖಂಡಿಸಿ ಕತ್ತೆ ಭಾವಚಿತ್ರದೊಂದಿಗೆ ಪ್ರತಿಭಟನೆ






ತಾಳಿಕೋಟೆ, ಬೂದಿಹಾಳ ಪೀರಾಪೂರ ಏತ ನೀರಾವರಿ ಕಾಮಗಾರಿಗೆ ಸಂಬಂದಿಸಿ ಮುಕ್ತಾಯ ಹಂತದ ಕಾಮಗಾ-ರಿಗೆ ರಾಜ್ಯ ಕಾಂಗ್ರೇಸ್ ಸರ್ಕಾರ ಹಣ ಬಿಡುಗಡೆಗೊಳಿಸದಿರುವದನ್ನು ಖಂಡಿಸಿ ಬುಧವಾರರಂದು ತಾಳಿಕೋಟೆ ಪಟ್ಟಣದಲ್ಲಿ ಅಖಂಡ ಕರ್ನಾಟಕ ರೈತ ಸಂಘದ ನೇತೃತ್ವದಲ್ಲಿ ಆಯೋಜಿಸಲಾದ ಕತ್ತೆಗಳ ಮೇರವಣಿಗೆಗೆ ಪೊಲೀಸ್‌ರು ಬ್ರೇಕ್ ಹಾಕಿದ್ದ-ರಿಂದ ಕತ್ತೆ ಭಾವಚಿತ್ರದೊಂದಿಗೆ ಪ್ರತಿಭಟನೆ ನಡೆಸಿದ ಘಟನೆ ನಡೆದಿದೆ.

ಪಟ್ಟಣದ ಪ್ರವಾಸಿ ಮಂದಿರದಲ್ಲಿ ಅಖಂಡ ಕರ್ನಾಟಕ ರೈತ ಸಂಘದ ರಾಜ್ಯ ಪ್ರಧಾನ ಕಾರ್ಯದರ್ಶಿ ಅರವಿಂದ ಕುಲಕರ್ಣಿ ಅವರು ಪತ್ರಿಕಾಗೋಷ್ಠಿಯನ್ನು ಕರೆದು ಬೂದಿಹಾಳ-ಫೀರಾಪೂರ ಏತ ನೀರಾವರಿ ಯೋಜನೆಗೆ ಸಂಬಂದಿಸಿ ಕೊನೆಯ ಹಂತದ ಕಾಮಗಾರಿಗೆ ಸರ್ಕಾರವು ಹಣ ಬಿಡುಗಡೆಗೊಳಿಸಲಾರದ್ದನ್ನು ಖಂಡಿಸಿ ಕಳೆದ 4 ದಿನಗಳಿಂದಲೂ ಕೊಡಗಾನೂರ ಕ್ರಾಸ್‌ನಲ್ಲಿ ಸಾವಿರಾರು ರೈತರೊಂದಿಗೆ ಅಹೋರಾತ್ರಿ ಧರಣಿ ನಡೆಸುತ್ತಿದ್ದರೂ ಕೂಡಾ ಸರ್ಕಾರದಿಂದ ಸ್ಪಂದನೆ ಸಿಗಲಾರದ್ದಕ್ಕೆ ಕತ್ತೆಗಳ ಮೇರವಣಿಗೆ ನಡೆಸಲಾಗುವದೆಂದು ಪತ್ರಿಕೆಗೆ ಮಾಹಿತಿ ಒದಗಿಸಿದ್ದರು ಇದನ್ನು ಗಮನಿಸಿದ ಪೊಲೀಸ್‌ರು ಪಟ್ಟಣದಲ್ಲಿ ಕತ್ತೆಗಳ ಮಾಲಿಕ-ರಿಗೆ ಕತ್ತೆಗಳನ್ನು ಯಾರೂ ಕೊಡಕೂಡದು ಹಾಗೇನಾದರೂ ಕೊಟ್ಟಿದ್ದೇ ಆದಲ್ಲಿ ನಿಮ್ಮ ಮೇಲೆ ಕ್ರಮ ಜರುಗಿಸಬೇಕಾಗುತ್ತದೆ ಎಂಬ ಏಚ್ಚ-ರಿಕೆ ನೀಡಿದ್ದರಿಂದ ಬೆಳ್ಳಂ ಬೆಳಿಗ್ಗೆ ಕತ್ತೆಗಳನ್ನು ಕರೆತರಲು ಹೋಗಿದ್ದ ಪ್ರತಿಭಟನಾಕಾರರಿಗೆ ಕತ್ತೆಗಳು ಸಿಗದ್ದರಿಂದ ಕತ್ತೆಗಳ ಭಾವಚಿತ್ರವನ್ನು ಬ್ಯಾನರ್‌ಗೆ ಅಂಟಿಸಿ ಹಲಗೆ ಮಜಲುಗಳೊಂದಿಗೆ ಬೃಹತ್ ಪ್ರತಿಭಟನೆ ಆರಂಬಿಸಿದರಲ್ಲದೇ ಪ್ರತಿಭಟನೆಯನ್ನು ಹತ್ತಿಕ್ಕಲು ಸರ್ಕಾರದ ಜನಪ್ರತಿನಿಧಿಗಳು ಮಾಡುತ್ತಿರುವ ಷಡ್ಯಂತ್ರದ ವಿರೂದ್ದ ಕಿಡಿ ಕಾರಿದರು.

ಡಾ.ಬಿ.ಆರ್.ಅಂಬೇಡ್ಕರ್ ಸರ್ಕಲ್‌ದಿಂದ ಪ್ರಾರಂಭಗೊಂಡ ಪ್ರತಿಭಟನಾ ಮೇರವಣಿಗೆಯೂ ಬಸವೇಶ್ವರ ಸರ್ಕಲ್‌ಗೆ ಆಗಮಿಸಿ ಘಂಟೆಕಾಲ ರಸ್ತೆ ತಡೆ ನಡೆಸಿ ನಂತರ ತಹಶಿಲ್ದಾರ ಕಾರ್ಯಾಲಯಕ್ಕೆ ತೆರಳಿ ಸರ್ಕಾರಕ್ಕೆ ಬರೆದ ಮನವಿಪತ್ರವನ್ನು ತಹಶಿಲ್ದಾರ ಶ್ರೀಮತಿ ವಿನಯಾ ಹೂಗಾರ ಅವರಿಗೆ ಸಲ್ಲಿಸಿದರು.

ಈ ಸಮಯದಲ್ಲಿ ಅಖಂಡ ಕರ್ನಾಟಕ ರೈತ ಸಂಘದ ರಾಜ್ಯ ಪ್ರಧಾನ ಕಾರ್ಯದರ್ಶಿ ಅರವಿಂದ ಕುಲಕರ್ಣಿ ಅವರು ಮಾತನಾಡಿ ರೈತರಾದ ನಾವುಗಳು ಪೊಲೀಸ್ ಇಲಾಖೆಯ ಸಹಕಾರದೊಂದಿಗೆ ಶಾಂತಿಯುತವಾಗಿ ಹೋರಾಟವನ್ನು ಮಾಡುತ್ತಾ ಬಂದಿದ್ದೇವೆ ನಾವು ಕಾನೂನನ್ನು ಯಾವಾಗಲೂ ಕೈಗೆ ತೆಗೆದುಕೊಂಡಿಲ್ಲಾ ನಮ್ಮ ಹೋರಾಟವನ್ನು ಹತ್ತಿಕ್ಕುವ ಸಲುವಾಗಿ ಸರ್ಕಾರದ ಮಂತ್ರಿಗಳು ಪೊಲೀಸ್ ಅಧಿಕಾರಿಗಳನ್ನು ತಮ್ಮ ಸ್ವಾಥ-'ರ್ಕಕ್ಕೆ ಬಳಕೆ ಮಾಡಿಕೊಂಡು ಇಂದಿನ ನಮ್ಮ ಹೋರಾಟಕ್ಕೆ ಕತ್ತೆಗಳನ್ನು ಸಿಗದಂತೆ ಮಾಡಿದ್ದಾರೆ ಸದ್ಯಕ್ಕೆ ಕತ್ತೆಗಳನ್ನು ಓಡಿಸುವಂತಹ ಕೆಲಸ ಮಾಡಿರಬಹುದು ಮುಂದಿನ ದಿನಗಳಲ್ಲಿ ನಾವೇ ಕತ್ತೆಗಳನ್ನು ಖರೀದಿ ಮಾಡ್ತಿವಿ ನೀವು ಹ್ಯಾಗೆ ಕತ್ತೆಗಳನ್ನು ಓಡಿಸುತ್ತಿರಿ ನೋಡ್ತಿವಿ ಎಂದು ಸವಾಲ್ ಹಾಕಿದ ಕುಲಕರ್ಣಿ ಅವರು ಬೂದಿಹಾಳ-ಫೀರಾಪೂರ ಏತ ನೀರಾವರಿ ಯೋಜನೆ ಸಂಬಂದಿಸಿದ ಹೊಲಗಾಲುವೆ ನಿರ್ಮಾಣಕ್ಕೆ ಸದ್ಯ ಅವಶ್ಯವಿರುವ 170 ಕೋಟಿ ಅನುದಾನವನ್ನು ಕೂಡಲೇ ಸರ್ಕಾರ ಬಿಡುಗಡೆ ಮಾಡಿ ರೈತರ ನೆರವಿಗೆ ಬರಬೇಕೆಂದು ಒತ್ತಾಯಿಸಿದರು.

ಇನ್ನೋರ್ವ ರೈತ ಮುಖಂಡ ಸುರೇಶಕುಮಾರ ಇಂಗಳಗೇರಿ ಅವರು ಮಾತನಾಡಿ ಬೂದಿಹಾಳ-ಫೀರಾಪೂರ ಏತ ನೀರಾವರಿ ಯೋಜನೆಯ ಕೊನೆಯ ಹಂತದ ಕಾಮಗಾರಿಗೆ ಹಣ ಬಿಗಡೆಗೆ ಸರ್ಕಾರಕ್ಕೆ ಮತ್ತು ಮಂತ್ರಿಗಳಿಗೆ ಮನವಿ ಸಲ್ಲಿಸಿದ್ದಾಗಿದೆ ಆದರೂ ಸ್ಪಂದಿಸಿಲ್ಲಾ ಈಗಾಗಲೇ 1500 ಕೋಟಿ ಖರ್ಚು ಮಾಡಿ ಕಾಮಗಾರಿ ಮುಕ್ತಾಯಗೊಳಿಸಲಾಗಿದೆ ಮುಂದುವರೆದ ಹೊಲಗಾಲುವೆ ಕಾಮಗಾರಿ ಮಾಡಿದ್ದರೆ ಹಿಂದೆ ಖರ್ಚು ಮಾಡಿದ ಹಣ ಹಳ್ಳದಲ್ಲಿ ಹುಣಸೇಹಣ್ಣು ತೊಳೆದಂತಾಗಲಿದೆ ಎಂದ ಅವರು ನಮ್ಮ ವಯಕ್ತಿಕವಾಗಿ ಏನೂ ಸರ್ಕಾರಕ್ಕೆ ಕೇಳಿಲ್ಲಾ ರೈತ-ರಿಗೆ ನೀರು ಕೊಡ್ರಿ ಮುಂದಿನ ದಿನ ಆ ರೈತ ಸರ್ಕಾರಕ್ಕೆ ಸಾಲಕೊಡುವಂತಹ ಶಕ್ತಿ ಬರಲಿದೆ ಇದನ್ನು ಪ್ರತಿಯೊಬ್ಬ ರಾಜಕಾರಣಿ ಅರೀತುಕೊಳ್ಳಬೇಕೆಂದ ಅವರು ಕೂಡಲೇ ಸರ್ಕಾರ ಈ ಯೋಜನೆಗೆ ಅವಶ್ಯವಿರುವ 170 ಕೋಟಿ ಅನುದಾನ ಬಿಡುಗಡೆಗೊಳಿಸಬೇಕೆಂದು ಒತ್ತಾಯಿಸಿದರು.

ಇನ್ನೋರ್ವ ರೈತ ಮುಖಂಡ ಪ್ರಭುಗೌಡ ಬಿರಾದಾರ(ಅಸ್ಕಿ), ಅವರು ಮಾತನಾಡಿ ಈಗೀನ ಕಾಂಗ್ರೇಸ್ ಸರ್ಕಾರ ಪಂಚೇಂದ್ರಿಗಳನ್ನು ಕಳೆದಿಕೊಂಡಿರುವ ಸರ್ಕಾರವಾಗಿದೆ ಕಳೆದ 4 ದಿನಗಳಿಂದ ರೈತರು ಹೋರಾಟ ಮಾಡುತ್ತಿದ್ದರೂ ಕೂಡಾ ಯಾರೂ ಒಬ್ಬ ಸರ್ಕಾರದ ಜನಪ್ರತಿನಿಧಿ ಅಧಿಕಾರಿಗಳು ಬೆಟ್ಟಿ ನೀಡಿ ಸ್ಪಂದಿಸದಿರುವದು ಸರ್ಕಾರದ ನಡೆ ಏತ್ತಿ ತೋರಿಸುತ್ತದೆ ಎಂದ ಅವರು ಕಾಂಗ್ರೇಸ್ ಸರ್ಕಾರ ಲಜ್ಜೆಗಟ್ಟ ಸರ್ಕಾರವಾಗಿದೆ ಈ ನಮ್ಮ ರೈತರ ಹೋರಾಟ ಬೇಡಿಕೆ ಇಡೇ-ರಿಸುವವರೆಗೂ ನಿಲ್ಲುವದಿಲ್ಲಾ ಇದನ್ನು ಸರ್ಕಾರದ ಜನಪ್ರತಿನಿಧಿಗಳು ಮಂತ್ರಿಗಳು ಅರೀತುಕೊಳ್ಳಬೇಕೆಂದ ಅವರು ಅಧಿಕಾರಕ್ಕೆ ಬರುವ ಮುಂಚೆ ನಮ್ಮ ನಡೆ ಕೃಷ್ಣೆಯ ಕಡೆಗೆ ಎಂದು ಪಾದಯಾತ್ರೆ ಮಾಡಿ ಈಗ ಕೃಷ್ಣೆ ಮತ್ತು ರೈತರನ್ನು ಮರೆತ್ತಿದ್ದಾರೆಂದು ಕಿಡಿ ಕಾರಿದರು.

ಈ ಸಮಯದಲ್ಲಿ ಅಖಂಡ ಕರ್ನಾಟಕ ರೈತ ಸಂಘದ ತಾಲೂಕಾ ಅಧ್ಯಕ್ಷ ಬಾಲಪ್ಪಗೌಡ ಪಾಟೀಲ ರೈತ ಮುಖಂಡರುಗಳಾದ ಶಿವಪುತ್ರಪ್ಪ ಚೌದ್ರಿ, ಗುರುರಾಜ ಪಡಶೆಟ್ಟಿ, ಸುರೇಶಕುಮಾರ ಇಂಗಳಗೇರಿ, ರಾಯಪ್ಪಗೌಡ ಪಾಟೀಲ, ಸಾಹೇಬಗೌಡ ಯಾಳಗಿ, ಬಸನಗೌಡ ಯಾಳವಾರ, ಬಸನಗೌಡ ಚೌದ್ರಿ, ನಾನಾಗೌಡ ಬಿರಾದಾರ, ಎಚ್.ಎನ್.ಬಿರಾದಾರ, ಡಾ.ಪ್ರಭುಗೌಡ ಬಿರಾದಾರ(ಅಸ್ಕಿ), ಸಾಯಬಣ್ಣ ಆಲ್ಯಾಳ, ಭೀಮನಗೌಡ ನಾಗರಡ್ಡಿ, ಸುಭಾಸ ಗುಂಡಕನಾಳ, ಮಹಾದೇವ ಅಸ್ಕಿ, ಪರಶುರಾಮ ತಳವಾರ, ಪರಶುರಾಮ ನಾಲತವಾಡ, ಬಾಬುಗೌಡ ಬಿರಾದಾರ, ಚಿದುಗೌಡ ಬಿರಾದಾರ, ಶಂಕ್ರಗೌಡ ದೇಸಾಯಿ, ಬಸವರಾಜ ಹೊಸಳ್ಳಿ, ಅಂಬೇಡ್ಕರ್ ಸೇನೆ ಸಂಘಟನೆಯ ಅಧ್ಯಕ್ಷ ಬಸ್ಸು ಮಾದರ, ಮಹಾದೇವ ಮಾದರ, ಗೋಪಾಲ ಕಟ್ಟಿಮನಿ, ಒಳಗೊಂಡು ನಾವದಗಿ, ನೀರಲಗಿ, ಗೊಟಗುಣಕಿ, ಗುಂಡಕನಾಳ, ಫೀರಾಪೂರ, ಕಾರನೂರ, ಕೊಡಗಾನೂರ, ಅಸ್ಕಿ, ಗ್ರಾಮ ಒಳಗೊಂಡು 38 ಗ್ರಾಮಗಳ ರೈತಾಪಿ ಜನರು ಪಾಲ್ಗೊಂಡಿದ್ದರು.

## ಯಕ್ಷಗಾನ ಪ್ರದರ್ಶನ ಇಂದು

ಮುಧೋಳ: ದಕ್ಷಿಣ ಕನ್ನಡ ಕರಾವಳಿ ಭಾಗದ ಕಲೆಯ ಜೀವವನಾಡಿ ಆರುವ ಯಕ್ಷಗಾನವು, ಉತ್ತರ ಕರ್ನಾಟಕದ ಜನರ ಜೀವನದ ಭಾಗವಾಗಿರುವ ಬೈಲಾಟ, ನಾಟಕಗಳ ಆಸಕ್ತಿ ಉಳ್ಳವರಿಗೆ, ಯಕ್ಷಗಾನ ಹೊಸ ಆಯಾಮ ನೀಡುತ್ತಾ ಈ ಭಾಗದಲ್ಲೂ ಜನರ ಮೆಚ್ಚುಗೆಗೆ ಪಾತ್ರವಾದ ನಡೂರು ಶ್ರೀ ಮಂದಾರ್ತಿ ಮಹಾಗಣಪತಿ ಯಕ್ಷಗಾನ ಮಂಡಳಿ ಯವರು ಮುಧೋಳ ಹೋಟೆಲ್ ಮಾಲಿಕರ ಸಂಘದಿಂದ ನಗರದ ರನ್ನ ಗ್ರಂಥಾಲಯದಲ್ಲಿ ಜು.18ರಂದು ರಾತ್ರಿ 9.ಕ್ಕೆ ಶ್ರೀ ಜಗನ್ಮಾತೆ ವನದುರ್ಗಿ ಕಥಾಭಾಗವನ್ನು ಪ್ರದರ್ಶಿಸಿಲಾಗುತ್ತದೆ ಎಂದು ಸಂಘದ ಅಧ್ಯಕ್ಷ ಬಾಬು ದೇವಾಡಿಗ ಪತ್ರಿಕಾ ಪ್ರಕಟನೆಯಲ್ಲಿ ತಿಳಿಸಿದ್ದಾರೆ.

ಭಾಗವತರಾದ ಸದಾಶಿವ ಅಮೀನ್ ಕೊಕ್ಕರ್ಣಿ, ಯುವ ಭಾಗವತ ಗಣೇಶ ಆಚಾರ್ಯ ಬಿಲ್ಲಾಡಿ, ಮದ್ದಳೆ ಭಾಸ್ಕರ ದೇವಾಡಿಗ, ಚಂಡೆಕುಮಾರ ಅಮೀನ ಕೊಕ್ಕರ್ಣಿ, ಪ್ರಧಾನ ಭೂಮಿಕೆಯಲ್ಲಿ ಚಿಟ್ಟಾಣಿ ನರಸಿಂಹ ಹೆಗಡೆ, ಹೆನ್ನಾಬೈಲ ವಿಶ್ವನಾಥ ಪೂಜಾರಿ, ಹರೀಶಚಂದನ್, ಪ್ರಮೋದ ಪೂಜಾರಿ ಮರವಂತೆ, ರಾಕೇಶ ಶೆಟ್ಟಿ ಮೇಗರವಳ್ಳಿ, ರಂಜಿತಕುಮಾರ ವಂಡ್ರೆ, ಸತೀಶಕುಮಾರ ಹಾಲಾಡಿ, ನಾಗರಾಜ ಪೂಜಾರಿ ದೇವಲ್ಕುಂಡ, ದಿನಕರಕುಂದರ್ ನಡೂರು, ನಂದೀಶ ಕುಮಾರ ಬಿನ್ನಾಡಿ, ಕೃಷ್ಣ ಶೆಟ್ಟಿ, ದಿನೇಶ ಪೂಜಾರಿ ಈ ಕಾರ್ಯಕ್ರಮದಲ್ಲಿ ಭಾಗವಹಸುವರು. ಈ ಕಾರ್ಯಕ್ರಮಕ್ಕೆ ಕಲಾ ಹಾಗು ಯಕ್ಷಗಾನ ಅಭಿಮಾನಿಗಳು ಪಾಲ್ಗೊಳ್ಳಬೇಕು ಎಂದು ಅವರು ಕೋರಿದ್ದಾರೆ.

## ಶಿಷ್ಯವೇತನಕ್ಕಾಗಿ ಅರ್ಜಿ ಆಹ್ವಾನ

ಗದಗ : 2025–26ನೇ ಸಾಲಿನಲ್ಲಿ ಅಲ್ಪಸಂಖ್ಯಾತರ ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಬೌದ್ಧ, ಸಿಖ್ ಮತ್ತು ಪರ್ಸಿಯನ ಜಿ.ಎನ್.ಎಂ ಮತ್ತು ಬಿ.ಎಸ್ಸಿ ನರ್ಸಿಂಗ್ ತರಬೇತಿ ಶಿಷ್ಯವೇತನ ಪಡೆಯಲು ಇಚ್ಛೆಯುಳ್ಳ ಅರ್ಹ ವಿದ್ಯಾರ್ಥಿಗಳಿಗೆ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ವಿದ್ಯಾರ್ಥಿಗಳು ಸೇವಾಸಿಂಧು ಆನ್‌ಲೈನ್ ಮೂಲಕ ಅರ್ಜಿಯನ್ನು ಸಲ್ಲಿಸಲು ಕೊನೆಯ ದಿನಾಂಕ: 30.09.2025 ಆಗಿದ್ದು ಆನ್‌ಲೈನ್ ಮೂಲಕ ಸಲ್ಲಿಸಿದ ಅರ್ಜಿಗಳನ್ನು ಖುದ್ದಾಗಿ ಅಭ್ಯರ್ಥಿಗಳೇ ಹಾಜರಾಗಿ, ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಗದಗ ಈ ಕಛೇರಿಗೆ ಸಲ್ಲಿಸಬಹುದಾಗಿದೆ. ಅಭ್ಯರ್ಥಿಗಳು ಕರ್ನಾಟಕ ರಾಜ್ಯಕ್ಕೆ ಸೇರಿದವರಾಗಿರುಬೇಕು. ಅಭ್ಯರ್ಥಿಗಳು ಅಲ್ಪಸಂಖ್ಯಾತರ ಸಮುದಾಯಕ್ಕೆ ಸೇರಿರಬೇಕು. ಪೋಷಕರ ವಾರ್ಷಿಕ ಗರಿಷ್ಟ ವರಮಾನ ರೂ 2.50ಲಕ್ಷ ಇರಬೇಕು. ವಿದ್ಯಾರ್ಥಿಗಳನ್ನು ಅನುದಾನದ ಲಭ್ಯತೆಯಾನುಸಾರ ಮೆರಿಟ್ ಆಧಾರದ ಮೇಲೆ ಆಯ್ಕೆ ಮಾಡಲಾಗುವುದು.
ವಿದ್ಯಾರ್ಥಿಗಳು ಸದರಿ ಯೋಜನೆಯಡಿ ಉತ್ತೇಜನ ಮೊತ್ತವನ್ನು ಪಡೆಯಲು ಪ್ರತಿ ಶೈಕ್ಷಣಿಕ ವರ್ಷದಲ್ಲಿ ಹೊಸ ಅರ್ಜಿಗಳನ್ನು ಸಲ್ಲಿಸತಕ್ಕದ್ದು. ಇಂಡಿಯನ್ ನರ್ಸಿಂಗ್ ಕೌನ್ಸಿಲ್ ಐ.ಎನ್.ಸಿ ಮಾನ್ಯತೆ ಪಡೆದ ಶಾಲೆ/ಕಾಲೇಜುಗಳಲ್ಲಿ ವಿದ್ಯಾಭ್ಯಾಸ ಮಾಡುತ್ತಿರುವ ವಿದ್ಯಾರ್ಥಿಗಳು ಅರ್ಹರಿರುತ್ತಾರೆ. ಪ್ಯಾರಾ ಮೆಡಿಕಲ್ ಕಾಲೇಜುಗಳು ಪ್ಯಾರಾ ಮೆಡಿಕಲ್ ಬೋರ್ಡಿನಿಂದ ಮಾನ್ಯತೆ ಪಡೆದ ಶಿಕ್ಷಣ ಸಂಸ್ಥೆಗಳಲ್ಲಿ ವಿದ್ಯಾಭ್ಯಾಸ ಮಾಡುತ್ತಿರುವ ವಿದ್ಯಾರ್ಥಿಗಳು ಅರ್ಹರಿರುತ್ತಾರೆ. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಗದಗ ಜಿಲ್ಲೆ ಗದಗ ಈ ಕಚೇರಿಯನ್ನು ಸಂಪರ್ಕಿಬಹುದಾಗಿದೆ.

## ಸಾರ್ವಜನಿಕರ ಗಮನಕ್ಕೆ

ಗದಗ : ಶಿರಹಟ್ಟಿ ಪಟ್ಟಣ ಪಂಚಾಯತಿ ವ್ಯಾಪ್ತಿಯಲ್ಲಿ ಬರುವ ಸಾರ್ವಜನಿಕರಿಗೆ ತಿಳಿಸುವುದೇನೆಂದರೆ 2025–26 ನೇ ಸಾಲಿನ ರಾಷ್ಟ್ರೀಯ ಜೀವನೋಪಾಯ ಅಭಿಯಾನ ನಿರ್ದೇಶಕರ ಪತ್ರದನ್ವಯ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರು, ಸಾರಿಗೆ ಕಾರ್ಮಿಕರು, ಗಿಗ್ ಕೆಲಸಗಾರರು, ಆರೈಕೆ ಕೆಲಸಗಾರರು, ತ್ಯಾಜ್ಯ ಕೆಲಸಗಾರರು, ಮನೆ ಕೆಲಸಗಾರರ ಗುಂಪುಗಳು ಹಾಗೂ ಕುಟುಂಬ ಸದಸ್ಯರುಗಳ ಮಹಿಳಾ ಮತ್ತು ಪುರುಷ ಸ್ವ ಸಹಾಯ ಗುಂಪುಗಳಲ್ಲಿನ ಫಲಾನುಭವಿಗಳ ಸಂಖ್ಯೆ ಮತ್ತು ವಿವರವನ್ನು ಶಿರಹಟ್ಟಿ ಪಟ್ಟಣ ಪಂಚಾಯತ್ ಕಾರ್ಯಾಲಯದ ಡೇ ನಲ್ಮ ವಿಭಾಗಕ್ಕೆ ಮಾಹಿತಿ ಸಲ್ಲಿಸಲು ತಿಳಿಸಿದೆ. ಮಾಹಿತಿ ಸಲ್ಲಿಸಲು ಜುಲೈ 25 ಕೊನೆಯ ದಿನವಾಗಿರುತ್ತದೆ. ಹೆಚ್ಚಿನ ವಿವರಗಳಿಗೆ ಶಿರಹಟ್ಟಿ ಪಟ್ಟಣ ಪಂಚಾಯತ್ ಕಾರ್ಯಾಲಯ, ದೂರವಾಣಿ ಸಂಖ್ಯೆ : 08487–295009 ಸಂಪರ್ಕಿಸಬಹುದಾಗಿದೆ.

### ಕುಕನೂರು, ಗಂಗಾವತಿಯ ತಾಯಿ ಮತ್ತು ಮಕ್ಕಳ ಆಸ್ಪತ್ರೆ:

### ಜು. 24ರಂದು ಶುಶ್ರೂಷಕ ಅಧಿಕಾರಿಗಳ ಹುದ್ದೆಗೆ ದಾಖಲಾತಿ ಪರಿಶೀಲನೆ

ಕೊಪ್ಪಳ : ಕೊಪ್ಪಳ ಜಿಲ್ಲೆಯ ಕುಕನೂರು ಹಾಗೂ ಗಂಗಾವತಿಯ ತಾಯಿ ಮತ್ತು ಮಕ್ಕಳ ಆಸ್ಪತ್ರೆಯಲ್ಲಿ ಖಾಲಿ ಇರುವ ಶುಶ್ರೂಷಕ ಅಧಿಕಾರಿಗಳ ಹುದ್ದೆಗಳ ಅಂತಿಮ ಆಯ್ಕೆ ಪಟ್ಟಿಯಲ್ಲಿರುವ ಅಭ್ಯರ್ಥಿಗಳು ದಾಖಲಾತಿ ಪರಿಶೀಲನೆಯು ಜುಲೈ 24ರಂದು ನಡೆಯಲಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಟಿ.ಲಿಂಗರಾಜು ಅವರು ತಿಳಿಸಿದ್ದಾರೆ.

ಕೊಪ್ಪಳ ಜಿಲ್ಲೆಯ ತಾಯಿ ಮತ್ತು ಮಕ್ಕಳ ಆಸ್ಪತ್ರೆ, ಕುಕನೂರು ಹಾಗೂ ಗಂಗಾವತಿಯಲ್ಲಿ ಖಾಲಿ ಇರುವ ಶುಶ್ರೂಷಕ ಅಧಿಕಾರಿಗಳ ಹುದ್ದೆಗಳ ಅಂತಿಮ ಆಯ್ಕೆ ಪಟ್ಟಿಯನ್ನು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳ ಕಛೇರಿಯ ಸೂಚನಾ ಫಲಕಕ್ಕೆ ಹಾಗೂ ಕೊಪ್ಪಳ ಜಿಲ್ಲಾ ವೆಬ್‌ತಾಣ ತಿತಿತಿ.ಇಾಠಿಠಿಚಿಟ. ಟಿಛಿ.ಏಟಿ ನಲ್ಲಿ ಪ್ರಚುರಪಡಿಸಿದ್ದು, ಅಂತಿಮ ಆಯ್ಕೆ ಪಟ್ಟಿಗಯಲ್ಲಿರುವ ಅಭ್ಯರ್ಥಿಗಳು ತಾವು ಅಪ್‌ಲೋಡ್ ಮಾಡಿರುವ ಮೂಲ ದಾಖಾಲಾತಿ ಪರಿಶೀಲನೆಗಾಗಿ ಜು. 24ಕ್ಕೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳು, ಕೊಪ್ಪಳ ಇವರ ಕಾರ್ಯಾಲಯಕ್ಕೆ ಹಾಜರಾಗಬೇಕು. ನಿಗದಿಪಡಿಸಿದ ದಿನಾಂಕದಂದು ಹಾಜರಾಗದೇ ಇರುವ ಅಭ್ಯರ್ಥಿಗಳನ್ನು ಬಿಟ್ಟು ಸಾಮಾನ್ಯ ಅರ್ಹತಾ ಪಟ್ಟಿಯಲ್ಲಿರುವ ಮುಂದಿನ ಅಭ್ಯರ್ಥಿಗಳನ್ನು ಪರಿಗಣಿಸಲಾಗುವುದು. ನಂತರದಲ್ಲಿ ಬಂದ ಅಭ್ಯರ್ಥಿಗಳನ್ನು ಯಾವುದೇ ಕಾರಣಕ್ಕೂ ಪರಿಗಣಿಸಲಾಗುವುದಿಲ್ಲ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಾರ್ಯಾಲಯದ ಪ್ರಕಟಣೆ ತಿಳಿಸಿದೆ.

### ಮದ್ಯವರ್ಜನ ಶಿಬಿರಗಳಲ್ಲಿ ಪಾಲ್ಗೊಂಡು ಉತ್ತಮ ಜೀವನ ನಡೆಸಿ: ಮಲ್ಲಗೌಡ ಪಾಟೀಲ್ ಸಲಹೆ

# ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯಿಂದ 1951ನೇ ಮದ್ಯವರ್ಜನ ಶಿಬಿರ ಕಾರ್ಯಕ್ರಮ



ಬೆಳಗಾವಿ: ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ವತಿಯಿಂದ ದಶಕಗಳಿಂದ ಮದ್ಯವರ್ಜನ ಶಿಬಿರ ನಡೆಸಿ ಕುಡಿತದ ಚಟಕ್ಕೆ ಬಲಿಯಾದವರನ್ನು ಸರಿ ದಾರಿಗೆ ತರುತ್ತಿರುವುದು ಶ್ಲಾಘನೀಯ ಕೆಲಸ ಎಂದು ಕೆಪಿಸಿಸಿ ಸದಸ್ಯರಾದ ಮಲ್ಲಗೌಡ ಕಲ್ಲಗೌಡ ಪಾಟೀಲ್ ಅವರು ಹೇಳಿದರು.

ತಾಲೂಕಿನ ಕಡೋಲಿ ವಲಯದಲ್ಲಿ ಛತ್ರಪತಿ ಶಿವಾಜಿ ಮಹಾರಾಜರ್ ಕಾರ್ಯಾಲಯದಲ್ಲಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಹಾಗೂ ಮಧ್ಯವರ್ಜನ ಶಿಬಿರ ವ್ಯವಸ್ಥಾಪನಾ ಸಮಿತಿ ಆಶ್ರಯದಲ್ಲಿ ನಡೆದ 1951ನೇ ಮಧ್ಯವರ್ಜನ ಶಿಬಿರದ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ದುಶ್ಚಟಕ್ಕೆ ಬಲಿಯಾಗುವವರು ಇಂತಹ ಶಿಬಿರಗಳಿಗೆ ಭಾಗವಹಿಸಿ ತಮ್ಮ ಬದುಕಿನ ದಿಕ್ಕನ್ನು ಬದಲಿಸಿಕೊಂಡು ಉತ್ತಮ ಜೀವನ ನಡೆಸಬೇಕೆಂದು ಸಲಹೆ ನೀಡಿದರು. ಮಧ್ಯವರ್ಜನ ಶಿಬಿರಗಳು ಸಾಮಾನ್ಯವಾಗಿ ಮದ್ಯಪಾನ, ಮಾದಕವಸ್ತುಗಳು ಮತ್ತು ಇತರ ವ್ಯಸನಗಳಿಂದ ಬಳಲುತ್ತಿರುವ ಜನರಿಗೆ ಸಹಾಯ ಮಾಡಲು ಆಯೋಜಿಸಿರುವ ಸಹಕಾರಿ ಕಾರ್ಯಕ್ರಮ, ಶಿಬಿರದಲ್ಲಿ ವೈದ್ಯಕೀಯ ಚಿಕಿತ್ಸೆ, ಕೌನ್ಸೆಲಿಂಗ್, ಮತ್ತು ಇತರ ಚಟುವಟಿಕೆಗಳ ಮೂಲಕ ವ್ಯಸನಗಳನ್ನು ನಿವಾರಿಸಲು ಸಹಾಯ ಮಾಡಲಾಗುತ್ತದೆ. ಜನರು ಇದರ ಸದ್ಬಳಿಕೆ ಮಾಡಿಕೊಳ್ಳಬೇಕು ಎಂದರು ಹೇಳಿದರು.

ಪೂಜ್ಯರ ಈ ಕಾರ್ಯಕ್ರಮ ಬಹಳ ಅದ್ಭುತವಾದಂತಹ ಕಾರ್ಯಕ್ರಮವಾಗಿದ್ದು ಸಾವಿರಾರು ಕುಟುಂಬದ ಏಳಿಗೆಗೆ ದಾರಿ ದೀಪವಾಗಿದೆ ಎಂದು ಶ್ಲಾಘಿಸಿದರು.

ಜಿಲ್ಲಾ ನಿರ್ದೇಶಕರಾದ ಸತೀಶ್ ನಾಯ್ಕ್ ಅವರು ಮಾತನಾಡಿ, ದುಶ್ಚಟಗಳಿಂದ ದೂರವಿದ್ದಲ್ಲಿ ಪ್ರಗತಿ ಸಾಧ್ಯ. ವ್ಯಸನ ಮುಕ್ತ ಸಮಾಜದ ನಿರ್ಮಾಣವೇ ಶಿಬಿರದ ಉದ್ದೇಶವಾಗಿದೆ. ಶ್ರೀ ಕ್ಷೇತ್ರ ಧರ್ಮಸ್ಥಳದ ಧರ್ಮಾಧಿಕಾರಿ ಡಾ. ವೀರೇಂದ್ರ ಹೆಗ್ಗಡೆಯವರ ನೇತೃತ್ವದಲ್ಲಿ ಮದ್ಯವರ್ಜನ ಶಿಬಿರ ಇಂದು ದೇಶದ ಮೂಲೆ ಮೂಲೆಗಳಲ್ಲಿ ನಡೆಯುತ್ತಿದೆ. ಈವರೆಗೆ 1952 ಶಿಬಿರಗಳು ನಡೆದಿದ್ದು ಈವರೆಗೆ ಲಕ್ಷಾಂತರ ಜನರನ್ನು ವ್ಯಸನ ಮುಕ್ತರನ್ನಾಗಿಸಲಾಗಿದೆ ಎಂದು

ಶಿಬಿರಾರ್ಥಿಗಳಿಗೆ ಮಾಹಿತಿ ಮಾರ್ಗದರ್ಶನ ನೀಡಿದರು.

ಈ ಸಂದರ್ಭದಲ್ಲಿ ಅಧ್ಯಕ್ಷತೆಯನ್ನು ರಾಜು ಹೂವಪ್ಪ, ಮಾಯಣ್ಣ ವ್ಯವಸ್ಥಾಪನ ಸಮಿತಿ ಅಧ್ಯಕ್ಷರು ವಹಿಸಿಕೊಂಡಿದ್ದರು. ಜಿ ಆರ್ ಸೋನಿಯಾರ್ , ಜಿಲ್ಲಾ ಜನಜಾಗೃತಿ ವೇದಿಕೆ ಜಿಲ್ಲಾಧ್ಯಕ್ಷರಾದ ಬಸವರಾಜ ಸೊಪ್ಪಿಮಠ, ಪ್ರಾದೇಶಿಕ ಕಚೇರಿಯ ಜನಜಾಗೃತಿ ಯೋಜನಾಧಿಕಾರಿ ಭಾಸ್ಕರ್ ಅವರು ಪ್ರಾಸ್ತಾವಿಕ ಮಾತನಾಡಿದರು. ವ್ಯವಸ್ಥಾಪನಾ ಸಮಿತಿ ಪದಮದಾಧಿಕಗಳು, ಕ್ಷೇತ್ರ ಯೋಜನಾಧಿಕಾರಿ, ಶಿಬಿರದಿಕಾರಿ, ಆರೋಗ್ಯ ಸಹಾಯಕಿ, ವಲಯದ ಮೇಲ್ವಿಚಾರಕರು ಹಾಗೂ ಪೊಲೀಸ್ ಇಲಾಖೆಯ ಸಿಬ್ಬಂದಿಗಳು ಉಪಸ್ಥಿತರಿದ್ದರು.

### ಪೂರ್ವಭಾವಿ ಸಿದ್ದತಾ ಸಭೆ ; ಪ್ಲಾಸ್ಟಿಕ್ ಧ್ವಜ ಬಳಸದಂತೆ ಕ್ರಮ

# ಸಂಭ್ರಮದ ಸ್ವಾತಂತ್ರ್ಯೋತ್ಸವ ಆಚರಣೆಗೆ ಡಿಸಿ ಸಂಗಪ್ಪ ಕರೆ



ಬಾಗಲಕೋಟೆ: : ಜಿಲ್ಲೆಯಲ್ಲಿ ಆಗಸ್ಟ 15 ರಂದು ಜರುಗಲಿರುವ ಸಂಭ್ರಮದ ಸ್ವಾತಂತ್ರೋತ್ಸವ ಆಚರಣೆಗೆ ಜಿಲ್ಲಾಡಳಿತದಿಂದ ಸಕಲ ಸಿದ್ದತೆ ಮಾಡಿಕೊಳ್ಳಲಾಗುತ್ತಿದೆ ಎಂದು ಜಿಲ್ಲಾಧಿಕಾರಿ ಸಂಗಪ್ಪ ಹೇಳಿದರು.

ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಗುರುವಾರ ಜರುಗಿದ ಸ್ವಾತಂತ್ರೋತವ ದಿನಾಚರಣೆ ಕುರಿತ ಪೂರ್ವ ಸಿದ್ದತಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು ಪ್ರತಿ ವರ್ಷದಂತೆ ಈ ವರ್ಷವೂ ಸ್ವಾತಂತ್ರ್ಯೋತ್ಸವವನ್ನು ಸಂಭ್ರಮದಿಂದ ಆಚರಿಸುವ ನಿಟ್ಟಿನಲ್ಲಿ ರಚಿಸಲಾದ ವಿವಿಧ ಸಮಿತಿಗಳ ಸಿದ್ದತೆ ಕುರಿತು ಚರ್ಚಿಸಿದರು. ಯಾವುದೇ ರೀತಿಯ ಲೋಪವಾಗದಂತೆ ಎಲ್ಲ ರೀತಿ ಸಿದ್ದತೆಗಳನ್ನು ಮಾಡಿಕೊಳ್ಳಬೇಕು. ಪ್ಲಾಸ್ಟಿಕ್ ಧ್ವಜ ಅಂಗಡಿಗಳಲ್ಲಿ ಮಾರಾಟವಾಗದಂತೆ ನಗರಸಭೆ ನಿಗಾವಹಿಸಲು ತಿಳಿಸಿದ ಜಿಲ್ಲಾಧಿಕಾರಿಗಳು ಸುತ್ತೋಲೆ ಹೊರಡಿಸುವಂತೆ ಶಾಲಾ ಶಿಕ್ಷಣ ಇಲಾಖೆಗೆ ಸೂಚಿಸಿದರು.


ಆಗಸ್ಟ 15 ರಂದು ಬೆಳಿಗ್ಗೆ 9 ಗಂಟೆಗೆ ಜಿಲ್ಲಾ ಕ್ರೀಡಾಂಗಣದಲ್ಲಿ ಜಿಲ್ಲಾ ಉಸ್ತುವಾರಿ ಸಚಿವರಿಂದ ಧ್ವಜಾರೋಜಹಣ ನೆರವೇರಲಿದ್ದು, ಪೋಲಿಸ್, ಗೃಹರಕ್ಷಕದಳ, ಎನ್‌ಸಿಸಿ, ಸ್ಕೌಟ್ಸ್ ಮತ್ತು ಗೈಡ್ಸ್ ಹಾಗೂ ಮಾಜಿ ಸೈನಿಕರ ತಂಡ ಒಳಗೊಂಡಂತೆ ಆಕರ್ಷಕ ಪಥಸಂಚಲನ ಹಮ್ಮಿಕೊಳ್ಳಲಾಗುತ್ತಿದೆ. ಶಿಷ್ಟಾಚಾರದ ಪ್ರಕಾರ ಆಮಂತ್ರಣ ಪತ್ರಿಕೆ ಮುದ್ರಣ ಹಾಗೂ ಮಾಜಿ ಸೈನಿಕರಿಗೆ, ವಿವಿಧ ಕ್ಷೇತ್ರಗಳಲ್ಲಿ ಉತ್ತಮ ಸೇವೆ ಸಲ್ಲಿಸಿದವರಿಗೆ ಸನ್ಮಾನ ಮಾಡಲಾಗುತ್ತಿದೆ. ಕಾರ್ಯಕ್ರಮದಲ್ಲಿ ಸಾಂಸ್ಕೃತಿಕ ಕಾರ್ಯಕ್ರಮ, ದೇಶಭಕ್ತಿ ಗೀತೆ ಹಾಡಿಸಲು ತಂಡಗಳನ್ನು ಆಯ್ಕೆ ಮಾಡಲು ತಿಳಿಸಿದರು.

ಕಾರ್ಯಕ್ರಮ ಯಶಸ್ವಿಗೆ ವಿವಿಧ ಸಮಿತಿಗಳನ್ನು ರಚಿಸಲಾಗಿದ್ದು, ಸಮಿತಿಗೆ ವಹಿಸಿದ ಜವಾಬ್ದಾರಿಯನ್ನು ತಪ್ಪದೇ ಪಾಲಿಸಬೇಕು. ಶಿಷ್ಟಾಚಾರಕ್ಕೆ ಲೋಪವಾಗದಂತೆ ಧ್ವಜ ಸಂಹಿತೆಗೆ ಯಾವುದೇ ತರಹ ಅಪಚಾರವಾಗದಂತೆ ನೋಡಿಕೊಳ್ಳಲು ಸೂಚಿಸಿದ ಅವರು ಧ್ವಜಾರೋಹಣ ವ್ಯವಸ್ಥೆ ಮಾಡಲು ಭಾರತ ಸೇವಾದಳ, ಪೋಲಿಸ್ ಇಲಾಖೆ, ತಹಶೀಲ್ದಾರ ಹಾಗೂ ಯುವಜನ ಸೇವಾ ಹಾಗೂ ಕ್ರೀಡಾಧಿಕಾರಿಗಳಿಗೆ ವಹಿಸಿದರೆ, ಬಂದೂಬಸ್ತಿ ವ್ಯವಸ್ಥೆಗೆ ಪೋಲಿಸ್ ಇಲಾಖೆಗೆ ತಿಳಿಸಲಾಯಿತು. ಜಿಲ್ಲಾ ಕ್ರೀಡಾಂಗಣ ಸ್ವಚ್ಛತೆಗೆ ನಗರಸಭೆಗೆ ಸೂಚಿಸಲಾಯಿತು.

ಕ್ರೀಡಾಂಗಣದಲ್ಲಿ ಸ್ಟೇಜ್ ನಿರ್ಮಾಣ, ಗಣ್ಯರಿಗೆ, ಶಾಸಕರಿಗೆ, ಸಂಸದರುಗಳಿಗೆ ಹಾಗೂ ಸನ್ಮಾನಿತರಿಗೆ, ಪತ್ರಕರ್ತರಿಗೆ ಸೂಕ್ತ ಆಸನಗಳ ವ್ಯವಸ್ಥೆ ಕಲ್ಪಿಸಬೇಕು. ಧ್ವನಿವರ್ಧಕ ಹಾಗೂ ಜನರೇಟರ್ ವ್ಯವಸ್ಥೆ ಕೈಗೊಳ್ಳಲು ಸೂಚಿಸಿದರು. ಕುಡಿಯುವ ನೀರಿನ ವ್ಯವಸ್ಥೆ, ಶಾಲಾ ಮಕ್ಕಳಿಗೆ ಸಿಹಿ ವಿತರಣೆಗೆ ಕ್ರಮವಹಿಸಬೇಕು. ಜಿಲ್ಲಾಡಳಿತ ಭವನ ಸೇರಿದಂತೆ ತಾಲೂಕ ಆಡಳಿತ ಭವನ, ಜಿಲ್ಲಾ ಕ್ರೀಡಾಂಗಣಕ್ಕೂ ವಿದ್ಯುತ್ ಅಲಂಕಾರ ಮಾಡುವಂತೆ ಸೂಚಿಸಲಾಯಿತು.

ಸಭೆಯಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಸಿದ್ದಾರ್ಥ ಗೋಯಲ್, ಅಪರ ಜಿಲ್ಲಾಧಿಕಾರಿ ಅಶೋಕ ತೇಲಿ, ಆಹಾರ ಇಲಾಖೆಯ ಜಂಟಿ ನಿರ್ದೇಶಕ ಶ್ರೀಶೈಲ ಕಂಕಣವಾಡಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಮಂಜುನಾಥ ಡಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ದಿ ಇಲಾಖೆಯ ಉಪನಿರ್ದೇಶಕ ಕೆ.ಪ್ರಭಾಕರ, ಪಶು ಇಲಾಖೆಯ ಉಪನಿರ್ದೇಶಕ ಎಸ್.ಎಚ್.ಕರಡಿಗುಡ್ಡ, ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಗುರಪಾದ ಡೂಗನವರ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಹತ್ತಿ ಬೆಳೆಯ ಪ್ರಮುಖ ಕೀಟಗಳ ಸಮಗ್ರ ನಿರ್ವಹಣೆ: ರೈತರಿಗೆ ಸಲಹೆ



ಕೊಪ್ಪಳ : ಹತ್ತಿ ಬೆಳೆಯಲ್ಲಿ ಕಂಡುಬರುವ ಪ್ರಮುಖ ಕೀಟಗಳಾದ ಮಿರಿಡ್ ತಿಗಣೆ, ಥ್ರೀಪ್ಸ್, ಹಿಟ್ಟು ತಿಗಣೆ, ಹಸಿರು ಜಿಗಿಹುಳು, ಬಿಳಿನೊಣ, ಗುಲಾಬಿ ಕಾಯಿಕೊರಕದ ಸಮಗ್ರ ನಿರ್ವಹಣಾ ಕ್ರಮಗಳ ಕುರಿತು ಕೃಷಿ ಇಲಾಖೆಯಿಂದ ರೈತರಿಗೆ ಸಲಹೆಗಳನ್ನು ನೀಡಲಾಗಿದೆ.
ಹತೋಟಿ ಕ್ರಮಗಳು: ಹತ್ತಿ ಬೆಳೆಯಲ್ಲಿ ಕಂಡುಬರುವ ಪ್ರಮುಖ ಕೀಟಗಳ ಹತೋಟಿಗಾಗಿ ರೈತರು ಬೇಸಿಗೆಯಲ್ಲಿ ಆಳವಾಗಿ ಉಳುಮೆ ಮಾಡುವುದು. ಹತ್ತಿ ಬೆಳೆಯ ಅವಧಿ ಮುಗಿದ ನಂತರ ಗಿಡಗಳನ್ನು ಟ್ಯಾಕ್ಟರ್ ಚಾಲಿತ ಕೇಡರ್ನಿಂದ ಕಿತ್ತು ಪುಡಿ ಮಾಡಿ ಸೇರಿಸುವುದು. ಬಾದೆಗೊಳಗಾದ ಕಾಯಿಗಳನ್ನು ಹತ್ತಿ ಗಿಡದಿಂದ ಕಿತ್ತು ನಾಶಪಡಿಸಬೇಕು. ಆಶ್ರಯ ಕಳೆಗಳಾದ ಅಬುಟಿಲಾನ್, ಪಾರ್ಥೆನಿಯಮ್, ವಿಭೂತಿ ಗಿಡ ಮತ್ತು ಇತರ ಕಳೆಗಳನ್ನು ಕಿತ್ತು ನಾಶಮಾಡುವುದು. ಹತ್ತಿ ಬೆಳೆಯ ಸುತ್ತಲು ನಾಲ್ಕು ಸಾಲು ಸಜ್ಜೆ ಬೆಳೆಯುವುದರಿಂದ ಸ್ವಲ್ಪ ಮಟ್ಟಿಗಾದರು ಥ್ರಿಪ್ಸ್ ನುಸಿ ಮತ್ತು ಹಿಟ್ಟು ತಿಗಣೆ ಕೀಟಗಳ ಬಾಧೆಯನ್ನು ನಿಯಂತ್ರಿಸಬಹುದು. ಆಯಾ ಪ್ರದೇಶಕ್ಕೆ ಶಿಫಾರಸ್ಸು ಮಾಡಿದ ಬಿಟಿ ಹತ್ತಿಯ ಶಕ್ತಿಮಾನ್ ತಳಿಗಳನ್ನು ಅದರಲ್ಲೂ ಮೂರನೆ ಸಂತತಿಯ **(31 generation Bt. Cotton)** ತಳಿಗಳನ್ನು ಉಪಯೋಗಿಸಬೇಕು.

ಬಿತ್ತನೆಗೆ ಮೊದಲು ಪ್ರತಿ ಕೆ.ಜಿ. ಬಿಟಿ ಹತ್ತಿ ಬೀಜಕ್ಕೆ 15 ಮಿ.ಲೀ ಇಮಿಡಾಕ್ಲೋಪ್ರಿಡ್ 60 ಎಫ್.ಎಸ್. ದಿಂದ ಬೀಜೋಪಚಾರ ಮಾಡಿದ ಕಾರಣ ಮೊದಲ ಹಂತದಲ್ಲಿ ಬರುವ ರಸ ಹೀರುವ ಕೀಟಗಳನ್ನು (ಒಂದು




ತಿಂಗಳವರೆಗೆ) ನಿಯಂತ್ರಿಸಬಹುದು. ಅರ್ಕಷಕ ಬೆಳೆಯಾಗಿ ಬೆಂಡೆ. ಹಳದಿ ಚೆಂಡು ಹೂವು ಮತ್ತು ತೊಗರಿ ಬೆಳೆಯನ್ನು ಬೆಳೆಯುವುದು. ರಸ ಹೀರುವ ಕೀಟಗಳನ್ನು ನಿಯಂತ್ರಿಸಲು ಪ್ರತಿ ಎಕರೆಗೆ 10 ರಂತೆ ಹಳದಿ ಬಣ್ಣದ ಅಂಟಿನ ಬಲೆಗಳನ್ನು ಬೆಳೆಯ ಒಂದು ಅಡಿ ಎತ್ತರಕ್ಕೆ ನೆಡಬೇಕು.
ಕಾಯಿಕೊರಕ ಕೀಟದ ಸಮೀಕ್ಷೆಗಾಗಿ ಪ್ರತಿ ಹೆಕ್ಟೇರಿಗೆ 5 ರಂತೆ ಲಿಂಗಾಪರ್ಕ ಬಲೆಗಳನ್ನು ಉಪಯೋಗಿಸಬೇಕು. ಗುಲಾಬಿ ಕಾಯಿಕೊರಕದ ತತ್ತಿಗಳನ್ನು ನಾಶಪಡಿಸಲು ಟ್ರೈಕೋಗ್ರಾಮ



ಬ್ಯಾಕ್ಟೇರಿಯಾ ಎಂಬ ಪರತಂತ್ರ ಜೀವಿಯನ್ನು ಎಕರೆಗೆ 60000 ರಂತೆ ಬೆಳೆಯು 70 ರಿಂದ 75 ಹಾಗೂ 80 ರಿಂದ 85 ದಿವಸವಿದ್ದಾಗ ಬಿಡಬೇಕು. ಕ್ರಿಮಿಟ್–ಪಿ.ಬಿ.ಡಬ್ಲೂ (ಅಖಇ–ಒಖಖಿ–ಕಃಥ) ಎಂಬ ವಿನೂತನ ಅಂಟುರೂಪದ ಪದಾರ್ಥಗಳನ್ನು 35 ರಿಂದ 40 ದಿವಸದ ಬೆಳೆಯಿದ್ದಾಗ ಎಕರೆಗೆ 125 ಗ್ರಾಂ ನಂತೆ 400 ಗಿಡಗಳ ಕುಡಿಯ ಮೇಲೆ ಹಚ್ಚಬೇಕು. ಇದೇ ರೀತಿಯಾಗಿ 125 ಗ್ರಾಂ. ಸ್ಪ್ರಾಟ್ ಅನ್ನು ಬೆಳೆಯು 65 ರಿಂದ 70, 95 ರಿಂದ 100 ಮತ್ತು 125 ರಿಂದ 130 ದಿವಸವಿದ್ದಾಗ ಹಚ್ಚುವುದರಿಂದ ಗಂಡು ಮತ್ತು ಹೆಣ್ಣು ಪತಂಗಗಳು ಸಂಯೋಗ ಹೊಂದದಂತೆ ಮಾಡಿ ಮುಂದಿನ ಸಂತತಿಯನ್ನು ಗಣನೀಯವಾಗಿ ಕಡಿಮೆಗೊಳಿಸಬಹುದು.

ಪಿ.ಬಿ. ರೋಪೆನ್ನು (ಕಃ–ಖಔಕಇಖ) ಒಂದು ಎಕರೆಗೆ 150 ರಂತೆ ಅಥವಾ 1 ರೋಪಲ್ ಪ್ರತಿ 50 ಚದರ ಮೀಗೆ ಹತ್ತಿ ಬೆಳೆಯ ಕಾಂಡದ ಮಧ್ಯ ಭಾಗಕ್ಕೆ 40 ರಿಂದ 50 ದಿನಗಳೊಳಗಾಗಿ ಕಟ್ಟಬೇಕು. ಕೀಟನಾಶಕಗಳ ಸಿಂಪರಣೆ ಬೆಳೆಯ ಮೊದಲನೇ ಹಂತದಲೀ ಬರುವ ರಸ ಹೀರುವ ಕೀಟಗಳ ಹತೋಟಿಗಾಗಿ 0.8 ಮಿ.ಲೀ. ಆಫಿಡೋಪೈರೊಪೆನ್ 10 ಇ.ಸಿ. ಅಥವಾ 0.30 ಗ್ರಾಂ ಡೈನೋಟಿಪ್ಯೂರ್ನ್ 20 ಎಸ್.ಜಿ. ಅಥವಾ 0.5 ಮಿ. ಲೀ. ಸೈನೊಚಿರಮ್ 11.7 ಎಸ್.ಸಿ ಅಥವಾ 0.4 ಗ್ರಾಂ ಪೋನಿಕ್ ಅಮೈಡ್ 50 ಡಬ್ಲ್ಯೂ.ಜಿ ಒಂದು ಲೀ. ನೀರಿನ ಬೆರೆಸಿ ಸಿಂಪಡಿಸುವುದರಿಂದ ಹತೋಟಿ ಮಾಡಬಹುದು. ಮೈಟ್ ನುಸಿ ಹಾವಳಿ ಕಂಡು ಬಂದಲ್ಲಿ ಪ್ರತಿ ಲೀಟರ್ ಸಿಂಪರಣಾ ದ್ರಾವಣಕ್ಕೆ 1 ಗ್ರಾಂ. ಡೈಫ್ರೆಂಥೀಯುರಾನ್ 50 ಡಬ್ಲ್ಯೂ.ಜಿ



ಅಥವಾ 1 ಮೀ.ಲೀ. ಸೈರೊಮೆಸಿಫೆನ್ 24 ಎಸ್.ಸಿ ಬೆರೆಸಿ ಸಿಂಪಡಿಸಬೇಕು. ಗುಲಾಬಿ ಕಾಯಿಕೊರಕದ ಭಾಧೆ ಕಂಡು ಬಂದಲ್ಲಿ ಶೇ.5ರ ಬೆಳೆಯ ಜೀವಿನ ಕಷಾಯಿ ಅಥವಾ ಬೇವಿನ ಮೂಲದ ಕೀಟನಾಶಕ 3 ಮಿ.ಲೀ ಅಥವಾ 1 ಮಿ.ಲ್ಲಿ ಲ್ಯಾಮ್ಡಾಸಹಿರೋಡ್ರಿನ್ 5 ಇ.ಸಿ. ಅಥವಾ 2 ಮಿ.ಲೀ. ಪ್ರೋಫೆನೋಫಾಸ್ 50 ಇ.ಸಿ. ಅಥವಾ 0.5 ಮಿ.ಲಿ.ಸೈನೋಟೆರಮ್ 11 ಎಸ್.ಸಿ. ಪ್ರತಿ ಲೀಟರ್ ನೀರಿಗೆ ಬೆರೆಸಿ ಕೀಟನಾಶಕವನ್ನು ಸಿಂಪಡಿಸಬೇಕು.

ಹೆಚ್ಚಿನ ಮಾಹಿತಿಗಾಗಿ ಕೊಪ್ಪಳ ಜಿಲ್ಲೆಯ ರೈತ ಸಂಪರ್ಕ ಕೇಂದ್ರ ಅಥವಾ ಸಹಾಯಕ ಕೃಷಿ ನಿರ್ದೇಶಕರ ಕಛೇರಿ ಅಥವಾ ಗಂಗಾವತಿಯ ಕೃಷಿ ವಿಜ್ಞಾನ ಕೇಂದ್ರಕ್ಕೆ ಸಂಪರ್ಕಿಸುವಂತೆ ಕೊಪ್ಪಳ ಕೃಷಿ ಇಲಾಖೆಯ ಪ್ರಕಟಣೆ ತಿಳಿಸಿದೆ.

# ಮಕ್ಕಳ ಹಕ್ಕುಗಳ ಕುರಿತು ಜಾಗೃತಿ ಕಾರ್ಯಕ್ರಮ

ಕೊಪ್ಪಳ : ಜಿಲ್ಲಾ ಮಕ್ಕಳ ರಕ್ಷಣಾ ಘಟಕದಿಂದ ಗಂಗಾವತಿಯ ಸೇಂಟ್ ಪಾಲ್ಸ್ ಪ್ರೌಢ ಶಾಲೆಯಲ್ಲಿ ಜುಲೈ 15 ರಂದು ಮಕ್ಕಳ ಹಕ್ಕುಗಳು ಹಾಗೂ ಮಕ್ಕಳ ಪರವಾಗಿ ಕಾನೂನುಗಳು, ವಿಶೇಷವಾಗಿ ಬಾಲ್ಯ ವಿವಾಹ ನಿಷೇಧ ಕುರಿತು ಜಾಗೃತಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.

ಕಾರ್ಯಕ್ರಮದಲ್ಲಿ ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಸಮಾಜಕಾರ್ಯಕರ್ತೆಯಾದ ಯಮನಮ್ಮ ರವರು ಬಾಲ್ಯ ವಿವಾಹ ನಿಷೇಧ ಕಾಯ್ದೆ 2006, ತಿದ್ದುಪಡಿ–2016 ಹಾಗೂ ಲೈಂಗಿಕ ಅಪರಾಧಗಳಿಂದ ಮಕ್ಕಳ ಸಂರಕ್ಷಣಾ ಕಾಯ್ದೆ 2012ರ ಕುರಿತು, ಮಕ್ಕಳ ಹಕ್ಕುಗಳ ಬಗ್ಗೆ ಸಂಪೂರ್ಣ ಮಾಹಿತಿ ನೀಡಿದರು.

ಗಂಗಾವತಿ ನಗರ ಪೊಲೀಸ್ ಠಾಣೆಯ ಎ.ಎಸ್.ಐ ಶಿವಶರಣಪ್ಪ ಇವರು ಪ್ರತಿ ಗುರುವಾರ ತೆರೆದ



ಮನೆ ಕಾರ್ಯಕ್ರಮಕ್ಕೆ ಮಕ್ಕಳನ್ನು ಠಾಣೆಗೆ ಕರೆತರುವಂತೆ ಶಾಲಾ ಮುಖ್ಯಸ್ಥರಿಗೆ ತಿಳಿಸಿದರು ಮತ್ತು (ಆನ್‌ಲೈನ್ ಸೇಫ್ಟಿ) ಇಂಟರ್ ನೇಟ್ ಬಳಕೆಯ ಸುರಕ್ಷತೆಯ ಬಗ್ಗೆ ಸವಿಸ್ತಾರವಾಗಿ ಮಕ್ಕಳಿಗೆ ತಿಳಿಸಿದರು.

ಮಕ್ಕಳ ಸಹಾಯವಾಣಿ–1098 ನ ವಿಷಯ ನಿರ್ವಾಹಕರಾದ ಬಸಮ್ಮ ಅವರು ಮಕ್ಕಳ ಸಹಾಯವಾಣಿ–1098 ಕಾರ್ಯವೈಖರಿ, ಮಕ್ಕಳ ರಕ್ಷಣಾ ನೀತಿ 2016ರ ಅಂಶಗಳ ಅನುಷ್ಠಾನದ ಕುರಿತು ಹಾಗೂ ಸುರಕ್ಷಿತ ಮತ್ತು ಅಸುರಕ್ಷಿತ ಸ್ಪರ್ಶದ ಕುರಿತು ಮಕ್ಕಳಿಗೆ ಮಾಹಿತಿ ನೀಡಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಶಾಲೆಯ ಪ್ರಾಂಶುಪಾಲರಾದ ಶೃತಿ ವಹಿಸಿದ್ದರು. ಶಿಕ್ಷಕರಾದ ಶರಣಪ್ಪ ಅವರು ಕಾರ್ಯಕ್ರಮ ನಿರೂಪಣೆ ಮಾಡಿದರು.

ಕಾರ್ಯಕ್ರಮದಲ್ಲಿ ಶಾಲಾ ಆಡಳಿತ ಮಂಡಳಿಯ ಸರ್ವೇಶ್ ವಸ್ತ್ರದ, ಮಕ್ಕಳ ವಿಶೇಷ ಪೊಲೀಸ್ ಘಟಕದ ಕಾವೇರಿ ಸೇರಿದಂತೆ ಶಾಲಾ ಸಿಬ್ಬಂದಿ, ವಿದ್ಯಾರ್ಥಿಗಳು ಹಾಜರಿದ್ದರು.

## ಯಂತ್ರಗಳ ಮೊರೆ ಹೋದ ರೈತರು 500 ರೂ.ಗೂ ಬಾರದ ಕೂಲಿ ಕಾರ್ಮಿಕರು



ರಬಕವಿ–ಬನಹಟ್ಟಿ,ಜು17: ಈಗ ಮಳೆಗಾಲ ಆರಂಭವಾಗಿ ಮುಂಗಾರು ಬೆಳೆಗಳಲ್ಲಿ ಕಳೆ ಹೆಚ್ಚಾಗಿ ಎದ್ದಿದ್ದು, ಕಳೆ ತೆಗೆಯಲು ಕೂಲಿ ಕಾರ್ಮಿಕರ ಕೊರತೆಯಿಂದ ಅನೇಕ ರೈತರು ಯಂತ್ರಗಳ ಮೊರೆ ಹೋಗಿದ್ದಾರೆ.

ತಾಲೂಕಿನಾದ್ಯಂತ ಈ ಬಾರಿ ಮುಂಗಾರು ಆರಂಭ ಅಲ್ಪ ಪ್ರಮಾಣದಲ್ಲಿ ಚೆನ್ನಾಗಿದ್ದು, ಮುಂಗಾರಿನ ವಾಣಿಜ್ಯ ಬೆಳೆಗಳಾದ ಅರಿಶಿನ, ಹೆಸರು, ಕಬ್ಬು, ತೊಗರಿ ಸೇರಿದಂತೆ ಇವುಗಳಲ್ಲಿ ಕಳೆ ಹೆಚ್ಚಾಗಿ ಬೆಳೆದು ನಿಂತಿದೆ. ಕಳೆ ಕೀಳಲು ಕೂಲಿ ಕಾರ್ಮಿಕರು ದೊರಕುತ್ತಿಲ್ಲ, ಪ್ರತಿ ದಿನ ಒಬ್ಬರಿಗೆ 500 ರೂ. ನೀಡಿದರೂ ಬರುತ್ತಿಲ್ಲವೆನ್ನುತ್ತಾರೆ ಬನಹಟ್ಟಿಯ ರೈತ ರಾಮಣ್ಣ ಭುಷಾಗೋಳ. ಅಲ್ಲದೆ ಕಳೆನಾಶಕ ಔಷಧಿ ಸಿಂಪರಣೆಯಿಂದ ಭೂಮಿಯ ಫಲವತ್ತತೆ ಹಾಳಾಗುತ್ತದೆ ಎಂದು ಬಳಕೆ ಮಾಡುವುದಿಲ್ಲ.

ಕೂಲಿ ಆಳುಗಳಿಗಾಗಿ ಹಳ್ಳಿ–ಹಳ್ಳಿ ಅಲೆದಾಡಿದರೂ ಸಿಗದ ಕಾರಣ ನೂತನ ತಂತ್ರಜ್ಞಾನ ಹೊಂದಿದ ಅನೇಕ ಕಂಪನಿಗಳು ಪರಿಕರಗಳನ್ನು ಉತ್ಪಾದಿಸುತ್ತಿವೆ. ಅದಕ್ಕಾಗಿ ವಿನೂತನ ಮಾದರಿಯಲ್ಲಿ ವಿನ್ಯಾಸಗೊಳಿಸಿದ ಯಂತ್ರಗಳನ್ನು ನಮಗೆ ಬೇಕಾಗುವ ಎಲ್ಲ ಕಾರ್ಯಗಳಿಗೂ ಅವುಗಳನ್ನು ಬಳಸಿಕೊಳ್ಳುತ್ತಿದ್ದೇವೆ. ಈಗ ಕಳೆ ತೆಗೆದು ಅರಿಶಿನ ಬೆಳೆಯಲ್ಲಿ ಬೋದುಗಳನ್ನು ಕೂಡಾ ನಿರ್ಮಾಣ ಮಾಡಲು ಯಂತ್ರಗಳು ಸಹಕಾರಿಯಾಗುತ್ತಿವೆ. ಸಣ್ಣ ಹಿಡುವಳಿಗಾರರಿಗೂ ಇದು ಅನುಕೂಲವಾಗಿದೆ. ನಮಗೆ ಬೇಕಾದಾಗ ತಕ್ಷಣ ಬಳಸಲು ಸುಲಭವಾಗಿದೆ.



ರಬಕವಿಯ ವರಕವಿ ಈಶ್ವರ ಸಣಕಲ್ಲ ಪ್ರತಿಷ್ಠಾನದವರು ಕೇಂದ್ರ ಕನ್ನಡ ಸಾಹಿತ್ಯ ಪರಿಷತ್ತಿಗೆ ಬಾಗಲಕೋಟೆ ಕಸಾಪ ಜಿಲ್ಲಾಧ್ಯಕ್ಷ ಶಿವಾನಂದ ಶೆಲ್ಲಿಕೇರಿಯವರ ಮೂಲಕ ಐವತ್ತು ಸಾವಿರ ರೂಪಾಯಿಗಳ ದತ್ತಿನಿಧಿ ಡಿಡಿಯನ್ನು ಸಲ್ಲಿಸಿದರು.
ಪ್ರತಿವರ್ಷ ಡಿಸೆಂಬರ್ 20 ರಂದು ಈಶ್ವರ ಸಣಕಲ್ಲ ಅವರ ಜಯಂತಿ ದತ್ತಿನಿಧಿ ಕಾರ್ಯಕ್ರಮ ಜರುಗಿಸಬೇಕು. ಕಾವ್ಯ ಅಥವಾ ವಚನ ಸಾಹಿತ್ಯ ಕೃತಿಗೆ ದತ್ತಿ ಪ್ರಶಸ್ತಿಯನ್ನು ನೀಡುವುದು. ಆಯ್ಕೆಯು ಪಾರದರ್ಶಕವಾಗಿರಲಿ. ಪ್ರಶಸ್ತಿ ಆಯ್ಕೆ ಸಮಿತಿಯಲ್ಲಿ ವರಕವಿ ಈಶ್ವರ ಸಣಕಲ್ಲ ಪ್ರತಿಷ್ಠಾನದ ಸಹಭಾಗಿತ್ವವಿರಲಿ ಎಂದು ಪ್ರತಿಷ್ಠಾನ ಕೋರಿದೆ.

## ವಸತಿ ನಿಲಯ ಪ್ರವೇಶಕ್ಕೆ ಅರ್ಜಿ

ಬಾಗಲಕೋಟೆ : : ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್ ನಂತರದ ಬಾಲಕ ಮತ್ತು ಬಾಲಕಿಯರ ವಿದ್ಯಾರ್ಥಿನಿಲಯಗಳಲ್ಲಿ ಪ್ರವೇಶಕ್ಕಾಗಿ ಹೊಸದಾಗಿ ಪ್ರವೇಶ ಬಯಸುವ ಪ್ರವರ್ಗ–1,2ಎ,2ಬಿ,3ಎ,3ಬಿ,ಪ.ಜಾ ಮತ್ತು ಪ್ರವರ್ಗದ ಸಾಮ್ಯಾನ ಪದವಿ ಕೋರ್ಸಿನ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಂದ 2025–26ನೇ ಸಾಲಿನ ಅರ್ಜಿ ಆಹ್ವಾನಿಸಲಾಗಿದೆ.ವಿದ್ಯಾರ್ಥಿಗಳು **https://shp.karnataka.gov.in/bcwd** ಮೂಲಕ ಅರ್ಜಿ ಸಲ್ಲಿಸಬಹುದು ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ ಅಗಸ್ಟ 18.ಅರ್ಜಿ ಸಲ್ಲಿಸಲು ತಾಂತ್ರಿಕ ತೊಂದರೆಗಳಾದಲ್ಲಿ **bcwdhelpline@gmail.com** ಇ–ಮೇಲ್ ಮುಖಾಂತರ ಅಥವಾ ಜಿಲ್ಲಾ/ತಾಲ್ಲೂಕು ಅಧಿಕಾರಿಗಳು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಇವರನ್ನು ಅಗತ್ಯ ದಾಖಲೆಗಳೊಂದಿಗೆ ಸಂಪರ್ಕಿಸಬಹುದು.ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ:8050770004/8050770005 ಸಂಪರ್ಕಿಸಬಹುದು ಎಂದು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಿಶೇಷ ಯುವನಿಧಿ ನೋಂದಣಿ ಅಭಿಯಾನ

ಬಾಗಲಕೋಟೆ : : ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ ವತಿಯಿಂದ ಜುಲೈ 07 ರಿಂದ ಅಗಸ್ಟ 07ರವರಿಗೆ ಜಿಲ್ಲೆಯ ಪದವಿ ಕಾಲೇಜು ಹಾಗೂ ತಾಂತ್ರಿಕ ಶಿಕ್ಷಣ ಇಲಾಖಾ ವ್ಯಾಪ್ತಿಯಲ್ಲಿನ ಮಹಾವಿದ್ಯಾಲಯಗಳಲ್ಲಿ ಯುವನಿಧಿ ವಿಶೇಷ ನೋಂದಣಿ ಅಭಿಮಾನವನ್ನು ಹಮ್ಮಿಕೊಳ್ಳಲಾಗಿದ್ದು 2025ರ ಸಾಲಿನಲ್ಲಿ ತೇರ್ಗಡೆ ಹೊಂದಿರುವ ಪದವಿ,ತಾಂತ್ರಿಕ ಪದವಿ,ಸ್ನಾತ್ತಕೋತ್ತರ ಪದವಿ ಮತ್ತು ಡಿಪ್ಲೋಮಾ ಪದವಿಧರರಿಗೆ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ ರೂಂ 135 ಜಿಲ್ಲಾಡಳಿತ ಭವನ ನವನಗರಯಲ್ಲಿ ಅರ್ಹ ಅಭ್ಯರ್ಥಿಗಳಿಗೆ ಉಚಿತವಾಗಿ ಯುವನಿಧಿ ಅರ್ಜಿಗಳನ್ನು ಹಾಕಲಾಗುವುದು ಹಾಗಾಗಿ ಅಸಕ್ತ ಅಭ್ಯರ್ಥಿಗಳು ತಮ್ಮ ಪದವಿ,ಸ್ನಾತ್ತಕೋತ್ತರ ಪದವಿ ಮತ್ತು ಡಿಪ್ಲೋಮಾ ಪದವಿಗೆ ಸಂಬಂದಿಸಿದ ದಾಖಾಲಾತಿಗಳು ಮತ್ತು ಆಧಾರ ಕಾರ್ಡನೊಂದಿಗೆ ಜಿಲ್ಲಾ ಉದ್ಯೋಗ ಕಚೇರಿಯನ್ನು ಭೇಟಿ ನೀಡಬಹುದು ಹೆಚ್ಚಿನ ಮಾಹಿತಿಗಾಗಿ ಕಛೇರಿ ದೂರವಾಣಿ ಸಂಖ್ಯೆ 08354–235337,7676692029,7019606100 ಸಂಪರ್ಕಿಸಬಹುದು ಎಂದು ಉದ್ಯೋಗಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅವಧಿ ವಿಸ್ತರಣೆ

ಬಾಗಲಕೋಟೆ : : ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯಲ್ಲಿ 2025–26 ನೇ ಶೈಕ್ಷಣಿಕ ವರ್ಷದಲ್ಲಿ ಡಿಪ್ಲೋಮಾ (ತೋಟಗಾರಿಕೆ) ಎರಡು ವರ್ಷದ ಕೋರ್ಸ ಕಾರ್ಯಕ್ರಮಗಳ ಪ್ರವೇಶಾತಿಗೆ ಅರ್ಜಿ ಸಲ್ಲಿಸುವ ಕೊನೆಯ ದಿನಾಂಕ ಜುಲೈ 15 ರಿಂದ ಜುಲೈ 31ವರಗೆ ವಿಸ್ತರಿಸಲಾಗಿದೆ.ಸದರಿ ಪ್ರವೇಶ ಕುರಿತು ಹೆಚ್ಚಿನ ಮಾಹಿತಿಯನ್ನು ವಿಶ್ವವಿದ್ಯಾಲಯದ ವೆಬಸೈಟ ಠಿಣಣಠಿ;//ಣಾಛಿಚಿರಂಚಿಟಇಾಠಿ. ಇಚಿಡಿಟಿಚಿಣಚಿಞಚಿ.ರಠತ.ಏಟಿ ನಿಂದ ಪಡೆಯಬಹುದಾಗಿದೆಯೆಂದು ವಿಶ್ವವಿದ್ಯಾಲಯದ ಕುಲಸಚಿವರಾದ ಮಹಾದೇವ ಎ ಮುರಗಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪ್ರಧಾನಮಂತ್ರಿ ಮಾತೃವಂದನಾ ಯೋಜನೆ

ಬಾಗಲಕೋಟೆ : : ಕೇಂದ್ರ ಸರ್ಕಾರದ ಪ್ರಧಾನಮಂತ್ರಿ ಮಾತೃವಂದನಾ ಯೋಜನೆಯು ಮಹಿಳೆಯರ ಮೊದಲ ಪ್ರಸವದ ನಂತರ ಸಾಕಷ್ಟು ವಿಶ್ರಾಂತಿಗಾಗಿ ಪರಿಹಾರವನ್ನು ಪ್ರೋತ್ಸಾಹಧನದ ರೂಪದಲ್ಲಿ 5000 ರೂ.ಗಳನ್ನು ಎರಡು ಕಂತುಗಳಲ್ಲಿ ಹಾಗೂ ಎರಡನೇ ಮಗುವು ಹೆಣ್ಣು ಮಗು ಆಗಿರುವುದಕ್ಕೆ ಒಳಪಟ್ಟು 6000 ರೂ.ಗಳನ್ನು ಒಂದೇ ಕಂತಿನಲ್ಲಿ ನೀಡುವ ಯೋಜನೆ ಇದಾಗಿದೆ.
ಈ ಯೋಜನೆ ಮೊದಲ ಎರಡು ಜೀವಂತ ಹೆರಿಗೆಗೆ ಮಾತ್ರ ಸೀಮಿತವಾಗಿರುತ್ತದೆ. ಈ ಯೋಜನೆಯಲ್ಲಿ ಸರ್ಕಾರಿ ನೌಕರರು ಹಾಗೂ ಸಾರ್ವಜನಿಕ ಉದ್ಯಮಗಳಲ್ಲಿ ಖಾಯಂ ಉದ್ಯೋಗದಲ್ಲಿರುವ ಗರ್ಭಿಣಿ ಮತ್ತು ಬಾಣಂತಿ ಹೊರತುಪಡಿಸಿ ಉಳಿದ ಎಲ್ಲಾ ಮಹಿಳೆಯರು ಅರ್ಹರಾಗುತ್ತಾರೆ. ಅರ್ಹ ಬಾಣಂತಿಯರು ಹತ್ತಿರದ ಅಂಗನವಾಡಿ ಕಾರ್ಯಕರ್ತೆಯರನ್ನು ಸಂಪರ್ಕಿಸಿ ನಿಗದಿತ ನಮೂನೆಯ ಅರ್ಜಿಯನ್ನು ಪಡೆದು ಅರ್ಜಿಯೊಂದಿಗೆ ಸಂಬಂದಿಸಿದ ದಾಖಾಲಾತಿಯೊಂದಿಗೆ ಸಲ್ಲಿಸುವಂತೆ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಉಪ ನಿರ್ದೇಶಕ ಕೆ.ಪ್ರಭಾಕರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಯುವಕರು ಸರ್ಕಾರದ ಸ್ವಯಂ ಉದ್ಯೋಗದಿಂದ ಸ್ವಾವಲಂಬಿಗಳಾಗಬೇಕು:ಅಮ್ಜದ್ ಪಟೇಲ್



ಕೊಪ್ಪಳ : ಯುವಕರು ಸರ್ಕಾರದ ಸ್ವಯಂ ಉದ್ಯೋಗದ ಯೋಜನೆಗಳನ್ನು ಬಳಸಿಕೊಂಡು ಸ್ವಾವಲಂಬಿಗಳಾಗಬೇಕು ಎಂದು ಕೊಪ್ಪಳ ನಗರಸಭೆ ಅಧ್ಯಕ್ಷರಾದ ಅಮ್ಜದ್ ಪಟೇಲ್ ಅವರು ಹೇಳಿದರು.

ಕೊಪ್ಪಳ ತಾಲೂಕಿನ ಬಸಾಪುರ ಗ್ರಾಮದ ಹತ್ತಿರ ಕೃಷಿ ಇಲಾಖೆಯ ಪ್ರಧಾನ ಮಂತ್ರಿ ಕಿರು ಆಹಾರ ಉದ್ದಿಮೆಗಳ ಔಪಾಚಾರೀಕರಣ ಯೋಜನೆಯಡಿ (ಕಿಒಈಒಇ) ಸ್ಥಾಪಿತವಾದ ಡಿ.ಬಿ ಮಶ್ರೂಮ್ ಅವರ ಭೀಮಾ ನ್ಯಾಚುರಲ್ಸ್‌ನ ಅಣಬೆ ಕೃಷಿ ಘಟಕ ಮತ್ತು ಮೌಲ್ಯವರ್ಧಿತ ಉತ್ಪನ್ನಗಳ ಘಟಕವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದ ಜಂಟಿ ಕೃಷಿ ನಿರ್ದೇಶಕರಾದ ಟಿ.ಎಸ್. ರುದ್ರೇಶಪ್ಪ ಅವರು, ಈ ಯೋಜನೆಯಡಿ ಜಿಲ್ಲೆಯಲ್ಲಿ ಆಹಾರ ಸಂಸ್ಕರಣೆಯಲ್ಲಿ ತೊಡಗಿಸಿಕೊಂಡ 178 ಕ್ಕೂ ಹೆಚ್ಚು ಜನ ಫಲಾನುಭವಿಗಳಿದ್ದು, ಸ್ವಯಂ ಉದ್ಯೋಗ ಕಂಡುಕೊಂಡಿದ್ದಾರೆ. ಈ ಯೋಜನೆಯು ತರಬೇತಿ, ಬ್ಯಾಂಕ್ ಸಾಲ, ಯೋಜನಾ ವೆಚ್ಚದ ಶೇ.50 ರಷ್ಟು ಅಥವಾ ಗರಿಷ್ಠ 15 ಲಕ್ಷಗಳ ವರೆಗೆ ಸಹಾಯಧನದ ಜೊತೆಗೆ ಪ್ಯಾಕಿಂಗ್, ಬ್ರ್ಯಾಂಡಿಂಗ್ ಬಗ್ಗೆ ಮಾಹಿತಿ ನೀಡುವ ಎಲ್ಲಾ ಸೌಲಭ್ಯಗಳನ್ನು ಒಳಗೊಂಡಿದ್ದು, ಆಹಾರ ಸಂಸ್ಕರಣೆ ಉದ್ಯಮದಲ್ಲಿ ತೊಡಗಿಸಿಕೊಳ್ಳಲು ಇಚ್ಛಿಸುವವರು ಯೋಜನೆಯ ಲಾಭ ಪಡೆದುಕೊಳ್ಳಲು ಜಂಟಿ ಕೃಷಿ ನಿರ್ದೇಶಕರ ಕಛೇರಿಯನ್ನು ಸಂಪರ್ಕಿಸಬಹುದು ಎಂದು ತಿಳಿಸಿದರು.

ಅಣಬೆ ಕೃಷಿ ಮತ್ತು ಉತ್ಪನ್ನಗಳ ಘಟಕ ಸ್ಥಾಪಿಸಿದ ಭೀಮಪ್ಪ ಶಿವಪ್ಪ ಕೋರವರ ಅವರು ಮಾತನಾಡಿ, ನನ್ನ ಪದವಿಯ ನಂತರ ಜೀವನ ನಿರ್ವಹಣೆಗೆ ಉದ್ಯೋಗದ ಯೋಚನೆಯಲ್ಲಿದ್ದ ನನಗೆ ಈ ಯೋಜನೆಯ ಮಾಹಿತಿ ಸಿಕ್ಕ ತಕ್ಷಣ ಬೆಂಗಳೂರಿನ ಐಐಎಚ್‌ಆರ್ ಮತ್ತು ಮೈಸೂರಿನ ಸಿಎಫ್‌ಟಿಆರ್‌ಐ ನಂತಹ ಪ್ರತಿಷ್ಠಿತ ಸಂಸ್ಥೆಗಳಲ್ಲಿ ತರಬೇತಿ ಪಡೆದುಕೊಂಡೆನು. ನಂತರ ಈ ಯೋಜನೆ ಮುಖಾಂತರ ಬ್ಯಾಂಕ್ ಸಾಲ ಮತ್ತು ಸಹಾಯಧನ ಪಡೆದುಕೊಂಡು ಅಣಬೆಯಿಂದ ಉಪ್ಪಿನಕಾಯಿ, ಬಿಸ್ಕೆಟ್ ಮತ್ತು ಪೌಡರ್ ಗಳನ್ನು ತಯಾರಿಸಿದೆ. ಮಾರುಕಟ್ಟೆಯಲ್ಲಿ ಈ ಉತ್ಪನ್ನಗಳಿಗೆ ಹೆಚ್ಚಿನ ಬೇಡಿಕೆ ಇದ್ದು, ನಾನು ಮಾಸಿಕವಾಗಿ ಸುಮಾರು 30 ರಿಂದ 40 ಸಾವಿರದವರೆಗೆ ಆದಾಯ ಗಳಿಸಿ ಸ್ವಾವಲಂಬಿ ಜೀವನ ನಡೆಸುತ್ತಿದ್ದೇನೆ ಎಂದು ತಮ್ಮ ಅನುಭವ ಹಂಚಿಕೊಂಡರು.

ಕಾರ್ಯಕ್ರಮದಲ್ಲಿ ಮೀನುಗಾರಿಕೆ ಇಲಾಖೆಯ ಉಪನಿರ್ದೇಶಕರಾದ ಶ್ರೀನಿವಾಸ ಕುಲಕರ್ಣಿ, ಕೃಷಿ ಇಲಾಖೆಯ ಸಹಾಯಕ ನಿರ್ದೇಶಕರಾದ ಶಿವಶೇಖರ್ ಪಾಟೀಲ್, ಅಯೋಧ್ಯಾ ಕ್ರಾಪ್ಸ್ ಅಕಾಡೆಮಿ ಸಂಸ್ಥಾಪಕರಾದ ಎಮ್.ಬಿ ಪಾಟೀಲ್, ಕೃಷಿ ಇಲಾಖೆಯ ಜಿಲ್ಲಾ ಅನುಷ್ಠಾನ ಸಮಿತಿಯ ನಳಿನಿ, ಆತ್ಮ ಯೋಜನೆಯ ಶಿವಪ್ಪ ನಾಯಕ ಹಾಗೂ ಸಂಪನ್ಮೂಲ ವ್ಯಕ್ತಿಗಳಾದ ರಾಘವೇಂದ್ರ ಗೊಂದಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ವಿವಿಧೆಡೆ ಕೊಪ್ಪಳ ಜಿಲ್ಲಾಧಿಕಾರಿ ಸುರೇಶ ಬಿ. ಇಟ್ನಾಳ ಭೇಟಿ: ರೈತರೊಂದಿಗೆ ಚರ್ಚೆ



ಕೊಪ್ಪಳ : ಕೊಪ್ಪಳ ಜಿಲ್ಲಾಧಿಕಾರಿ ಸುರೇಶ ಬಿ. ಇಟ್ನಾಳ ಅವರು ಗುರುವಾರ ಕೊಪ್ಪಳ ಜಿಲ್ಲೆಯ ವಿವಿಧ ಗ್ರಾಮಗಳ ಹಣ್ಣು ಬೆಳೆಗಳ ಸಂಸ್ಕರಣ ಘಟಕಗಳು, ಕೃಷಿ ಹೊಂಡ ಮತ್ತು ದ್ರಾಕ್ಷಿ ಹಾಗೂ ದಾಳಿಂಬೆ ಬೆಳೆಗಳ ವೀಕ್ಷಣೆ ಮಾಡಿ ರೈತರೊಂದಿಗೆ ಚರ್ಚಿಸಿದರು.

ಕೊಪ್ಪಳ ತಾಲ್ಲೂಕಿನ ಮೆತಗಲ್ ಗ್ರಾಮದಲ್ಲಿ ನಬಾರ್ಡ ವತಿಯಿಂದ ನಿರ್ಮಿಸುತ್ತಿರುವ ಹಣ್ಣು ಬೆಳೆಗಳ ಸಂಸ್ಕರಣ ಘಟಕಕ್ಕೆ ಜಿಲ್ಲಾಧಿಕಾರಿಗಳು ಭೇಟಿ ನೀಡಿ, ಪರಿಶೀಲನೆ ನಡೆಸಿದರು. ನಂತರ ಯಲಬುರ್ಗಾ ತಾಲ್ಲೂಕಿನ ಮಾಟಲದಿನ್ನಿ ಗ್ರಾಮದ ರೈತರ ಕೃಷಿ ಭಾಗ್ಯ ಯೋಜನೆ, ಉದ್ಯೋಗ ಖಾತ್ರಿ ಯೋಜನೆ ಮತ್ತು ರಾಷ್ಟ್ರೀಯ ಕೃಷಿ ವಿಕಾಸ ಯೋಜನೆಯ ಕೃಷಿ ಹೊಂಡ ಮತ್ತು ದ್ರಾಕ್ಷಿ ಹಾಗೂ ದಾಳಿಂಬೆ ಬೆಳೆಗಳ ವೀಕ್ಷಣೆ ಮಾಡಿದರು. ಅಂತರಾಷ್ಟ್ರೀಯ ಸಾವಯವ ಕೃಷಿಕ ಬಸಯ್ಯ ಹಿರೇಮಠ ಅವರ ನುಗ್ಗೆಕಾಯಿ ಸಂಸ್ಕರಣ ಘಟಕಕ್ಕೂ ಭೇಟಿ ನೀಡಿದರು. ನಂತರ ಕುಷ್ಟಗಿ ತಾಲ್ಲೂಕಿನ ಬ್ಯಾಲಿಹಾಳ ಗ್ರಾಮದ ನೈಸರ್ಗಿಕ ಕೃಷಿಕ ಡಾ.ದೇವಿಂದ್ರ ಬಳ್ಳುಟಗಿ ಅವರ ತೋಟಕ್ಕೆ ಭೇಟಿ ನೀಡಿ, ಕೃಷಿ ಸಂಬಂಧಿಸಿದ ವಿಷಯಗಳ ಕುರಿತು ರೈತರೊಂದಿಗೆ ಚರ್ಚೆ ನಡೆಸಿದರು.

ಈ ಸಂದರ್ಭದಲ್ಲಿ ಕೃಷಿ ಇಲಾಖೆಯ ಜಂಟಿ ನಿರ್ದೇಶಕ ರುದ್ರೇಶಪ್ಪ ಟಿ.ಎಸ್., ಉಪನಿರ್ದೇಶಕ ಸಿದ್ದೇಶ್ವರ ಎಲ್., ಮೀನುಗಾರಿಕೆ ಇಲಾಖೆಯ ಉಪನಿರ್ದೇಶಕ ಡಾ. ಶ್ರೀನಿವಾಸ ಕುಲಕರ್ಣಿ, ಕೊಪ್ಪಳ ಕೃಷಿ ತಂತ್ರಜ್ಞರ ಸಂಸ್ಥೆಯ ಉಪಾಧ್ಯಕ್ಷರಾದ ವೀರಣ್ಣ ಕಮತರ, ತೋಟಗಾರಿಕೆ ಇಲಾಖೆಯ ಉಪನಿರ್ದೇಶಕ ಕೃಷ್ಣ ಉಕ್ಕುಂದ, ರಾಯಚೂರು ಕೃಷಿ ವಿಶ್ವವಿದ್ಯಾಲಯದ ಡಾ. ರವಿ ಸೇರಿದಂತೆ ಕೃಷಿ ಹಾಗೂ ತೋಟಗಾರಿಕೆ ಇಲಾಖೆಯ ಇತರೆ ಅಧಿಕಾರಿ ಮತ್ತು ಸಿಬ್ಬಂದಿಗಳು ಉಪಸ್ಥಿತರಿದ್ದರು.

# ಪ್ರತಿಷ್ಠಿತ ಎಮರ್ಜಿಂಗ್ ವಿವಿ ಪ್ರಶಸ್ತಿ ಸ್ವೀಕರಿಸಿದ ರಾಚವಿ ಕುಲಪತಿ ಪ್ರೊ. ತ್ಯಾಗರಾಜ



ಬೆಳಗಾವಿ : ಭಾರತ ಸರ್ಕಾರದ ಮಾನವ ಸಂಪನ್ಮೂಲ ಅಭಿವೃದ್ಧಿ ಮಂತ್ರಾಲಯದಿಂದ ಎಮರ್ಜಿಂಗ್ ಯುನಿವರ್ಸಿಟಿ ಪ್ರಶಸ್ತಿಯನ್ನು ಬೆಳಗಾವಿಯ ರಾಣಿ ಚನ್ನಮ್ಮ ವಿಶ್ವವಿದ್ಯಾಲಯಕ್ಕೆ ಮುಂಬೈನ ಐಐಟಿಯಲ್ಲಿ ಗುರುವಾರ ನಡೆದ ಸಮಾರಂಭದಲ್ಲಿ ಪ್ರದಾನ ಮಾಡಲಾಯಿತು.

ಪ್ರಶಸ್ತಿಯನ್ನು ಸ್ವೀಕರಿಸಿ ಮಾತನಾಡಿದ ಕುಲಪತಿ ಪ್ರೊ. ಸಿ. ಎಂ. ತ್ಯಾಗರಾಜ ಅವರು ಸಮಾಜದ ಅಂಚಿನಲ್ಲಿರುವ ಕಟ್ಟಕಡೆಯ ವಿದ್ಯಾರ್ಥಿಯನ್ನು ಜ್ಞಾನ ಮತ್ತು ತಂತ್ರಜ್ಞಾನದೊಂದಿಗೆ ಅವರ ಭವಿಷ್ಯವನ್ನು ರೂಪಿಸುವುದಕ್ಕಾಗಿ ಶ್ರಮಿಸುತ್ತಿದ್ದೇವೆ. ಕೇಂದ್ರ ಮತ್ತು ರಾಜ್ಯ ಸರ್ಕಾರದ ಮಾರ್ಗದರ್ಶನದಲ್ಲಿ ವಿಶ್ವವಿದ್ಯಾಲಯ ಮುನ್ನಡೆಯುತ್ತಿದೆ. ವಿದ್ಯಾರ್ಥಿಗಳಿಗೆ ಉತ್ತಮ ಶಿಕ್ಷಣ ನೀಡಲು ನಮ್ಮ ಸಿಬ್ಬಂದಿಗಳು ಸದಾ ಕಾರ್ಯಪ್ರವೃತ್ತರಾಗುತ್ತಿದ್ದಾರೆ. ರಾಚವಿ ಎಲ್ಲಾ ಬೋಧಕ ಮತ್ತು ಬೋಧಕೇತರ ಸಿಬ್ಬಂದಿ ಅವರ ಸೇವೆಯನ್ನು ಈ ಸಂದರ್ಭದಲ್ಲಿ ಸ್ಮರಿಸಿ ಶ್ಲಾಘಿಸಿದರು. ಅವರ ಕಾರ್ಯತತ್ಪರತೆ ಮತ್ತು ಸಿಂಡಿಕೇಟ್ ಸದಸ್ಯರು, ವಿದ್ಯಾ ವಿಷಯಕ ಪರಿಷತ್ತಿನ ಸದಸ್ಯರ ಅವಿರತ ಪ್ರಯತ್ನದಿಂದ ಇಂಥ ಒಂದು ಪ್ರತಿಷ್ಠಿತ ಪ್ರಶಸ್ತಿಗೆ ಇಂದು ಭಾಜನರಾದೇವು ಎಂದರು.

ಇದೇ ಸಂದರ್ಭದಲ್ಲಿ ಸಂಶೋಧನೆ , ಸಮಾಜ ಸೇವೆ, ಆಡಳಿತ, ಶಿಕ್ಷಣ, ಪರಿಸರ ಸಂರಕ್ಷಣೆ ಮುಂತಾದ ವಿಭಾಗಗಳಲ್ಲಿ ಪ್ರಶಸ್ತಿಗಳನ್ನು ನೀಡಲಾಯಿತು. ಎಲ್ಲಾ ಪ್ರಶಸ್ತಿಗಳನ್ನು ಇಸ್ರೋ ಮಾಜಿ ಅಧ್ಯಕ್ಷರಾದ ಪದ್ಮಶ್ರೀ ಡಾ. ಕಿರಣ ಕುಮಾರ ಅವರು ಪ್ರದಾನ ಮಾಡಿದರು.

ಕರ್ನಾಟಕದಲ್ಲಿ ಇಲ್ಲಿಯವರೆಗೆ ಈ ಪ್ರತಿಷ್ಠಿತ ಪ್ರಶಸ್ತಿಗೆ ಭಾಜನವಾಗಿರುವುದು ಕೇವಲ ಎರಡು ಸಂಸ್ಥೆಗಳು ಮಾತ್ರ. ಒಂದು ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ ಎರಡನೆಯದು ರಾಣಿ ಚನ್ನಮ್ಮ ವಿಶ್ವವಿದ್ಯಾಲಯ. ಸ್ವಾತಂತ್ರ್ಯ ಹೋರಾಟದ ಬೆಳ್ಳಿ ಚುಕ್ಕಿಯಾದ, ವೀರವನಿತೆ ರಾಣಿ ಚನ್ನಮ್ಮನ ನಾಮಧೇಯ ಹೊಂದಿದ ಉತ್ತರ ಕರ್ನಾಟಕದ ಹೆಮ್ಮೆಯ ಶಿಕ್ಷಣ ಸಂಸ್ಥೆಯಾದ ರಾಣಿ ವಿಶ್ವವಿದ್ಯಾಲಯಕ್ಕೆ ಬಂದಿರುವುದು ಅತ್ಯಂತ ಸಂತಸ ತಂದಿದೆ. ವಿಶ್ವವಿದ್ಯಾಲಯದ ಬೋಧಕ ಮತ್ತು ಬೋಧಕೇತರ ಸಿಬ್ಬಂದಿ, ವಿದ್ಯಾರ್ಥಿಗಳು, ಶಿಕ್ಷಣ ಪ್ರೇಮಿಗಳು, ವಿವಿಯ ಸಂಯೋಜಿತ ಕಾಲೇಜಿನ ಸಿಬ್ಬಂದಿಗಳು ಹರ್ಷವ್ಯಕ್ತಪಡಿಸಿದರು.

ಇದೇ ಸಂದರ್ಭದಲ್ಲಿ ರಾಚವಿ ಭೂಗೋಳಶಾಸ್ತ್ರ ವಿಭಾಗದ ಪ್ರೊ. ಬಸವರಾಜ ಬಗಾಡೆ ಅವರು "ನ್ಯಾಷನಲ್ ಜಿಯೋಸ್ಪೆಷಿಯಲ್ ಎಮರ್ಜಿಂಗ್ ಫ್ಯಾಕಲ್ಟಿ ಫೆಲೋ ಅವಾರ್ಡ್" ಗೆ ಭಾಜನರಾದರು.

ಈ ರಾಷ್ಟ್ರ ಮಟ್ಟದ ಗೌರವದೊಂದಿಗೆ ಫೋಸ್ಸೀ ಜಿಐಎಸ್ (ಎನ್‌ಎಂಇಐಸಿಟಿ) ಯೋಜನೆಯ ಹಲವಾರು ಪ್ರಯೋಜನಗಳನ್ನು ಇನ್ನೂ ಮುಂದೆ ರಾಣಿ ಚನ್ನಮ್ಮ ವಿಶ್ವವಿದ್ಯಾಲಯ ಹಾಗೂ ಸಂಬಂಧಿತ ಕಾಲೇಜುಗಳು, ಉಪನ್ಯಾಸಕರು ಮತ್ತು ವಿದ್ಯಾರ್ಥಿಗಳಿಗೆ ಇಂಟರ್ನ್‌ಶಿಪ್‌ಗಳಿಗೆ ಮುಕ್ತವಾಗಲಿವೆ.

ಈ ಪ್ರಶಸ್ತಿ ಕಾರ್ಯಕ್ರಮವನ್ನು ಐಐಟಿ ಬಾಂಬೆಯ ಫೋಸ್ಸೀ (ಜಿಐಎಸ್) ಯೋಜನೆ ಹಾಗೂ ಖಅಖಿ ಮೂಲಕ ಶಿಕ್ಷಣಕ್ಕಾಗಿ ರಾಷ್ಟ್ರೀಯ ಮಿಷನ್ (ಓಒಇಖಅಖಿ), ಕೇಂದ್ರ ಸರ್ಕಾರದ ಶಿಕ್ಷಣ ಇಲಾಖೆ ಸಹಯೋಗದೊಂದಿಗೆ ಆಯೋಜಿಸಲಾಗಿತ್ತು.

## ವಿಶೇಷ ಡಿ.ಎಡ್ ತರಬೇತಿಗಾಗಿ ಅರ್ಜಿ ಆಹ್ವಾನ

ಬೆಳಗಾವಿ : ಕರ್ನಾಟಕ ಸರ್ಕಾರದ ವತಿಯಿಂದ ನಡೆಯುತ್ತಿರುವ ಅಂಧ ಹಾಗೂ ಶ್ರವಣ ದೋಷವುಳ್ಳ ಮಕ್ಕಳ ಶಿಕ್ಷಕರ ತರಬೇತಿ ಕೇಂದ್ರ, ಮೈಸೂರು ಇಲ್ಲಿ ಅಂಧ ಮಕ್ಕಳಿಗೆ ಮತ್ತು ಶ್ರವಣದೋಷವುಳ್ಳ ಮಕ್ಕಳಿಗೆ ಶಿಕ್ಷಕರಾಗಲು 2 ವರ್ಷಗಳ ವಿಶೇಷ ಡಿ.ಎಡ್ ತರಬೇತಿ ಅರ್ಜಿ ಆಹ್ವಾನಿಸಲಾಗಿದ್ದು, ಅರ್ಜಿ ಅವಧಿಯನ್ನು ವಿಸ್ತರಿಸಲಾಗಿದೆ.

ಈ ವಿಶೇಷ ಆ.ಇಜ, ಸಾಮಾನ್ಯಆ.ಇಜಗೆ ಸಮಾನಾಂತರವಾಗಿದ್ದು, ದ್ವಿತೀಯ ಪಿ.ಯು.ಸಿ ಪರೀಕ್ಷೆಯಲ್ಲಿ ಶೇ.50 (ಎಸ್.ಸಿ, ಎಸ್.ಟಿ ಮತ್ತು ವಿಕಲಚೇತನ ವಿದ್ಯಾರ್ಥಿಗಳಿಗೆ ಶೇ.45) ಅಂಕಗಳೊಂದಿಗೆ ತೇರ್ಗಡೆಯಾಗಿರುವ ವಿದ್ಯಾರ್ಥಿಗಳು ದಿ:25-07-2025ರ ಒಳಗಾಗಿ ๅಣಣಠಿ://ಟಿಭಜಡಿ-ಡಿಜ-ๅಚಿಭಿಥಿಂಣಟಿಖಿಟ.ರಣತ.ಎಟಿ/ ವೆಬ್‌ಸೈಟ್ ಮೂಲಕ ಅರ್ಜಿ ಸಲ್ಲಿಸಬಹುದಾಗಿ. ಈ ತರಬೇತಿ ಕಾರ್ಯಕ್ರಮಗಳು ರೆಗ್ಯೂಲರ್ ಆಗಿದ್ದು, ವಿಕಲಚೇತನರು ಸೇರಿದಂತೆ ಸಾಮಾನ್ಯ ವಿದ್ಯಾರ್ಥಿಗಳು ಸಹ ಅರ್ಜಿ ಸಲ್ಲಿಸಬಹುದು. ತರಬೇತಿಗಳು ಸಂಪೂರ್ಣವಾಗಿ ಉಚಿತವಾಗಿದ್ದು, ಯಾವುದೇ ಬೋಧನ ಶುಲ್ಕ ಇರುವುದಿಲ್ಲ. ಹೆಚ್ಚಿನ ಮಾಹಿತಿಗಾಗಿ ಉಪ ನಿರ್ದೇಶಕರ (ತರಬೇತಿ) ಕಛೇರಿ, ಅಂಧ ಹಾಗೂ ಶ್ರವಣ ದೋಷವುಳ್ಳ ಮಕ್ಕಳ ಶಿಕ್ಷಕರ ಸರ್ಕಾರಿ ತರಬೇತಿ ಕೇಂದ್ರ, ಪುಲಿಕೇಶಿ ರಸ್ತೆ, ತಿಲಕ್ ನಗರ, ಮೈಸೂರು-570001. ದೂರವಾಣಿ ಸಂ:0821- 2491600, ತರಬೇತಿ ಸಂಯೋಜಕರು: ಆಶಾ.ವಿ.ಹಿರೇಮಠ್-9113561620, ಟಿ.ಡಿ. ಮಂಜುನಾಥ - 9686762378 ಇವರನ್ನು ಸಂಪರ್ಕಿಸಬಹುದಾಗಿದೆ ಎಂದು ಪ್ರಕಟಣೆಯಲ್ಲಿ ತಿಳಿಸಿದೆ.

## ಯುವಕ ನಾಪತ್ತೆ

ಬೆಳಗಾವಿ : ಬೆಳಗಾವಿ ಜಿಲ್ಲೆಯ ಮೂಡಲಗಿ ತಾಲೂಕಿನ ತಿಮ್ಮಾಪೂರ ಗ್ರಾಮದ 21 ವರ್ಷ ವಯಸ್ಸಿನ ಅನೀಲ ಬಸಪ್ಪ ಹರಿಜನ ಎಂಬ ವ್ಯಕ್ತಿಯು ಯಾದವಾಡ ದಾಲ್ಮೀಯಾ ಸಿಮೆಂಟ್ ಫ್ಯಾಕ್ಟರಿಗೆ ಹೋಗುತ್ತೇನೆ ಎಂದು ಹೇಳಿ ಮನೆಯಿಂದ ಹೋದವನು ಮರಳಿ ಮನೆಗೆ ಬಾರದೆ ಕಾಣೆಯಾಗಿದ್ದಾನೆ ಎಂದು ಕುಲಗೋಡ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿರುತ್ತದೆ.

ವ್ಯಕ್ತಿ 5 ಅಡಿ ಎತ್ತರ, ಉದ್ದ ಮೂಗು, ದುಂಡು ಮುಖ, ಸಾದಾರನ ಮೈಕಟ್ಟು, ಗೋದಿಗೆಂಪು ಮೈಬಣ್ಣ ಇದ್ದು, ಕನ್ನಡ ಭಾಷೆ ಮಾತನಾಡುತ್ತಾನೆ. ಬಿಳಿ ಬಣ್ಣದ ಫುಲ್ ತೋಳಿನ ಮತ್ತು ಕಪ್ಪು ಬಣ್ಣದ ಫ್ಯಾಂಟ ಧರಿಸಿರುತ್ತಾನೆ.

ಕಾಣೆಯಾದ ವ್ಯಕ್ತಿ ಕುರಿತು ಮಾಹಿತಿ ದೊರೆತಲ್ಲಿ ಕುಲಗೋಡ ಪೊಲೀಸ್ ಠಾಣೆಯ ಇನ್ಸಪೆಕ್ಟರ್ ಅಥವಾ ಕುಲಗೋಡ ಪೊಲೀಸ್ ಠಾಣೆಯ ದೂರವಾಣಿ ಸಂಖ್ಯೆ : 08334-222233, 9480804069 ಗೆ ಸಂಪರ್ಕಿಸಬಹುದಾಗಿದೆ ಎಂದು ಕುಲಗೋಡ ಪೊಲೀಸ್ ಠಾಣೆಯ ಇನ್ಸಪೆಕ್ಟರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸ್ನಾತಕೋತ್ತರ ಪದವಿ ಕೋರ್ಸ್‌ಗಳ ಅವಧಿ ವಿಸ್ತರಣೆ

ಬೆಳಗಾವಿ, 2025-26 ನೇ ಶೈಕ್ಷಣಿಕ ಸಾಲಿನ ಸ್ನಾತಕೋತ್ತರ ಪದವಿ ಕೋರ್ಸ್‌ಗಳ ಪ್ರವೇಶಾತಿಗೆ ದಿನಾಂಕ: 19-07-2025 ಅಂತಿಮ ದಿನಾಂಕವಾಗಿ ನಿಗದಿಪಡಿಸಲಾಗಿತ್ತು ಆದರೆ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ದಿನಾಂಕ: 26-07-2025 ರವರೆಗೆ ಅವಧಿ ವಿಸ್ತರಿಸಲಾಗಿದೆ.

ರಾಣಿ ಚನ್ನಮ್ಮ ವಿಶ್ವವಿದ್ಯಾಲಯ ಬೆಳಗಾವಿ ಮುಖ್ಯ ಆವರಣದ ಸ್ನಾತಕೋತ್ತರ ಅಧ್ಯಯನ ವಿಭಾಗಗಳು, ಸ್ನಾತಕೋತ್ತರ ಕೇಂದ್ರ ವಿಜಯಪುರ ಮತ್ತು ಸಂಗೊಳ್ಳಿ ರಾಯಣ್ಣ ಪ್ರಥಮ ದರ್ಜೆ ಘಟಕ ಮಹಾವಿದ್ಯಾಲಯ, ಬೆಳಗಾವಿ ಹಾಗೂ ಬೆಳಗಾವಿ ಮತ್ತು ವಿಜಯಪುರ ಜಿಲ್ಲೆಗಳಲ್ಲಿನ ಸಂಯೋಜಿತ ಮಹಾವಿದ್ಯಾಲಯಗಳಲ್ಲಿ 2025-26ನೇ ಶೈಕ್ಷಣಿಕ ಸಾಲಿನಲ್ಲಿ ಲಭ್ಯವಿರುವ ಸ್ನಾತಕೋತ್ತರ ಕೋರ್ಸುಗಳ ವ್ಯಾಸಂಗಕ್ಕಾಗಿ ಅರ್ಹ ಅಭ್ಯರ್ಥಿಗಳಿಂದ ಯು.ಯು.ಸಿ.ಎಂ.ಎಸ ತಂತ್ರಾಂಶ **(UUCMS) https://uucms.karnataka.gov.in.** ಮೂಲಕ ಅರ್ಜಿ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ವಿಶ್ವವಿದ್ಯಾಲಯದ ಜಾಲತಾಣ **www.rcub.ac.in** ದಲ್ಲಿ ಪಡೆಯಬಹುದಾಗಿದೆ ಎಂದು ಕುಲಸಚಿವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಯುದ್ಧ ಸಂತ್ರಸ್ಥರು ಹಾಗೂ ಮಾಜಿ ಸೈನಿಕರ ಮಕ್ಕಳಿಂದ ಅರ್ಜಿ ಆಹ್ವಾನ

ಬೆಳಗಾವಿ, : ಬೆಳಗಾವಿ ನಗರದ ರೈಲು ನಿಲ್ದಾಣದ ಎದುರಿಗಿನ ಹಾಗೂ ಅಥಣಿಯಲ್ಲಿರುವ ಮಿಲಿಟರಿ ಬಾಲಕರ ವಸತಿ ನಿಲಯಕ್ಕೆ ಸನ್ 2025-2026ನೇ ಶೈಕ್ಷಣಿಕ ವರ್ಷಕ್ಕೆ ಯುದ್ಧ ಸಂತ್ರಸ್ಥರು ಹಾಗೂ ಮಾಜಿ ಸೈನಿಕರ ಮಕ್ಕಳಿಂದ ಪ್ರವೇಶಕ್ಕಾಗಿ ಅರ್ಜಿಗಳನ್ನು ಅಹ್ವಾನಿಸಲಾಗಿದೆ.

ಬೆಳಗಾವಿ ಹಾಗೂ ಅಥಣಿ ನಗರದ ಶೈಕ್ಷಣಿಕ ಸಂಸ್ಥೆಗಳಲ್ಲಿ 5ನೇ ತರಗತಿಯಿಂದ ಪಿಯುಸಿ, ಡಿಪ್ಲೋಮಾ ಹಾಗೂ ಐಟಿಐದಲ್ಲಿ ವ್ಯಾಸಾಂಗಕ್ಕಾಗಿ ಪ್ರವೇಶ ಪಡೆದಿರಬೇಕು. ನಿಲಯದಲ್ಲಿ ಉಪಹಾರ, ಊಟ ಹಾಗೂ ವಸತಿ ಉಚಿತವಾಗಿರುತ್ತದೆ.

ಆಸಕ್ತರು ಅರ್ಜಿಯನ್ನು ಜಂಟಿ ನಿರ್ದೇಶಕರು, ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ, ಬೆಳಗಾವಿ ಇವರ ಕಾರ್ಯಾಲಯದಿಂದ ಉಚಿತವಾಗಿ ಪಡೆದು ಜುಲೈ20, 2025ರ ಒಳಗಾಗಿ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಬೆಳಗಾವಿ ವಿಭಾಗದ ವಿದ್ಯಾಥಿಗಳು ಮೊಬೈಲ್ ಸಂಖ್ಯೆ: 9449880818 ಗೆ ಮತ್ತು ಅಥಣಿ ವಿಭಾಗದ ವಿದ್ಯಾಥಿಗಳು ಮೊಬೈಲ್ ಸಂಖ್ಯೆ: 9592139991 ಗೆ ಸಂಪರ್ಕಿಸಬಹುದಾಗಿದೆ ಎಂದು ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ತೋಟಗಾರಿಕೆ ಇಲಾಖೆ: ಬೆಳೆ ವಿಮಾ ಪಾವತಿಗೆ ಕೋರಿಕೆ

ಬೆಳಗಾವಿ, : 2025ನೇ ಸಾಲಿನ ಮುಂಗಾರು ಹಂಗಾಮಿನ ತೋಟಗಾರಿಕೆ ಬೆಳೆಗಳಿಗೆ ಬೆಳೆ ವಿಮೆ ಪಾವತಿಸಲು ರೈತರಲ್ಲಿ ಕೋರಲಾಗಿದೆ.

ಮರು ವಿನ್ಯಾಸಗೊಳಿಸಲಾದ ಹವಾಮಾನ ಆಧಾರಿತ ಬೆಳೆ ವಿಮೆ ಯೋಜನೆಯಡಿ (ಖ-ಘಃಅಖಖ) ಮುಂಗಾರು-2025 ಬೆಳಗಾವಿ ಜಿಲ್ಲೆಗೆ ದಾಳಿಂಬೆ, ದ್ರಾಕ್ಷಿ, ಹಸಿಮೆಣಸಿನಕಾಯಿ ಮತ್ತು ಮಾವು ಬೆಳೆಗಳಿಗೆ ವಿಮೆ ಪಾವತಿಸಬಹುದಾಗಿದೆ.

ರೈತರ ಪಾಲಿನ ವಿಮಾ ಕಂತು ಪ್ರತಿ ಹೆಕ್ಟರ್‌ಗೆ (ರೂ.ಗಳಲ್ಲಿ) ದಾಳಿಂಬೆ 6350/-, ದ್ರಾಕ್ಷಿ 14000/-, ಹಸಿಮೆಣಸಿನಕಾಯಿ 3550/-, ಮಾವು 4000/- ಗಳನ್ನು ದಿನಾಂಕ: 31-07-2025 ರ ಒಳಗಾಗಿ ನಿಗಧಿಪಡಿಸಿದ ಕಂತನ್ನು ಪಾವತಿಸಬಹುದಾಗಿದೆ.

ವಿಮಾ ಕಂತಿನ ಮೊತ್ತವು ಬೆಳೆ ಸಾಲ ಪಡೆಯುವ (ಐಔಂಓಇಇ) ಮತ್ತು ಬೆಳೆ ಸಾಲ ಪಡೆಯದ (ಓಔಓ-ಐಔಂಓಇಇ) ರೈತರಿಗೆ ಒಂದೇಯಾಗಿರುತ್ತದೆ. ಬೆಳಗಾವಿ ಜಿಲ್ಲೆಗೆ ಮರುವಿನ್ಯಾಸಗೊಳಿಸಲಾದ ಹವಾಮಾನ ಆಧಾರಿತ ಬೆಳೆ ವಿಮೆ ಯೋಜನೆಗೆ "ಖಿಂಖಿಂ ಂಖಉ ಉಖಅ" ಕಂಪನಿಯು ಅಧಿಸೂಚಿತ ವಿಮಾ ಸಂಸ್ಥೆಯಾಗಿದೆ. ಆಸಕ್ತ ರೈತರು ಪ್ರಸಕ್ತ ಸಾಲಿನ ಪಹಣಿ, ಆಧಾರ ಕಾರ್ಡ ಹಾಗೂ ಬ್ಯಾಂಕ್ ಪಾಸ್‌ಬುಕ್ ಪ್ರತಿಯೊಂದಿಗೆ ಹತ್ತಿರದ ಬ್ಯಾಂಕ್ ಶಾಖೆಗಳಲ್ಲಿ, ಸಾಮಾನ್ಯ ಸೇವಾ ಕೇಂದ್ರಗಳಲ್ಲಿ ಅಥವಾ ಗ್ರಾಮ ಒನ್ ಕೇಂದ್ರಗಳಲ್ಲಿ ವಿಮೆ ಕಂತು ಪಾವತಿಸುವುದು. ಈ ಯೋಜನೆಗಳಿಗೆ ಸಂಬಂಧಪಟ್ಟಂತೆ ಅಧಿಸೂಚಿತ ಹೋಬಳಿವಾರು ಬೆಳೆಗಳ ವ್ಯಾಪ್ತಿಯ ಕುರಿತು ಸಂಬಂಧಪಟ್ಟ ತಾಲ್ಲೂಕು ಮತ್ತು ಹೋಬಳಿ ಮಟ್ಟದ ತೋಟಗಾರಿಕೆ ಅಧಿಕಾರಿಗಳನ್ನು ಸಂಪರ್ಕಿಸಿ, ರೈತರು ಸದರಿ ಯೋಜನೆಯ ಸದುಪಯೋಗ ಪಡೆದುಕೊಳ್ಳಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಹೋಬಳಿ/ತಾಲೂಕು ಮಟ್ಟದ ತೋಟಗಾರಿಕೆ ಅಧಿಕಾರಿಗಳ ದೂರವಾಣಿ ಸಂಖ್ಯೆ ಬೆಳಗಾವಿ: 9886400526, ಗೋಕಾಕ: 9449517449, ಖಾನಾಪೂರ: 9886909153, ಸವದತ್ತಿ: 9513481947, ಅಥಣಿ: 9036995750, ರಾಮದುರ್ಗ: 8861609569, ರಾಯಬಾಗ: 8904381481, ಹುಕ್ಕೇರಿ: 9886609248, ಚಿಕ್ಕೋಡಿ: 9742436124, ಬೈಲಹೊಂಗಲ: 8951052518 ಗಳಿಗೆ ಸಂಪರ್ಕಿಸಬಹುದಾಗಿದೆ ಎಂದು ತೋಟಗಾರಿಕೆ ಇಲಾಖೆ ಉಪನಿರ್ದೇಶಕರು (ಜಿ.ಪಂ) ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪಠ್ಯ ಪುಸ್ತಕ ಅಭ್ಯಾಸದ ಜೊತೆಗೆ ವಿವಿಧ ರೀತಿ ಕೌಶಲ್ಯಗಳ ಪರಿಣಿತಿ ಪಡೆಯುವುದು ಮುಖ್ಯವಾಗಿದೆ: ಲೋಕೇಶ ಕುಮಾರ

ಬೆಳಗಾವಿ, ಭಾರತದ ಒಟ್ಟು ಜನ ಸಂಖ್ಯೆಯಲ್ಲಿ ಯುವ ಜನಾಂಕದ ಸಂಖ್ಯೆ ಹೆಚ್ಚಾಗಿದೆ, ಜೊತೆಗೆ ತಂತ್ರಜ್ಞಾನದಲ್ಲಿ ಸಾಕಷ್ಟು ಬದಲಾವಣೆಯಾಗಿದ್ದು ಮತ್ತು ನಿರುದ್ಯೋಗ ಸಮಸ್ಯೆ ಕಾಡುತ್ತಿದೆ, ಕಾರಣ ಕೌಶಲ್ಯದ ಕೊರತೆ ಪಠ್ಯ ಪುಸ್ತಕ ಅಭ್ಯಾಸದ ಜೊತೆಗೆ ವಿವಿಧ ರೀತಿ ಕೌಶಲ್ಯಗಳ ಪರಿಣಿತಿ ಪಡೆಯುವುದು ಮುಖ್ಯವಾಗಿದೆ ಎಂದು ನೆಹರು ಯುವ ಕೇಂದ್ರದ ಉಪನಿರ್ದೇಶಕ ಲೋಕೇಶ ಕುಮಾರ ಅವರು ಹೇಳಿದರು.

ಭಾರತ ಸರ್ಕಾರದ ಯುವ ಮತ್ತು ಕ್ರೀಡಾ ಸಚಿವಾಲಯದ ನನ್ನ ಯುವ ಭಾರತ ಕೇಂದ್ರ, ನೆಹರು ಯುವ ಕೇಂದ್ರ ಬೆಳಗಾವಿ ಹಾಗೂ ಭರತೇಶ ವಾಣಿಜ್ಯ ಮಹಾವಿದ್ಯಾಲಯ, ರಾಷ್ಟ್ರೀಯ ಸೇವಾ ಯೋಜನೆ ಘಟಕ ಇವರ ಸಂಯುಕ್ತ ಆಶ್ರಯದಲ್ಲಿ ಮಂಗಳವಾರ (ಜು.15) ಭರತೇಶ ಶಿಕ್ಷಣ ಸಂಸ್ಥೆಯ ವಾಣಿಜ್ಯ ಮಹಾವಿದ್ಯಾಲಯದ ಸಭಾಂಗಣದಲ್ಲಿ ವಿಶ್ವ ಕೌಶಲ್ಯ ದಿನಾಚರಣೆ ಕಾರ್ಯಕ್ರಮ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಭರತೇಶ ವಾಣಿಜ್ಯ ಮಹಾವಿದ್ಯಾಲಯ ಪ್ರಾಂಶುಪಾಲರು ನೀತಾ ಗಂಗರೆಡ್ಡಿ ಅವರು ಮಾತನಾಡಿ ವಿದ್ಯಾರ್ಥಿಗಳು ಅಭ್ಯಾಸ ಜೊತೆಗೆ ವಿವಿಧ ಕೌಶಲ್ಯಗಳಲ್ಲಿ ತರಬೇತಿ ಪಡೆದುಕೊಳ್ಳಿ ಇಂದಿನ ದಿನಗಳಲ್ಲಿ ಯಾರಿಗೆ ಒಳ್ಳೆ ಕೌಶಲ್ಯದಲ್ಲಿ ಪರಿಣಿತಿ ಹೊಂದಿರುತ್ತಾರೊ ಅಂತಹ ವಿದ್ಯಾರ್ಥಿಗಳಿಗೆ ಉದ್ಯೋಗ ಅವಕಾಶಗಳು ದೊರೆಯುತ್ತಿವೆ, ಮೊಬೈಲ್ ಬಳಕೆ ಬಗ್ಗೆ ಎಚ್ಚರ ವಹಿಸಿ ಎಂದು ಸಲಹೆ ನೀಡಿದರು.

ಕಾರ್ಯಕ್ರಮದಲ್ಲಿ ಮಲ್ಲಯ್ಯಾ ಕರಡಿ, ಯಲ್ಲಪ್ಪ ಧಬಾಲಿ ಉಪಸ್ಥಿತರಿದ್ದರು. ಸದರಿ ಸಂದರ್ಭದಲ್ಲಿ ಪ್ರಬಂಧ ಸ್ಪರ್ಧೆಯಲ್ಲಿ ವಿಜೇತರಾದವರಿಗೆ ಪ್ರಮಾಣ ಪತ್ರಗಳನ್ನು ನೀಡಿ ಗೌರವಿಸಲಾಯಿತು.

****

# ಸ್ಪರ್ಧಾತ್ಮಕ ಯುಗದಲ್ಲಿ ಸ್ವ ಉದ್ಯೋಗಿಗಳಾಗಿ ತಮ್ಮ ಬದುಕನ್ನು ನಿರ್ಮಿಸಿಕೊಳ್ಳಬಹುದಾಗಿದೆ ಎಂದು ಜಗದೀಶ ಹಿರೆಮಣಿ ಸಲಹೆ

ಬೆಳಗಾವಿ, : ಪ್ರಸ್ತುತ ಸರ್ಕಾರದ ಕೆಲಸಗಳು ಎಲ್ಲರಿಗೂ ಸಿಗುತ್ತಿಲ್ಲ ಆದಕಾರಣ ಪ್ರತಿಯೊಬ್ಬ ಅಭ್ಯರ್ಥಿಯು ಇಂದಿನ ಆಧುನಿಕ ಸ್ಪರ್ಧಾತ್ಮಕ ಯುಗದಲ್ಲಿ ಯುವಕರು/ಯುವತಿಯರು ಸ್ವ ಉದ್ಯೋಗಿಗಳಾಗಿ ತಮ್ಮ ಬದುಕನ್ನು ನಿರ್ಮಿಸಿಕೊಳ್ಳಬಹುದಾಗಿದೆ. ಈ ಉದ್ಯೋಗ ಮೇಳದಲ್ಲಿ ಸಾಕಷ್ಟು ಅವಕಾಶಗಳಿದ್ದು ಸದುಪಯೋಗ ಪಡಿಸಿಕೊಳ್ಳಬೇಕೆಂದು ಮುಖ್ಯ ಅಥಿತಿಗಳಾದ ಜಗದೀಶ ಹಿರೆಮಣಿ ಅವರು ಸಲಹೆ ನೀಡಿದರು.

ಜಿಲ್ಲಾ ಉದ್ಯೋಗ ವಿನಿಮಯ ಕಛೇರಿ ಹಾಗೂ ಆಲ್ ಇಂಡಿಯಾ ಚಿ ಆಫ್ ಲೋಕಲ್ ಸೆಲ್ಪ ಗವರ್ನಮೆಂಟ್, ಬೆಳಗಾವಿ ಇವರ ಜಂಟಿ ಸಹಯೋಗದೊಂದಿಗೆ ಬುಧವಾರ (ಜು.16) ಭಾಗ್ಯ ನಗರದಲ್ಲಿನ ಎಐಐಎಲ್‌ಎಸ್‌ಜಿ ಕಚೇರಿಯಲ್ಲಿ ನಡೆದ ಉದ್ಯೋಗ ಮೇಳದಲ್ಲಿ ಅವರು ಮಾತನಾಡಿದರು.

ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ ಸಹಾಯಕ ನಿರ್ದೇಶಕ ಗುರುಪಾದಯ್ಯ ಹಿರೇಮಠ ಅವರು ಮಾತನಾಡಿ ಪ್ರಸ್ತುತವಾಗಿ ಉದ್ಯೋಗ ಮೇಳಗಳು ಬೇರೆ ಬೇರೆ ಕಾಲೇಜುಗಳಲ್ಲಿ ಸಂಘ ಸಂಸ್ಥೆಗಳಲ್ಲಿ ಆಯೋಜಿಸಲಾಗುತ್ತಿದೆ. ಸರ್ಕಾರದಿಂದ ಆಯೋಜಿಸಲಾಗುತ್ತಿರುವ ಉದ್ಯೋಗ ಮೇಳಗಳ ಸದುಪಯೋಗ ಪಡೆದುಕೊಳ್ಳಬೇಕು ಎಂದು ಹೇಳಿದರು.

ಸದರಿ ಉದ್ಯೋಗ ಮೇಳದಲ್ಲಿ 500 ಅಭ್ಯರ್ಥಿಗಳು ನೋಂದಣಿ ಮಾಡಿಕೊಂಡಿದ್ದರು, 12 ಬೇರೆ ಬೇರೆ ಉದ್ಯೋಗ ಸಂಸ್ಥೆಗಳು ಭಾಗವಹಿಸಿದ್ದವು. ಅಭ್ಯರ್ಥಿಗಳ ವಿದ್ಯಾರ್ಹತೆಯ ಆಧಾರದ ಮೇಲೆ ಅವರ ಮೂಲ ದಾಖಲಾತಿಗಳ ಪರಿಶೀಲಣೆ ಮಾಡಿ ಉದ್ಯೋಗ ಮಾರ್ಗದರ್ಶನ ನೀಡಿ, 40 ಕ್ಕೂ ಹೆಚ್ಚು ಅಭ್ಯರ್ಥಿಗಳನ್ನು ಆಯ್ಕೆ ಮಾಡಿಕೊಳ್ಳಲಾಯಿತು.

ಎಐಐಎಲ್‌ಎಸ್‌ಜಿ ಪ್ರಾದೇಶಿಕ ನಿರ್ದೇಶಕ ಶಿವಕುಮಾರ ಸುರಪುರಮಠ, ನಗರ ಸೇವಕ ಅಭಿಜಿತ ಜಾವಳಕರ, ಬಸವರಾಜ ಇಂಗಳಗಿರಿ, ಉದ್ಯೋಗಾಧಿಕಾರಿ ವರುಣ ಆದಿಯೇಂದ್ರ ಹಾಗೂ ಎಐಐಎಲ್‌ಎಸ್‌ಜಿ ಸಂಸ್ಥೆಯ ಸಿಬ್ಬಂದಿಗಳು ಉಪಸ್ಥಿತರಿದ್ದರು.

# ಬಾಲ್ಯವಿವಾಹ ನಿಷೇಧ ಕುರಿತು ಜಾಗೃತಿ ಕಾರ್ಯಕ್ರಮ



ಕೊಪ್ಪಳ : ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಅಧಿಕಾರಿಗಳ ಕಛೇರಿ, ಕೊಪ್ಪಳ, ತಾಲೂಕಾ ಆರೋಗ್ಯಾಧಿಕಾರಿಗಳ ಕಛೇರಿ ಗಂಗಾವತಿ, ನಗರ ಪ್ರಾಥಮಿಕ ಆರೋಗ್ಯ ಕೇಂದ್ರ ಇಸ್ಲಾಂಪೂರ-ಗಂಗಾವತಿ ಇವರ ಸಂಯುಕ್ತಾಶ್ರಯದಲ್ಲಿ ಗಂಗಾವತಿಯ ಜಯನಗರದ ಸರ್ಕಾರಿ ಮೆಟ್ರಿಕ್ ನಂತರದ ಬಾಲಕಿಯರ ವಸತಿ ನಿಲಯದಲ್ಲಿ ಜುಲೈ 15 ರಂದು ಬಾಲ್ಯವಿವಾಹ ನಿಷೇಧ ಕುರಿತು ಜಾಗೃತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.

ನಗರ ಪ್ರಾಥಮಿಕ ಆರೋಗ್ಯ ಕೇಂದ್ರ ಗಂಗಾವತಿಯ ಡಾ.ವಿನೋದ ಅವರು ಮಾತನಾಡಿ, ಬಾಲ್ಯ ವಿವಾಹ ನಮ್ಮ ಸಮಾಜದ ಒಂದು ಸವಾಲಾಗಿದೆ. ಇದರ ಬಗ್ಗೆ ಪ್ರತಿಯೊಬ್ಬರೂ ಜಾಗೃತರಾಗಿ ಯುವಜನತೆಗೆ ಮತ್ತು ಪಾಲಕರಿಗೆ ಅರಿವು ಮೂಡಿಸಬೇಕು. ಬಾಲ್ಯವಿವಾಹ ಎಂದರೆ ಯಾವುದೇ 18 ವರ್ಷದೊಳಗಿನ ಹೆಣ್ಣುಮಕ್ಕಳಿಗೆ ಅಥವಾ 21 ವರ್ಷದೊಳಗಿನ ಗಂಡುಮಕ್ಕಳಿಗೆ ಮದುವೆ ಮಾಡುವುದಕ್ಕೆ ಬಾಲ್ಯವಿವಾಹ ಎಂದು ಕರೆಯುತ್ತಾರೆ. ಬಾಲ್ಯವಿವಾಹಕ್ಕೆ ಕಾರಣಗಳೆಂದರೆ ಬಡತನ, ಅನಕ್ಷರತೆ, ಮೂಢನಂಬಿಕೆ, ಬಾಲ್ಯವಿವಾಹದ ದುಷ್ಪರಿಣಾಮದ ಬಗ್ಗೆ ಅರಿವು ಇಲ್ಲದೇ ಇರುವುದು, ರಕ್ತ ಸಂಬಂಧವನ್ನು ಉಳಿಸಿಕೊಳ್ಳುವುದು, ಕುಟುಂಬದ ಆಸ್ತಿಯನ್ನು ಉಳಿಸಿಕೊಳ್ಳುವುದು, ಪಾಲಕರು ಮದುವೆ ಮಾಡಿ ತಮ್ಮ ಜವಾಬ್ದಾರಿಯನ್ನು ಕಳೆದುಕೊಳ್ಳುವುದು, ಸಾಮೂಹಿಕ ವಿವಾಹದಲ್ಲಿ ಕಡಿಮೆ ಖರ್ಚು ಆಗುತ್ತದೆ ಎಂಬ ಭಾವನೆ, ವೃದ್ಧರು ಹಾಗೂ ಅನಾರೋಗ್ಯದ ಹಿರಿಯರ ಆಸೆ ಈಡೇರಿಸುವ ಉದ್ದೇಶದಿಂದ ಬಾಲ್ಯವಿವಾಹ ನಡೆಯುತ್ತವೆ ಎಂದು ಹೇಳಿದರು.

ಬಾಲ್ಯವಿವಾಹ ಮಾಡುವುದರಿಂದ ಹೆಣ್ಣುಮಕ್ಕಳ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುತ್ತದೆ. ಬಾಲ್ಯವಿವಾಹ ಮಾಡುವುದರಿಂದ ಇಬ್ಬರಿಗೂ ವಯಸ್ಸಿಗೆ ಮೀರಿದ ಜವಾಬ್ದಾರಿ ಹೊರಿಸಿದಂತಾಗುತ್ತದೆ. ಅಪ್ರಾಪ್ತ ವಯಸ್ಸಿನಲ್ಲಿ ಗರ್ಭಿಣಿಯಾಗುವುದರಿಂದ ಗರ್ಭಕೋಶದ ಬೆಳವಣಿಗೆ ಪೂರ್ಣಗೊಳ್ಳದೆ ಹೆರಿಗೆ ಸಮಯದಲ್ಲಿ ತೊಂದರೆ ಉಂಟಾಗುವ ಸಾಧ್ಯತೆ ಇರುತ್ತದೆ. ವಿಕಲಾಂಗ ಮಕ್ಕಳ ಜನನವಾಗುತ್ತದೆ. ಮಕ್ಕಳು ಲೈಂಗಿಕ ದೌರ್ಜನ್ಯಕ್ಕೆ ಹಾಗೂ ಬಲಾತ್ಕಾರಕ್ಕೆ ಒಳಗಾಗುತ್ತಾರೆ. ಲೈಂಗಿಕ ಖಾಯಿಲೆಗಳಿಂದ ಹೆಚ್.ಐ.ವಿ/ಏಡ್ಸ್ ರೋಗಕ್ಕೆ ಗುರಿಯಾಗುವ ಸಾಧ್ಯತೆ ಇರುತ್ತದೆ ಹಾಗೂ ರಕ್ತಹೀನತೆ ಉಂಟಾಗುತ್ತದೆ ಮತ್ತು ಕಡಿಮೆ ತೂಕದ ಮಗುವಿನ ಜನನವಾಗುವ ಸಾಧ್ಯತೆ ಇರುತ್ತದೆ. ಶಿಶುಗಳ ದೈಹಿಕ ಬೆಳವಣಿಗೆ ಕುಂಠಿತವಾಗುತ್ತದೆ. ಆದ್ದರಿಂದ ಎಲ್ಲಾ ವಿದ್ಯಾರ್ಥಿಗಳು ತಮ್ಮ ತಮ್ಮ ಗ್ರಾಮಗಳಲ್ಲಿ, ವಾರ್ಡ್‌ಗಳಲ್ಲಿ ಬಾಲ್ಯವಿವಾಹ ನಿಷೇಧ ಕುರಿತು, ನಿರಂತರವಾಗಿ ಪಾಲಕರಿಗೆ ಅರಿವು ಮೂಡಿಸಬೇಕು. ಬಾಲ್ಯವಿವಾಹ ನಿಷೇಧ ಕಾಯ್ದೆ-2006ರ ಪ್ರಕಾರ ಬಾಲ್ಯವಿವಾಹ ಮಾಡುವುದು ಶಿಕ್ಷಾರ್ಹ ಅಪರಾಧವಾಗಿದೆ. ಇದನ್ನ ಮಾಡುವವರಿಗೆ ಮತ್ತು ಮಾಡಿಸುವವರಿಗೆ ಜೈಲುಶಿಕ್ಷೆ ಮತ್ತು 1 ಲಕ್ಷ ರೂ. ವರೆಗೆ ದಂಡ ವಿಧಿಸಲಾಗುತ್ತದೆ. ಕೊಪ್ಪಳವನ್ನು ಬಾಲ್ಯ ವಿವಾಹ ಮುಕ್ತ ಜಿಲ್ಲೆಯನ್ನಾಗಿ ಮಾಡಲು ವಿದ್ಯಾರ್ಥಿಗಳು ನಾಯಕತ್ವ ವಹಿಸಿಕೊಂಡು ಜಾಗೃತಿ ಮೂಡಿಸಬೇಕು ಮತ್ತು ಮಕ್ಕಳ ಸಹಾಯವಾಣಿ 1098 ಸಂಖ್ಯೆಗೆ ಕರೆಮಾಡಿ ಬಾಲ್ಯ ವಿವಾಹ ನಿಯಂತ್ರಣ ಮಾಡುವಂತೆ ವಿದ್ಯಾರ್ಥಿಗಳಿಗೆ ಕರೆ ನೀಡಿದರು.

ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಶಿವಾನಂದ ವ್ಹಿ.ಪಿ ಅವರು ಮಾತನಾಡಿ, ಕ್ಷಯರೋಗ ಹಾಗೂ ಕುಷ್ಠರೋಗ ನಿರ್ಮೂಲನೆಯಲ್ಲಿ ವಿದ್ಯಾರ್ಥಿಗಳ ಪಾತ್ರ ಕುರಿತು ವಿವರವಾಗಿ ಮಾತನಾಡಿದರು. ಆರೋಗ್ಯ ನಿರೀಕ್ಷಣಾಧಿಕಾರಿ ಗುರುರಾಜ ಹೆಚ್.ಎಂ ಅವರು ಅಸಾಂಕ್ರಾಮಿಕ ರೋಗಗಳು, ಮಳೆಗಾಲದಲ್ಲಿ ಸೋಂಕಿತ ಸೊಳ್ಳೆಗಳಿಂದ ಹರಡುವ ಸಾಂಕ್ರಾಮಿಕ ರೋಗಗಳಾದ ಡೆಂಗ್ಯೂ, ಚಿಕನ್‌ಗುನ್ಯಾ, ಮಲೇರಿಯಾ, ಮೆದುಳುಜ್ವರ, ಆನೆಕಾಲುರೋಗ ಹರಡದಂತೆ, ತಾಯಿ ಮಕ್ಕಳ ಆರೋಗ್ಯ ರಕ್ಷಣೆ, ಕುಟುಂಬ ಕಲ್ಯಾಣ ಕಾರ್ಯಕ್ರಮ ಕುರಿತು ವಿವರವಾಗಿ ಮಾತನಾಡಿದರು.

ವಸತಿ ನಿಲಯದ ವಾರ್ಡನ್ ಗೋವಿಂದಪ್ಪ ಅವರು ಮಾತನಾಡಿ, ಬಾಲ್ಯ ವಿವಾಹ ತಡೆಗಟ್ಟುವುದು ಪ್ರತಿಯೊಬ್ಬ ಪ್ರಜೆಯ ಜವಾಬ್ದಾರಿ. ಇಲಾಖೆಗಳು ಜಾಗೃತಿ ಮೂಡಿಸಿದರೆ ಸಾಲದು, ಜನಪ್ರತಿನಿಧಿಗಳು, ಸಂಘ ಸಂಸ್ಥೆಗಳು, ಬಲವಾದ ಕಾನೂನುಗಳಿಂದ ಮಾತ್ರ ಬಾಲ್ಯ ವಿವಾಹ ನಿಷೇಧ ಮಾಡಲು ಸಾಧ್ಯ. ಆರೋಗ್ಯ ಇಲಾಖೆಯ ಜಾಗೃತಿ ಕಾರ್ಯಕ್ರಮಗಳು ಹದಿ-ಹರೆಯದವರಿಗೆ ಬಹಳಷ್ಟು ಉಪಯುಕ್ತವಾಗಿವೆ. ಇದರ ಸದುಪಯೋಗ ಪಡೆದುಕೊಳ್ಳುವಂತೆ ವಿದ್ಯಾರ್ಥಿಗಳಿಗೆ ತಿಳಿಸಿದರು.

ಕಾರ್ಯಕ್ರಮದಲ್ಲಿ ಮಹಿಳಾ ಮೇಲ್ವಿಚಾರಕರು, ಪ್ರಾಥಮಿಕ ಆರೋಗ್ಯ ಸುರಕ್ಷಾಧಿಕಾರಿಗಳಾದ ಸರ್ವಮಂಗಳ, ಮಲೇರಿಯಾ ಲಿಂಕ್ ವರ್ಕರ್ ಹನುಮೇಶ, ರಮೇಶ, ಆರೋಗ್ಯ ಸ್ವಯಂ ಸೇವಕರು, ಆಶಾ ಕಾರ್ಯಕರ್ತೆಯರು, ವಿದ್ಯಾರ್ಥಿಗಳು ಹಾಗೂ ಸಿಬ್ಬಂದಿಗಳು ಭಾಗವಹಿಸಿದ್ದರು.

# ದೇವಸ್ಥಾನಗಳಿಗೆ ವ್ಯವಸ್ಥಾಪನಾ ಸಮಿತಿ ರಚನೆ : ಅರ್ಜಿ ಆಹ್ವಾನ

ಕಾರವಾರ, : ಜಿಲ್ಲೆಯಲ್ಲಿರುವ "ಸಿ" ಪ್ರವರ್ಗದ 2 ಅಧಿಸೂಚಿತ ಸಂಸ್ಥೆ / ದೇವಾಲಯಕ್ಕೆ 9 ಸದಸ್ಯರಿರುವ ( ದೇವಸ್ಥಾನದ ಪ್ರಧಾನ ಅರ್ಚಕ/ ಅರ್ಚಕ ಒಬ್ಬರು, ಪ.ಜಾತಿ/ಪಂಗಡ ಒಬ್ಬರು, ಮಹಿಳೆಯರು ಇಬ್ಬರು, ದೇವಸ್ಥಾನ/ಸಂಸ್ಥೆ ಇರುವ ಪ್ರದೇಶದ ಸ್ಥಳೀಯರು ಒಬ್ಬರು, ಇತರೆ 4 ಜನ) ವ್ಯವಸ್ಥಾಪನಾ ಸಮಿತಿಯನ್ನು 3 ವರ್ಷಗಳ ಅವಧಿಗೆ ರಚಿಸಲು ಆಸಕ್ತ ಭಕ್ತಾಧಿಗಳು/ ಸಾರ್ವಜನಿಕರಿಂದ ಈ ಹಿಂದೆ ಅರ್ಜಿ ಆಹ್ವಾನಿಸಲಾಗಿದ್ದು, ಸದರಿ ದೇವಸ್ಥಾನಗಳಿಗೆ ಸಂಬಂಧಿಸಿದಂತೆ ಎರಡು ಮಹಿಳಾ ಅಭ್ಯರ್ಥಿಗಳು ಹಾಗೂ ಒಂದು ಪರಿಶಿಷ್ಟ ಜಾತಿ/ಪಂಗಡದ ಅಭ್ಯರ್ಥಿಗಳು ಸಂದರ್ಶನಕ್ಕೆ ಹಾಜರಾಗದೇ ಇರುವುದರಿಂದ 9 ವ್ಯವಸ್ಥಾಪನಾ ಸಮಿತಿ ರಚನೆ ಮಾಡಲು ಸಾಧ್ಯವಾಗಿರುವುದಿಲ್ಲ.

ವ್ಯವಸ್ಥಾಪನಾ ಸಮಿತಿ ರಚಿಸಲು ಪ್ರತಿಯೊಂದು ಅಧಿಸೂಚಿತ ಸಂಸ್ಥೆ, ದೇವಾಲಯಕ್ಕೆ 2 ಮಹಿಳಾ ಅಭ್ಯರ್ಥಿಗಳು ಹಾಗೂ 1 ಪರಿಶಿಷ್ಟ ಜಾತಿ, ಪಂಗಡದ ಅಭ್ಯರ್ಥಿಗಳು ಅವಶ್ಯಕವಾಗಿರುವುದರಿಂದ ಈ ಹಿಂದೆ ಸಾರ್ವಜನಿಕರಿಂದ ಸ್ವೀಕೃತವಾದ ಅರ್ಜಿಗಳನ್ನು ಹೊರತುಪಡಿಸಿ ಸಿ ಪ್ರವರ್ಗದ 2 ದೇವಸ್ಥಾನಗಳಿಗೆ ಆಸಕ್ತ ಭಕ್ತಾಧಿಗಳು, ಸಾರ್ವಜನಿಕರಿಂದ ಮರು ಅರ್ಜಿ ಆಹ್ವಾನಿಸಲಾಗಿದೆ.


ಸಿ ಪ್ರವರ್ಗದ ದೇವಸ್ಥಾನ: ಕಾರವಾರ ತಾಲೂಕಿನ ಅಸ್ನೋಟಿಯ ಶ್ರೀ ಕಾಮಾಕ್ಷೀ ರಾಜೇಶ್ವರಿ, ಮಹಾಗಣಪತಿ ಮಹಾಪುರುಷ ದೇವಸ್ಥಾನ, ಅಂಕೋಲಾ ತಾಲೂಕಿನ ಮಂಜುಗುಣಿ ಶ್ರೀ ವಿನಾಯಕ ದೇವಸ್ಥಾನಗಳು.

ಕನಿಷ್ಠ 25 ವರ್ಷ ವಯಸ್ಸಾಗಿರುವ ಆಸಕ್ತ ಭಕ್ತಾಧಿಗಳು/ಸಾರ್ವಜನಿಕರು ಯಾವುದೇ ಒಂದು ಅಧಿಸೂಚಿತ ಸಂಸ್ಥೆಯ/ದೇವಾಲಯದ ವ್ಯವಸ್ಥಾಪನಾ ಸಮಿತಿಗೆ ಮಾತ್ರ ಸದಸ್ಯತ್ವ ಕೋರಿ ಅರ್ಜಿಯನ್ನು ನಿಗದಿತ ನಮೂನೆ -1 (ಬಿ)ರಲ್ಲಿ ಭರ್ತಿ ಮಾಡಿ ಅರ್ಜಿಯನ್ನು ಜು.28 ರೊಳಗಾಗಿ ನೇರವಾಗಿ ಪದನಿಮಿತ್ತ ಕಾರ್ಯದರ್ಶಿ ಜಿಲ್ಲಾ ಧಾರ್ಮಿಕ ಪರಿಷತ್ ಮತ್ತು ಸಹಾಯಕ ಆಯುಕ್ತರು ಹಿಂದೂ ಧಾರ್ಮಿಕ ಸಂಸ್ಥೆಗಳು ಮತ್ತು ಧರ್ಮಾದಾಯ ದತ್ತಿಗಳ ಇಲಾಖೆ, ಜಿಲ್ಲಾಧಿಕಾರಿಗಳ ಕಾರ್ಯಾಲಯ ಕಚೇರಿಗೆ ನಿಗದಿತ ಸಮಯದಲ್ಲಿ ಅರ್ಜಿಯನ್ನು ಸಲ್ಲಿಸಬಹುದು ತದನಂತರ ಸಲ್ಲಿಸಿದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.

ನಿಗದಿತ ಅರ್ಜಿ ನಮೂನೆ ಹಾಗೂ ಸದಸ್ಯರಾಗಲು ಇರುವ ಅರ್ಹತೆ, ಅನರ್ಹತೆ ವಿವರಗಳನ್ನು, ಕಾರವಾರ ಮತು ಅಂಕೋಲಾ ತಹಶೀಲ್ದಾರ ಕಾರ್ಯಾಲಯ ಹಾಗೂ ಜಿಲ್ಲಾಧಿಕಾರಿಗಳ ಕಾರ್ಯಾಲಯದ ಮುಜರಾಯಿ ಶಾಖೆಯಲ್ಲಿ ಪಡೆಯಬಹುದೆಂದು ಎಂದು ಜಿಲ್ಲಾ ಧಾರ್ಮಿಕ ಪರಿಷತ್‌ನ ಪದನಿಮಿತ್ತ ಕಾರ್ಯದರ್ಶಿ ಹಾಗೂ ಮುಜರಾಯಿ ಇಲಾಖೆಯ ಸಹಾಯಕ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಬಿಜೆಪಿ ವಿರುದ್ಧ ಶಾಸಕರ ಹೇಳಿಕೆ ಮಕ್ಕಳು ಪದ ಬಳಕೆ ಕ್ಷಮೆ ಕೇಳಿ : ಮಹಾಂತೇಶ ದೊಡ್ಡಗೌಡರ

## ಕಾರ್ಯಕರ್ತರ ಬ್ರಹತ್ ಪ್ರತಿಭಟನೆ ಅನೇಕರ ಬಂಧನ



ಚನ್ನಮ್ಮನ ಕಿತ್ತೂರು: ನುಡಿದರೆ ಮುತ್ತಿನ ಹಾರದಂತಿ–ರಬೇಕು ಎಂಬ ಅಣ್ಣ ಬಸವಣ್ಣ ಅವರ ವಾಕ್ಯದಂತೆ ನಡೆಯಬೇಕಾದ ಕಿತ್ತೂರು ಶಾಸಕರಾದ ಬಾಬಾಸಾಹೇಬ ಪಾಟೀಲ ಅವರ ಬಿಜೆಪಿ ಮಕ್ಕಳು ಎನ್ನುವ ಮಾತು ಅವರಿಗೆ ಶೋಭೆ ತರುವದಿಲ್ಲ. ಜಗತ್ತಿನಲ್ಲಿ ಅತೀ ದೊಡ್ಡ ಪಕ್ಷ ಬಿಜೆಪಿ ಪಕ್ಷ ಆ ಪಕ್ಷ ನಮಗೆ ತಾಯಿ ಇದ್ದ ಹಾಗೆ ತಾಯಿಯನ್ನು ಅವಮಾನಿಸಿದರೆ ನಾವು ಕಾರ್ಯಕರ್ತರು ಸುಮ್ಮನೆ ಕೂರಲು ಸಾಧ್ಯವಿಲ್ಲ. ವೈಯಕ್ತಿಕ ನಮ್ಮನ್ನು ಟೀಕೆ ಮಾಡಿ ನಾವು ಸಹಿಸುತ್ತೇವೆ ಆದರೆ ಪಕ್ಷಕ್ಕೆ ಮತ್ತು ಕಾರ್ಯಕರ್ತರಿಗೆ ಅವಮಾನಿಸಿದರೆ ಪರಿಣಾಮ ಎದುರಿಸಬೇಕು.ಕ್ಷಮೆ ಕೇಳುವ ಹಂತದಲ್ಲಿ ನೀವು ಇಲ್ಲಾ ಅದಕ್ಕಾಗಿ ಕ್ಷೇತ್ರಕ್ಕಾಗಿ ಕೆಲಸ ಮಾಡಿ ಅದನ್ನು ಬಿಟ್ಟು ಸರ್ವಾಧಿಕಾರಿ ತರ ವರ್ತಿಸಿದರೆ ಜನ ತಕ್ಕ ಉತ್ತರ ಕೊಡುತ್ತಾರೆ ಎಂದು ಮಾಜಿ ಶಾಸಕ ಮಹಾಂತೇಶ ದೊಡ್ಡಗೌಡರ ಹೇಳಿದರು.

ಬೆಳಗಾವಿ ಜಿಲ್ಲಾ ಬಿಜೆಪಿ ಗ್ರಾಮಾಂತರ ಅಧ್ಯಕ್ಷ ಸುಭಾಷ ಪಾಟೀಲ ಮಾತನಾಡಿ ಕ್ಷೇತ್ರದಲ್ಲಿ ಕಾನೂನು ಭಾಹೀರ ಚಟುವಟಿಕೆ ನಡೆಯುತ್ತಿದ್ದು ಅದರ ಕಡೆ ಗಮನ ಹರಿಸಿ, ಕ್ಷೇತ್ರದಲ್ಲಿ ಅನೇಕ ಕೆಲಸ ಕಾರ್ಯಗಳು ಇವೆ ಅದನ್ನು ಮಾಡಿ ಈ ತರಹ ಹೇಳಿಕೆ ಕೊಟ್ಟು ಧರ್ಬಾರ ಮಾಡಿದರೆ ಇಲ್ಲಿ ಗೌಡ್ರ ಆಟ ನಡೆಯಲ್ಲ ಅಂದರು.

ಮಾಜಿ ಶಾಸಕ ಸಂಜಯ ಪಾಟೀಲ ಮಾತನಾಡಿ ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದಾಗಿನಿಂದ ತುಘಲಕ ಸರ್ಕಾರ ಆಗಿದೆ. ಭ್ರಷ್ಟಾಚಾರ ತಾಂಡವ ಅಡ್ತಾ ಇದೆ. ಅನೇಕ ಅಧಿಕಾರಿಗಳು ಆತ್ಮಹತ್ಯೆ ಮಾಡಿಕೊಂಡಿದ್ದಾರೆ ಇವರ ಕಿರುಕುಳಕ್ಕೆ ಪೋಲೀಸರ ಮೇಲೆ ದರ್ಪ ತೋರಿಸುತಿ–ದ್ದಾರೆ. ಪೋಲೀಸರು ಬೇಸತ್ತು ರಾಜೀನಾಮೆ ಕೊಡುತ್ತಿದ್ದಾರೆ. ಗೌಡ್ರೆ ನಿಮಗೆ ತಾಳ್ಮೆ ಬೇಕಾದರೆ ಸ್ವಲ್ಪ್ ಹೊತ್ತು ದೇಶದ ಪ್ರಧಾನಿ ಮೋದಿಜೀ ಅವರ ಚೈತನ್ಯ ಭಾವಚಿತ್ರ ನೋಡಿ ಸಹನೆ, ರೀತಿ, ನೀತಿ ತಾನಾಗಿಯೇ ಬರುತ್ತದೆ ಎಂದರು. ಶ್ರೀಮತಿ ಲಕ್ಷ್ಮೀ ಇನಾಮದಾರ ಮಾತನಾಡಿ ಕ್ಷೇತ್ರದಲ್ಲಿ ಡಿ ಬಿ ಇನಾಮದಾರ ಹಿಡಿದು ಅನೇಕರು ಶಾಸಕ, ಸಚಿವರಾಗಿ ಕೆಲಸ ಮಾಡಿದ್ದಾರೆ. ಈಗಿನ ಶಾಸಕರ ಎಲುಬು ಇಲದ ನಾಲಿಗೆ ಹಾಗೆ ಯಾರು ವರ್ತನೆ ತೋರಿಲ್ಲ ಎಂದರು. ಕಿತ್ತೂರು ಬಿಜೆಪಿ ಮಂಡಳ ಅಧ್ಯಕ್ಷ ಶ್ರೀಕರ ಕುಲಕರ್ಣಿ ಮಾತನಾಡಿ ನಾಗರಾಜ ಅಸುಂಡಿ ಕಿಡ್ನಾಪ್ ಮಾಡಿ ಅವರ ತಾಯಿಗೆ ತೊಂದರೆ ಕೊಟ್ಟು ಇಂದು ಅವರ ಇಲ್ಲದ ಹಾಗೆ ಮಾಡಿದ್ದೀರಿ ಎಂದರು. ಹೊಸ ಕುರಗುಂದ ಮೂಲಕ ಶಾಸಕರ ವಿರುದ್ಧ ಬ್ರಹತ್ ಪ್ರತಿಭಟನೆ ನಡೆದು ನೇಗಿನಹಾಳ ಗ್ರಾಮದ ಮುಂಚೆ ಪೆಟ್ರೋಲ್ ಪಂಪ್ ಹತ್ತಿರ ಶಾಸಕರ ಕಾರ್ಯಾಲಯಕ್ಕೆ ಮುತ್ತಿಗೆ ಯತ್ನಿಸಿದ್ದ ಬಿಜೆಪಿ ಮುಖಂಡರನ್ನು ಹಾಗೂ ಕಾರ್ಯಕರ್ತರನ್ನು ಪೋಲೀಸರು ಬಂಧಿಸಿ ಬಿಡುಗಡೆ ಮಾಡಿದರು.

ಈ ಸಂದರ್ಭದಲ್ಲಿ ಮುಖಂಡರಾದ ವಿಕ್ರಂ ಇನಾಮದಾರ, ಸಂದೀಪ್ ದೇಶಪಾಂಡೆ, ಸಿದ್ದು ಬೋಳನ್ನವರ, ಡಾ. ನಯನಾ ಬಸ್ಮೆ, ಕಿತ್ತೂರು ಮಹಿಳಾ ಬಿಜೆಪಿ ಮಂಡಳ ಅಧ್ಯಕ್ಷೆ ಉಮಾದೇವಿ ಬಿಕ್ಕನವರ, ಸೇ–ರಿದಂತೆ ಜಿಲ್ಲಾ, ಕಿತ್ತೂರು ಬಿಜೆಪಿ ಪಧಾಧಿಕಾರಿಗಳು, ಕಾರ್ಯಕರ್ತರು ಉಪಸ್ಥಿತರಿದ್ದರು.

### ಇದು ನನ್ನ ಕೊನೆಯ ಸಾಮಾನ್ಯ ಸಭೆ ನಗರಸಭೆ ಅಧ್ಯಕ್ಷ ಗವರೋಜಿ ಹೇಳಿಕೆ

## ನಗರಸಭೆ ಸಾಮಾನ್ಯ ಸಭೆಯಲ್ಲಿ ಅಗಲಿದ ಸದಸ್ಯನಿಗೆ ಶ್ರದ್ಧಾಂಜಲಿ



ಜಮಖಂಡಿ: ನಗರಸಭೆ ಹಿರಿಯ ಸದಸ್ಯ ಸಿದ್ದು ಮೀಸಿ ಅವರ ಅಕಾಲಿಕ ನಿಧನದಿಂದ ಗುರುವಾರ ನಡೆಯಬೇಕಿದ್ದ ನಗರಸಭೆ ಸಾಮಾನ್ಯ ಸಭೆ ಜೊತೆಗೆ ಶ್ರದ್ಧಾಂಜಲಿ ಸಭೆಯಾಗಿ ಪರಿವರ್ತನೆಗೊಳ್ಳುವ ಮೂಲಕ ಅಗಲಿಕೆಗೆ ಮೌನ ಆಚರಿಸಲಾಯಿತು. ಸದಸ್ಯನ ಅಗಲಿಕೆಗಾಗಿ ಸಾಮಾನ್ಯ ಸಭೆಯಲ್ಲಿ ಮೌನಾಚರಣೆ ಸಲ್ಲಿಸುವ ಮೂಲಕ ಸಾಂಕೇತಿಕ ಸಭೆ ನಡೆಯಿತು. ಕಳೆದ ಸಾಮಾನ್ಯ ಸಭೆಯಲ್ಲಿ ಕೈಗೊಂಡ ನಿರ್ಣಯಗಳನ್ನು ಅಂಗೀಕರಿಸಲಾಯಿತು. ಜನನ ಮರಣಗಳ ಮಾಹಿತಿ, ನಗರಸಭೆ ಆಡಳಿತ ಮಂಡಳಿಗೆ 75 ಲಕ ವರೆಗೆ ಅನುದಾನ ಖರ್ಚು ಮಾಡಲು ಸರ್ಕಾರ ಅನುಮೋದನೆಗೆ ಒಪ್ಪಿಗೆ ಸೂಚಿಸಲಾಯಿತು. ಹಿಂದೆ ಮಂಜೂರಿ ನೀಡಲಾಗಿದ್ದ 5 ಟೆಂಡರಗಳ ವಿವರಗಳನ್ನು ಸಭೆಯಲ್ಲಿ ಮಂಡಿಸಲಾಯಿತು.

ನಗರಸಭೆ ಅಧ್ಯಕ್ಷ ಪರಮಾನಂದ ಗೌರೋಜಿ ಮಾತನಾಡಿ, ನಗರಸಭೆ ಹಿರಿಯ ಸದಸ್ಯ ಸಿದ್ದು ಮೀಸಿ ನಿಧನದಿಂದ ಕಾಂಗ್ರೆಸ್ ಪಕ್ಷಕ್ಕೆ ಹಾಗೂ ನಗರಸಭೆಗೆ ತುಂಬಲಾರದಷ್ಟು ಹಾನಿಯಾಗಿದೆ. ದೇವರು ಅವರ ಆತ್ಮಕ್ಕೆ ಚಿರಶಾಂತಿ ನೀಡುವ ಮೂಲಕ ಮೃತರ ಕುಟುಂಬದ ದುಃಖದಲ್ಲಿ ನಾವೆಲ್ಲರೂ ಭಾಗಿಯಾಗೋಣ ಎಂದರು.

ಪೌರಾಯುಕ್ತ ಜ್ಯೋತಿಗಿರೀಶ ಮಾತನಾಡಿ, ಅಗಲಿದ ನಗರಸಭೆ ಸದಸ್ಯ ಸಿದ್ದು ಮೀಸಿ ಜೊತಗಿನ ಒಡನಾಡಿ ಹಂಚಿ ಕೊಂಡರು. ಸದಸ್ಯರರಾದ ಗುರುಪಾದಪ್ಪ ಮೆಂಡಿಗೇರಿ, ಸುನೀಲ ಶಿಂಧೆ, ಮಲ್ಲಮ್ಮ ಪಾಯಗೊಂಡ, ಪೂಜಾ ವಾಳ್ವೇಕರ, ಪ್ರಕಾಶ ಹಂಗರಗಿ, ಕುಶಾಲ ವಾಗಮೋರೆ, ದಶರಥ ವಗ್ಗೆಣ್ಣವರ, ಪ್ರಶಾಂತ ಚರಕಿ ಮಾತನಾಡಿದರು.

ಸಾಮಾನ್ಯ ಸಭೆಯಲ್ಲಿ ನಗರಸಭೆ ಉಪಾಧ್ಯಕ್ಷೆ ರೇಖಾ ಕಾಂಬಳೆ ಸದಸ್ಯರಾದ ಈಶ್ವರ ವಾಳೆಣ್ಣವರ, ಪ್ರವೀಣ ನಾವಂದರ, ದಾನೇಶ ಘಾಟಗೆ, ದಿಲಾವರ ಶಿರೋಳ, ಪ್ರಕಾಶ ಹಂಗರಗಿ, ಇಮ್ರಾನ ಭಾಗವಾನ, ರಾಜು ಸನದಿ, ಪ್ರವೀಣ ನಾವಂದರ, ಸ್ವರೂಪ ಜಾಧವ, ಬಂದವ್ವ ಅರಕೇರಿ, ಅನುಸುಯಾ ಅಸುಗಡೆ ಪಾತಿಮಾ ಜಮಾದಾರ, ಜಮೀಳಾ ಜನವಾಡ, ಮಾಲನ ಮೋರೆ ಅಭಿಯಂತರರಾದ ಕುಸಮಾ. ಸೊಪ್ಪಡ್ಲ, ಸಿ.ಎಲ್.ಬಿಳ್ಳೂರ, ನಗರಸಭೆ ಅಧಿಕಾರಿಗಳಾದ ಯಲ್ಲಪ್ಪ ಬಿದರಿ, ವಿನಾಯಕ ನಿಡೋಣಿ ಸಹಿತ ಹಲವರು ಇದ್ದರು.

**ಇದು ನನ್ನ ಕೊನೆ ಸಭೆ......**

ನಗರಸಭೆ ಅಧ್ಯಕ್ಷ ಸ್ಥಾನದ ಬದಲಾವಣೆಯ ಕೂಗು ಕೇಳಿ ಬರುತ್ತಿರುವ ಹಿನ್ನಲೆಯಲ್ಲಿ ಇಂದು ಗುರುವಾರ ನಡೆದ ನಗರಸಭೆ ಸಾಮಾನ್ಯ ಸಭೆ ನನ್ನ ಕೊನೆ ಸಭೆಯಾಗಲಿದೆ. ನಾನು 9 ತಿಂಗಳ ಹಿಂದೆ ಅಧಿಕಾರ ಪಡೆದು ಅಧ್ಯಕ್ಷನಾಗಿ ಉತ್ತಮ ಆಡಳಿತ ನೀಡಿರುವ ನೆಮ್ಮದಿ ನನಗಿದೆ. ಪ್ರತಿಯೊಂದು ಅಭಿವೃದ್ಧಿ ಕೆಲಸದಲ್ಲಿ ಪಕ್ಷಾತೀತವಾಗಿ ಸಹಕಾರ ನೀಡಿರುವ ಸದಸ್ಯರಿಗೆ ಮತ್ತು ನಗರಸಭೆ ಅಧಿಕಾರಿಗಳಿಗೆ ಧನ್ಯವಾದಗಳು. ನಗರಸಭೆ ಸದಸ್ಯನಾಗಿ ಚುನಾಯಿತ ನನ್ನನ್ನು ಅಧ್ಯಕ್ಷ ಮಾಡುವಲ್ಲಿ ವಿಶೇಷ ಆಸಕ್ತಿ ವಹಿಸಿದ್ದ ಮಾಜಿ ಶಾಸಕ ಆನಂದ ನ್ಯಾಮಗೌಡ ಅವರಿಗೂ ಕೂಡ ಧನ್ಯವಾದಗಳು. ಮುಂದೆ ಕೂಡ ನಾನು ನಗರಸಭೆ ಅಭಿವೃದ್ಧಿಗೆ ಸಂಪೂರ್ಣ ಸಹಕಾರ ನೀಡುತ್ತೇನೆ.

**–ಪರಮಾನಂದ ಗವರೋಜಿ,**
**ನಗರಸಭೆ ಅಧ್ಯಕ್ಷರು ಜಮಖಂಡಿ.**

### ನಮ್ಮಲ್ಲಿರುವ ಆತ್ಮವೇ ನಿಜವಾದ ಪರಮಾತ್ಮ: ಶ್ರೀ ಪ್ರಭು ಮಹಾರಾಜರು

## ಅದ್ದೂರಿಯಾಗಿ ಜರುಗಿದ ಸಾಯಿಬಾಬಾರ 13ನೇ ವಾರ್ಷಿಕೋತ್ಸವ



ಮುಗಳಖೋಡ: ಸಾವಿರಾರು ವಿದ್ಯಾರ್ಥಿಗಳಿಗೆ ಜ್ಞಾನ ದಾಸೋಹವನ್ನು ನೀಡುತ್ತಾ, ಎಲ್ಲ ಧರ್ಮಗಳ ಐಕ್ಯತೆಯ ಸಂತ ಶಿರಡಿ ಸಾಯಿ ಬಾಬಾರ ಮಂದಿರ ಮುಗಳಖೋಡದಲ್ಲಿ ನಿರ್ಮಿಸಿ ವಿದ್ಯಾರ್ಥಿಗಳಲ್ಲಿ ಭಕ್ತಿಯ ಭಾವವನ್ನು ಬಿತ್ತುವ ಕೆಲಸ ಚವಿವ ಸಂಘದ್ದಾಗಿದೆ. ವಿದ್ಯಾಭ್ಯಾಸದ ಸತತ ಪ್ರಯತ್ನದೊಂದಿಗೆ ತಮ್ಮಲ್ಲೇ ಇರುವ ಆತ್ಮ ಅರಿತುಕೊಂಡು ಧ್ಯಾನ ಮಾಡುತ್ತ ಪರಮಾತ್ಮನನ್ನು ಕಾಣುವುದೇ ನಿಜವಾದ ಭಕ್ತಿಯಾಗಿದೆ. ನಮ್ಮಲ್ಲಿರುವ ಆತ್ಮವೇ ನಿಜವಾದ ಪರಮಾತ್ಮ ಎಂದು ಹಿಪ್ಪರಗಿ ಸಂಗಮೇಶ್ವರ ಮಠದ ಪೀಠಾಧಿಪತಿ ಶ್ರೀ ಪ್ರಭು ಬೆನ್ನಾಳೆ ಮಹಾರಾಜರು ಹೇಳಿದರು.

ಅವರು ಪಟ್ಟಣದ ಶ್ರೀ ಚವಿವ ಸಂಘದ ಆವರಣದಲ್ಲಿ ಸಾಯಿಬಾಬಾ ಮೂರ್ತಿ ಪ್ರತಿಷ್ಠಾನದ 13ನೇ ವಾರ್ಷಿಕೋತ್ಸವದ ದಿವ್ಯ ಸಾನಿಧ್ಯ ವಹಿಸಿ ಮಾತನಾಡಿದರು.


ಇನ್ನೋರ್ವ ಪೂಜ್ಯರಾದ ಜನವಾಡ ಅಲ್ಲಮಪ್ರಭು ಆಶ್ರಮದ ಶ್ರೀ ಮಲ್ಲಿಕಾರ್ಜುನ ಸ್ವಾಮಿಜಿ ಸಾಯಿಬಾಬಾರ ಪವಾಡಗಳನ್ನು ಹೇಳಿದರು.

ಸಾಹಿತಿ ಶ್ರೀ ವಿ.ಎಸ್. ಮಾಳಿ ಮಾತನಾಡಿ ಇಲ್ಲಿಯ ವಿದ್ಯಾರ್ಥಿಗಳಿಗೆ ಒಂದೇ ಕಡೆ ಪ್ರಾಥಮಿಕದಿಂದ ಪದವಿವರೆಗೂ ಶಿಕ್ಷಣ ದೊರಕಿಸಿಕೊಟ್ಟು ಮುಗಳಖೋಡ ಪಟ್ಟಣವನ್ನು ಶಿಕ್ಷಣ ಕಾಶಿಯನ್ನಾಗಿಸಿದ ಕೀರ್ತಿ ಕುಲಿಗೋಡರಿಗೆ ಸಲ್ಲುತ್ತದೆ ಎಂದರು.

ಟವಿಶೇಷ ಸನ್ಮಾನಿತರಾಗಿ ಆಗಮಿಸಿದ ವಿಜಯಪುರ ಸಿಪಿಐ ರವಿ ಯಡವಣ್ಣವರ ಸತ್ಕಾರ ಸ್ವೀಕರಿಸಿ ಅವರು ಈ ಶಾಲೆಯಲ್ಲಿ ಕಲಿತ ಬಾಲ್ಯದ ದಿನಗಳನ್ನು ನೆನಪಿಸಿದರು. ಟಿಸಂಸ್ಥೆಯ ಅಧ್ಯಕ್ಷ ಶ್ರೀ ಸಂಜಯ ಕುಲಿಗೋಡ ಎಲ್ಲರನ್ನು ಸ್ವಾಗತಿಸಿ ಪ್ರಾಸ್ತಾವಿಕ ನುಡಿಗಳನ್ನಾಡಿದರು.

ಬೆಳಿಗ್ಗೆ ಸಾಯಿಬಾಬಾರ ಮೂರ್ತಿಗೆ ವಿಶೇಷ ಅಭಿಷೇಕ ನೆರವೇರಿಸಿದ ನಂತರ ಸಾಯಿಬಾಬಾರ ಭಾವಚಿತ್ರ ಹೊತ್ತ ರಥದ ಮೆರವಣಿಗೆಯು ವಿವಿಧ ವಾದ್ಯ ಮೇಳಗಳೊಂದಿಗೆ ಪಟ್ಟಣದ ಪ್ರಮುಖ ಬೀದಿಗಳಲ್ಲಿ ಜರುಗಿತು. 500ಕ್ಕೂ ಹೆಚ್ಚು ಆರತಿ, ಕುಂಭ ಹೊತ್ತ ವಿದ್ಯಾರ್ಥಿನಿಯರು ಮೆರವಣಿಗೆಯಲ್ಲಿ ಭಾಗಿಯಾಗಿದ್ದರು.

ಈ ಸಂದರ್ಭದಲ್ಲಿ ಚವಿವ ಸಂಘದ ಅಧ್ಯಕ್ಷ, ಉಪಾಧ್ಯಕ್ಷ, ಕಾರ್ಯದರ್ಶಿ, ಸರ್ವ ಸದಸ್ಯರು ಸೇರಿದಂತೆ ಪಟ್ಟಣದ ಗುರು ಹಿರಿಯರು, ಪ್ರಮುಖರು, ಯುವ ಧುರೀಣ–ರು, ವಿದ್ಯಾರ್ಥಿಗಳ ಪಾಲಕರು, ತಾಯಂದಿರು, ಎಲ್ಲ ಅಂಗಸಂಸ್ಥೆಗಳ ಮುಖ್ಯಸ್ಥರು, ಸಿಬ್ಬಂದಿವರ್ಗ,ವಿದ್ಯಾರ್ಥಿ ವೃಂದ ಹಾಗೂ ವಾಹನ ಚಾಲಕರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.



**ಗೋಕಾಕ: ತಾಲೂಕಿನ ಮಾಲದಿನ್ನಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಫಲಾನುಭವಿಗಳಿಗೆ 2024, 25ನೇ ಸಾಲಿನ ಬಸವ ವಸತಿ ಯೋಜನೆ ಅಡಿಯಲ್ಲಿ ಮನೆ ಮಂಜೂರಾತಿ ಮತ್ತು ಕಾಮಗಾರಿ ಆದೇಶ ಪತ್ರಗಳನ್ನು ಶಾಸಕ ರಮೇಶ ಜಾರಕಿಹೊಳಿ ಅವರು ವಿತರಿಸಿದರು.**

**ಈ ಸಂದರ್ಭದಲ್ಲಿ ಭೀಮನಗೌಡ ಪೊಲೀಸಗೌಡರ,ಟಿ.ಆರ್ ಕಾಗಲ,ಸುರೇಶ ಸನದಿ,ಅಶೋಕ ಗೋಣಿ,ಗ್ರಾ.ಪಂ ಅಧ್ಯಕ್ಷರಾದ ಶ್ರೀಮತಿ ಈರವ್ವ ಬುನಾದಿ,ಉಪಾಧ್ಯಕ್ಷರಾದ ಮುತ್ತೆಪ್ಪ ಖಾನಪ್ಪನವರ,ಲಕ್ಕಪ್ಪ ಬಂಡಿ, ರಂಗಪ್ಪ ನಂದಿ,ಮಹಾದೇವ ಚೂನನ್ನವರ,ಶ್ರೀಮತಿ ಕೆಂಪವ್ವ ಬಂಗೇನ್ನವರ,ಶ್ರೀಮತಿ ಲಕ್ಕವ್ವ ಕುರಿ ಸೇರಿದಂತೆ ಪಿಡಿಓ ವೀರಭದ್ರ ಗುಂಡಿ ಹಾಗೂ ಸಿಬ್ಬಂದಿ ವರ್ಗ ಉಪಸ್ಥಿತರಿದ್ದರು.**

### ವಿವಿಧ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆ

## ಕಾಲಮಿತಿಯಲ್ಲಿ ಯೋಜನೆ ಅನುಷ್ಠಾನಕ್ಕೆ ಸಿಇಓ ಸೂಚನೆ



ಬಾಗಲಕೋಟೆ : : ಹಾಕಿಕೊಂಡ ಕ್ರೀಯೋಜನೆಗಳಿಗೆ ಕಾಲಮಿತಿಯಲ್ಲಿ ಅನುಷ್ಠಾನಗೊಳಿಸಲು ಕ್ರಮವಹಿಸಬೇಕೆಂದು ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಮಖಂಡಿ ತಾಲೂಕಾ ಪಂಚಾಯತ ಸಭಾಭವನದಲ್ಲಿ ಗುರುವಾರ ಜಮಖಂಡಿ ಮತ್ತು ರಬಕವಿ–ಬನಹಟ್ಟಿ ತಾಲೂಕುಗಳ ಕಾರ್ಯನಿರ್ವಾಹಕ ಅಧಿಕಾರಿಗಳು, ಸಹಾಯಕ ನಿರ್ದೇಶಕರು ಹಾಗೂ ಪಂಚಾಯತ ಅಭಿವೃದ್ಧಿ ಅಧಿಕಾರಿಗಳಿಗೆ ವಿವಿಧ ಯೋಜನೆಗಳ ಅನುಷ್ಠಾನದ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು ಯೋಜನೆಗಳಿಗೆ ಸಂಬಂಧಪಟ್ಟ ಎಲ್ಲ ದಾಖಲೆಗಳು ಆಧುನಿಕ ತಂತ್ರಜ್ಞಾನ ಬಳಸಿ ಬಳಸಿಕೊಂಡು ನಿಖರವಾದ ಮಾಹಿತಿ ನೀಡಬೇಕು. ನಿಯಮಗಳಿಗೆ ಅನುಗುಣವಾಗಿ ಕೆಲಸ ಮಾಡಬೇಕು ಯಾವುದೇ ರೀತಿಯಲ್ಲಿ ವಿಳಂಬಕ್ಕೆ ಅವಕಾಶ ನೀಡಬಾರದು ಎಂದರು.

ಗ್ರಾಮಸ್ಥರ ಭಾಗವಹಿಸುವಿಕೆ ಮತ್ತು ಸಾಮೂಹಿಕ ಹೊಣೆಗಾರಿಕೆ ಮೂಲಕ ಆಡಳಿತವನ್ನು ಬಲಪಡಿಸಬೇಕು. ಕಾಮಗಾರಿಗಳ ಗುಣಮಟ್ಟ, ಸ್ಥಳೀಯರ ಜವಾಬ್ದಾರಿತ್ವ ಹಾಗೂ ಪಾರದರ್ಶಕತೆ ಮುಖ್ಯವಾಗಿದೆ. ಸ್ಥಳೀಯ ಆದಾಯ ಹೆಚ್ಚಳಕ್ಕೆ ಗಮನ ಹರಿಸಬೇಕು. ಗ್ರಾಮ ಪಂಚಾಯತಿಯಲ್ಲಿ ತೆರಿಗೆ ನೂರಕ್ಕೆ ನೂರರಷ್ಟು ಸಂಗ್ರಹಕ್ಕೆ ಕ್ರಮವಹಿಸಬೇಕು. ಅಂದಾಗ ಮಾತ್ರ ಅಭಿವೃದ್ಧಿ ಕಾರ್ಯ ಕೈಗೊಳ್ಳಲು ಸಾಧ್ಯವಾಗುತ್ತದೆ.

ನಿಗದಿ ಪಡಿಸಿದ ಗುರಿಗಳ ಪ್ರಗತಿ ಪರಿಶೀಲಿಸಿದ ಅವರು ಕಾಲಮಿತಿಯಲ್ಲಿ ಅನುಷ್ಠಾನಗೊಳಿಸಲು ಮುಂದಾಗಬೇಕು ಎಂದರು. ವಸೂಲಿ ಪ್ರಕ್ರಿಯೆಯ ನೈಜ ಆಧಾರಗಳು, ಡಿಜಿಟಲ್ ಲೈಬ್ರರಿಗಳ ಸ್ಥಾಪನೆ ಮತ್ತು ಬಳಕೆ, ವಿದ್ಯಾರ್ಥಿಗಳಿಗೆ ಮತ್ತು ಸಾರ್ವಜನಿಕರಿಗೆ ಲಭ್ಯವಿರುವ ಡಿಜಿಟಲ್ ಮೂಲಸೌಕರ್ಯ, ಲೈಬ್ರರಿ ಬಳಕೆಯ ಪ್ರಮಾಣ ಮತ್ತು ನಿರ್ವಹಣೆ, ಗ್ರಾಮ ಪಂಚಾಯತ್ ಕಟ್ಟಡಗಳು, ಕಚೇರಿಗಳ ಮೂಲಭೂತ ಸೌಕರ್ಯಗಳು, ಸೇವಾ ಪೂರೈಕೆಗಾಗಿ ಅನುಕೂಲವಿರುವ ಪರಿಸರ ನಿರ್ಮಾಣ, ಜಲ್ ಜೀವನ್ ಮಿಷನ್, ಎಲ್ಲ ಮನೆಗಳಿಗೆ ನಲಿನ ಮೂಲಕ ಶುದ್ಧ ಕುಡಿಯುವ ನೀರು ಪೂರೈಸುವ ಕಾರ್ಯದ ಪ್ರಗತಿ ಪರಿಶೀಲನೆ ನಡೆಸಿದರು.

ಸಂವಹನ ಕೊಠಡಿಗಳು, ಟ್ಯಾಂಕ್‌ಗಳು, ಪೈಪ್‌ಲೈನ್ ವಿಸ್ತರಣೆ ಬಗ್ಗೆ ಪರಿಶೀಲನೆ, ಜನಸಾಮಾನ್ಯರಿಗೆ ಸೇವೆಯ ಲಭ್ಯತೆ, ಸ್ವಚ್ಛ ಭಾರತ ಮಿಷನ್, ಶೌಚಾಲಯಗಳ ನಿರ್ಮಾಣ ಮತ್ತು ಶೇಕಡಾವಾರು ಬಳಕೆ, ದೈನಂದಿನ ತ್ಯಾಜ್ಯ ನಿರ್ವಹಣೆ, ಒಪ್ಪಂದಿತ ವಾಸ್ತವಿಕತೆ, ಗ್ರಾಮೀಣ ಸ್ವಚ್ಛತೆಯ ಮಟ್ಟದ ಬಗ್ಗೆ ಅಧಿಕಾರಿಗಳಿಗೆ ತಿಳಿಸಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ ಉಪ ಕಾರ್ಯದರ್ಶಿ ಎನ್.ವಾಯ್.ಬಸ–ರಿಗಿಡದ, ಜಮಖಂಡಿ ತಾಲೂಕಾ ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿ ಸಚಿನ್ ಎಂ, ರಬಕವಿ–ಬನಹಟ್ಟಿ ತಾಲೂಕಿನ ಕಾರ್ಯನಿರ್ವಾಹಕ ಅಧಿಕಾರಿ ಸಿದ್ದಪ್ಪ ಪಾಟಿಹಾಳ, ಎರಡು ತಾಲೂಕುಗಳ ಸಹಾಯಕ ನಿರ್ದೇಶಕರು ಹಾಗೂ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ಉಪಸ್ಥಿತರಿದ್ದರು.

## ಬಾಲ್ಯ ವಿವಾಹ ತಡೆಗೆ ಜಾಗೃತಿ - ಕಾನೂನು ಅರಿವು ಮೂಡಿಸಿ - ಜಿಲ್ಲಾಧಿಕಾರಿ ಡಾ.ಆನಂದ.ಕೆ



ವಿಜಯಪುರ : ಬಾಲ್ಯವಿವಾಹ, ಬಾಲ ಕಾರ್ಮಿಕ ಪದ್ಧತಿಯಂತಹ ಸಾಮಾಜಿ–ಕ ಅನಿಷ್ಟ ಪದ್ಧತಿಯ ನಿರ್ಮೂಲನೆಗೆ ಸಾಕಷ್ಟು ಪ್ರಚಾರಗೊಳಿಸಿ ಜಾಗೃತಿ ಹಾಗೂ ಕಾನೂನಿನ ಅರಿವು ಮೂಡಿಸಲು ಸಂಬಂಧಿಸಿದ ಇಲಾಖಾ ಅಧಿಕಾರಿಗಳು ಶ್ರಮಿಸಬೇಕು ಎಂದು ಜಿಲ್ಲಾಧಿಕಾ–ರಿಗಳಾದ ಡಾ.ಆನಂದ.ಕೆ ಅವರು ಸೂಚಿಸಿದರು.

ಗುರುವಾರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಬಾಲ್ಯ ವಿವಾಹ ನಿಷೇಧ, ಕೌಟುಂಬಿ ಹಿಂಸೆಯಿಂದ ಮಹಿಳೆಯರ ಸಂರಕ್ಷಣಾ ಕಾಯ್ದೆ 2005, ನಿಯಮ 2006 ಹಾಗೂ ಪೋಕ್ಸೋ ಕಾಯ್ದೆಯ ಪರಿಶೀಲನಾ ಸಭೆಯ ಅಧ್ಯಕತೆ ವಹಿಸಿ ಮಾತನಾಡಿದ ಅವರು, ಬಾಲ್ಯ ವಿವಾಹ ನಿಷೇಧ ಕಾಯ್ದೆ, ಕೌಟುಂಬಿಕ ಹಿಂಸೆಯಿಂದ ಮಹಿಳೆಯರ ಸಂರಕ್ಷಣಾ ಕಾಯ್ದೆ ಸಮರ್ಪಕ ಜಾರಿ ಒಳಗೊಂಡಂತೆ ಮಹಿಳಾ ಕಲ್ಯಾಣ ಕಾರ್ಯಕ್ರಮಗಳನ್ನು ಹಮ್ಮಿಕೊಂಡು ನೊಂದ ಮತ್ತು ಸಂಕಷ್ಟಕೊಳಗಾಗಿರುವ ಮಹಿಳೆಯರಿಗೆ ಕೌನ್ಸೆಲಿಂಗ್ ಹಾಗೂ ಅಗತ್ಯ ಕಾನೂನು ನೆರವು ಒದಗಿಸುವಂತೆ ಅವರು ಸೂಚನೆ ನೀಡಿದರು.

ಬಾಲ್ಯ ವಿವಾಹ ತಡೆಗಟ್ಟುವ ನಿಟ್ಟಿನಲ್ಲಿ ಗ್ರಾಮ ಪಂಚಾಯತಿಯ ವ್ಯಾಪ್ತಿಯಲ್ಲಿ ಸಂಬಂಧಿಸಿದ ಇಲಾಖೆಗಳು ನಿರಂತರ ಸಭೆ, ಜಾಗೃತಿ ಕಾರ್ಯಕ್ರಮಗಳನ್ನು ಹೆಚ್ಚಾಗಿ ಏರ್ಪಡಿಸುವ ಮೂಲಕ ಸೂಕ್ತ ಕಾನೂನು ಅರಿವು ಮತ್ತು ತಿಳುವಳಿಕೆ ಮೂಡಿಸಬೇಕು. ಈ ವಿಷಯದಲ್ಲಿ ತುಂಬಾ ಗಂಭೀರತೆಯಿಂದ ಸಮನ್ವಯದೊಂದಿಗೆ ಕಾರ್ಯನಿರ್ವಹಿಸಬೇಕು.

ಬಾಲ್ಯವಿವಾಹ ತಡೆಗಟ್ಟುವಲ್ಲಿ ಆಶಾ–ಅಂಗನವಾಡಿ ಕಾರ್ಯಕರ್ತೆಯರು ಹಾಗೂ ಸ್ಥಳೀಯ ಆಡಳಿತಗಳ ಪಾತ್ರ ಬಹುಮುಖ್ಯವಾಗಿದ್ದು, ಸಮನ್ವಯವಾಗಿ ಕಾರ್ಯನಿರ್ವಹಿಸಿ, ಬಾಲ್ಯವಿವಾಹ ನಡೆಯುವ ಮುನ್ನವೇ ಪತ್ತೆ ಹಚ್ಚಿ ತಪ್ಪಿತಸ್ಥರ ಸಂಬಂಧಿಸಿದ ಪೋಷಕರು, ಬಾಲ್ಯವಿವಾಹವನ್ನು ಪ್ರೋತ್ಸಾಹಿಸುವವರ ವಿರುದ್ಧ ವಿಳಂಬ ಮಾಡದೇ ಪ್ರಕರಣ ದಾಖಲಿಸಬೇಕು ಎಂದು ಅವರು ಸೂಚಿಸಿದರು. ಬಾಲ್ಯವಿವಾಹ ಅದೊಂದು ಅಪರಾಧ. ಸಾರ್ವಜನಿಕರಿಗೆ ಸೂಕ್ತ ಕಾನೂನಿನ ಅರಿವು ನೀಡುವುದರ ಜೊತೆಗೆ ಬಾಲ್ಯವಿವಾಹ ನಡೆಯುವುದು ಕಂಡುಬಂದಲ್ಲಿ ಮುಂಚಿತವಾಗಿ ಮಾಹಿತಿ ಪಡೆದುಕೊಳ್ಳುವುದರ ಮೂಲಕ ಮಕ್ಕಳ ಭವ್ಯ ಭವಿಷ್ಯ ಹಾಳಾಗದಂತೆ ಸಂಬಂಧಿಸಿದ ಇಲಾಖಾ ಅಧಿಕಾರಿಗಳು ಮುಂಜಾಗ್ರತೆವಹಿಸಿ ಕಾರ್ಯನಿರ್ವಹಿಸಬೇಕು ಎಂದು ಹೇಳಿದರು.

ಜಿಲ್ಲೆಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸಖಿ ಒನ್ ಸ್ಟಾಫ್ ಕೇಂದ್ರಗಳಲ್ಲಿ ಪೋಕ್ಸೋ, ಬಾಲ್ಯವಿವಾಹ, ಮಹಿಳಾ ದೌರ್ಜನ್ಯ, ಕಿರುಕುಳ ಸೇರಿದಂತೆ ವಿವಿಧ ದೌರ್ಜನ್ಯಕೊಳಗಾದವರನ್ನು ಕೌನ್ಸೆಲಿಂಗ್ ಪ್ರಕ್ರಿಯೆಗೆ ಒಳಪಡಿಸಿ, ಅವರ ಮನೋಸ್ಥೈರ್ಯ ಹೆಚ್ಚಿಸಬೇಕು. ಈ ಕೇಂದ್ರಗಳು ದಿನದ 24 ಗಂಟೆಯೂ ಕಾರ್ಯನಿರ್ವಹಿಸಬೇಕು. ವೈದ್ಯರು, ಪೊಲೀಸ್ ಇಲಾಖೆ ಸಹಕಾರ ಒದಗಿಸಬೇಕು. ಸಂಬಂಧಿಸಿದ ಸಂತ್ರಸ್ತರ ಕು–ರಿತ ವಸ್ತುಸ್ಥಿತಿ ಆಗಾಗ ವರದಿ ಮಾಡಬೇಕು ಹೇಳಿದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಲಕ್ಷ್ಮಣ ನಿಂಬರಗಿ ಮಾತನಾಡಿ, ಬಾಲ್ಯವಿವಾಹದಂತಹ ಸಾಮಾಜಿ–ಕ ಪಿಡುಗು ತೊಲಗಿಸಲು ಸಾರ್ವಜನಿಕರಿಗೆ ಜಾಗೃತಿ ಅವಶ್ಯವಾಗಿದ್ದು, ಈ ಬಗ್ಗೆ ನಿರಂತರ ಶಿಬಿರ, ಸಭೆ ನಡೆಸಬೇಕು. ಪ್ರಕರಣ ನಡೆದ ಸಂದರ್ಭದಲ್ಲಿ ಮಾಹಿತಿ ಒದಗಿಸಿದರೆ ಪೊಲೀಸ್ ಇಲಾಖೆಯಿಂದ ಈ ನಿಟ್ಟಿನಲ್ಲಿ ಶೀಘ್ರ ಕ್ರಮ ವಹಿಸಲಾಗುವುದು. ಸಂಬಂಧಿಸಿದ ಇಲಾಖೆಗಳು ವಾಟ್ಸಾಫ್ ಗ್ರೂಪ್ ರಚಿಸಿಕೊಂಡು ಸಮರ್ಪಕ ಮಾಹಿತಿಯನ್ನು ವಿನಿಮಯ ಮಾಡಬೇಕು ಎಂದು ಅವರು ಹೇಳಿದರು. ಸಭೆಯಲ್ಲಿ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಅರವಿಂದ ಹಾಗರಗಿ, ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಶಂಕರ ಮಾರಿಹಾಳ, ಜಿಲ್ಲಾ ಪಂಚಾಯತಿಯ ಉಪ ಕಾರ್ಯದರ್ಶಿ ವಿಜಯ ಆಜೂರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕರಾದ ಕೆ.ಕೆ.ಚವ್ಹಾಣ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಸಂಪತ್ ಗುಣಾರಿ, ಜಿಲ್ಲಾ ಶಸ್ತ್ರಚಿಕಿತ್ಸಕರಾದ ಶಿವಾನಂದ ಮಾಸ್ತಿಹೊಳಿ ಸೇರಿದಂತೆ ಜಿಲ್ಲಾಮಟ್ಟದ ಅಧಿಕಾ–ರಿಗಳು ಉಪಸ್ಥಿತರಿದ್ದರು.

## ಪಿ.ಎಚ್.ಡಿ ವ್ಯಾಸಂಗ ಮಾಡುತ್ತಿರುವ ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ ಫೆಲೋಶಿಫ್‌ಗಾಗಿ ಅರ್ಜಿ ಆಹ್ವಾನ

ಗದಗ : 2025–26 ನೇ ಸಾಲಿಗೆ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಗದಗ ಇವರಿಂದ ಅಲ್ಪಸಂಖ್ಯಾತರ ಪಿ.ಎಚ್.ಡಿ ವಿದ್ಯಾರ್ಥಿಗಳಿಗೆ ಫೆಲೋಶಿಫ್‌ಗಾಗಿ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತ ಹಾಗೂ ಅರ್ಹ ಅಲ್ಪಸಂಖ್ಯಾತರ ಮುಸ್ಲಿಂ, ಜೈನ್, ಕ್ರಿಶ್ಚಿಯನ್, ಸಿಖ್, ಬೌದ್ಧ, ಪರ್ಶಿಯನ್ ವಿದ್ಯಾರ್ಥಿಗಳು ಸೇವಾ ಸಿಂಧು ಆನ್‌ಲೈನ್ ಮೂಲಕ ಅರ್ಜಿಯನ್ನು ಸಲ್ಲಿಸಲು ಕೊನೆಯ ದಿನ ಸೆಪ್ಟೆಂಬರ್ 30 ಆಗಿದ್ದು , ಆನ್‌ಲೈನ್ ಮೂಲಕ ಸಲ್ಲಿಸಿದ ಅರ್ಜಿಗಳನ್ನು ಖುದ್ದಾಗಿ ಅಭ್ಯರ್ಥಿಗಳೇ ಹಾಜರಾಗಿ, ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಗದಗ ರವರ ಕಛೇರಿಗೆ ಸಲ್ಲಿಸಲು ಸೂಚಿಸಿದೆ.

2025–26 ನೇ ಸಾಲಿನಲ್ಲಿ ಪಿ.ಎಚ್.ಡಿ ನೋಂದಣಿಯಾಗಿ ವ್ಯಾಸಂಗ ಮಾಡುತ್ತಿರುವ ಅರ್ಹ ಅಲ್ಪಸಂಖ್ಯಾತರ ಸಮುದಾಯದ ವಿದ್ಯಾರ್ಥಿಗಳು ಫೆಲೋಶಿಪ್‌ಗಾಗಿ ಅರ್ಜಿ ಸಲ್ಲಿಸಬಹುದು. ಅಭ್ಯರ್ಥಿಗಳು ಅಲ್ಪಸಂಖ್ಯಾತರ ಸಮುದಾಯಕ್ಕೆ ಸೇರಿರಬೇಕು. ಪಿ.ಎಚ್.ಡಿ/ಎಂ.ಫಿಲ್ ಯಾವುದಾದರೂ ಒಂದು ಕೋರ್ಸಗೆ ಮಾತ್ರ ಅರ್ಜಿ ಸಲ್ಲಿಸಬೇಕು. ಅಂಚೆ ತೆರಪು/ ಅರೆಕಾಲಿಕ/ದೂರ ಶಿಕ್ಷಣದಲ್ಲಿ ವಿದ್ಯಾಭ್ಯಾಸ ಮಾಡುವ ವಿದ್ಯಾರ್ಥಿಗಳು ಅರ್ಹರಿರುವುದಿಲ್ಲ.

ಅಭ್ಯರ್ಥಿಯ ಕುಟುಂಬದ ವಾರ್ಷಿಕ ಆದಾಯ ರೂ.8.00 ಲಕ್ಷ ಮೀ–ರಿರಬಾರದು. ಅಭ್ಯರ್ಥಿಯು ಕರ್ನಾಟಕ ರಾಜ್ಯದ ನಿವಾಸಿಯಾಗಿರಬೇಕು. ಅಭ್ಯರ್ಥಿಯ ಗರಿಷ್ಠ ವಯೋಮಿತಿ 35 ವರ್ಷ ಮೀರಿರಬಾರದು.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಮತ್ತು ತಾಲೂಕ ಮಾಹಿತಿ ಕೇಂದ್ರಗಳನ್ನು ಕಛೇರಿ ವೇಳೆಯಲ್ಲಿ ಸಂಪರ್ಕಿಸಬಹುದಾಗಿದೆ.

## ಜು. 20ರಂದು ರೋಟರಿ ಕ್ಲಬ್ ರಾಮತೀರ್ಥದ ಪದಗ್ರಹಣ



ಜಮಖಂಡಿ: ಪ್ರಸಕ್ತ ರಾಜ್ಯದಲ್ಲಿ ಹೃದಯರೋಗ ಸಮಸ್ಯೆಗಳು ಹೆಚ್ಚಾಗುತ್ತಿದ್ದು, ಸಾವುಗಳ ಸಂಖ್ಯೆ ಹೆಚ್ಚಾಗುತ್ತಿರುವ ಹಿನ್ನಲೆಯಲ್ಲಿ ಹೃದಯರೋಗ ತೀವ್ರತೆ ನಿಯಂತ್ರಣಕ್ಕಾಗಿ ಅಂದಾಜು 42 ಲಕ್ಷ ಮೌಲ್ಯದ ತುರ್ತು ಹೃದಯ ಚಿಕಿತ್ಸೆ ವಾಹನ ನಗರದ ಆಸ್ಪತ್ರೆಗೆ ಸಾರ್ವಜನಿಕರ ಅನಕೂಲಕ್ಕಾಗಿ ವಿತರಿಸಲಾಗುವದು ಎಂದು ರಾಮತೀಥ ರೋಟರಿ ಸಂಸ್ಥೆಯ ನೂತನ ಅಧ್ಯಕ್ಷ ರಾಜಶೇಖರ ವಾರದ ಹೇಳಿದರು.

ನಗರದ ರಮಾನಿವಾಸ ಸಭಾಭವನದಲ್ಲಿ ಗುರುವಾರ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಸೇವಾ ಸಂಸ್ಥೆಯಾಗಿರುವ ರೋಟರಿಗೆ ಎಲ್ಲರ ಸಹಕಾರ ಅವಶ್ಯವಾಗಿದೆ. ತಮ್ಮ ಅಧಿಕಾರ ಅವಧಿಯಲ್ಲಿ ಸಾವಿರ ಸಸಿಗಳನ್ನು ನೆಡುವದು, ಗ್ರಾಮೀಣಪ್ರದೇಶಗಳಲ್ಲಿ ಮಿನಿಬಸ್ ನಿಲ್ದಾಣ ನಿರ್ಮಾಣ, ಶಾಲೆಗಳಿಗೆ ಅಗತ್ಯ ಮೂಲಭೂತ ಸೌಲಭ್ಯ, ಕುಡಿಯುವ ನೀರಿನ ವ್ಯವಸ್ಥೆ, ಉಚಿತ ಆರೋಗ್ಯ ಶಿಬಿರ, ಉದ್ಯೋಗ ಮೇಳ ಮತ್ತು ರೈತರಿಗೆ, ಕಲಾವಿದ–ರಿಗೆ ಪ್ರೋತ್ಸಾಹಿಸ ನೀಡಲಾಗುವದು. ರಸ್ತೆಬದಿ ಸಣ್ಣ ವ್ಯಾಪಾರಸ್ಥರಿಗೆ ಛತ್ರಿಗಳ ವಿತರಣೆ ಸಹಿತ ಅನೇಕ ಸಾರ್ವಜನಿಕ ಸೇವಾಗಳನ್ನು ಸಲ್ಲಿಸಲು ರಾಮತೀರ್ಥ ರೋಟರಿ ಸಂಸ್ಥೆ ಯೋಜನೆಗಳನ್ನು ರೂಪಿಸಿಕೊಂಡಿದೆ ಎಂದರು.

ನಗರದ ಬಸವಭವನದಲ್ಲಿ ಜುಲೈ 20ರಂದು ಸಂಜೆ 6ಗಂಟೆಗೆ 2025–26ನೇ ಸಾಲಿನ ನೂತನ ಪದಾಧಿಕಾರಿಗಳಿಗೆ ಸೇವಾದಿಕ್ಷೆ ಮತ್ತು ಪದಗ್ರಹಣ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಕಾರ್ಯಕ್ರಮದ ಅಧಿಕಾರಿಗಳಾಗಿ ಬೆಳಗಾವಿಯ ಅವಿನಾಶ ಪೋತದಾರ ಆಗಮಿಸಲಿದ್ದು, ಅತಿಥಿಗಳಾಗಿ ಶಾಸಕ ಜಗದೀಶ ಗುಡಗುಂಟಿ, ನಾರಾಯಣ ಹೆರಕಲ್ ಭಾಗವಹಿಸಲಿದ್ದಾರೆ. ಕಾರ್ಯಕ್ರಮದಲ್ಲಿ ಓಲೇಮಠದ ಆನಂದ ದೇವರು ಸಾನಿಧ್ಯ ವಹಿಸ್ಲಲಿದ್ದಾರೆ ಎಂದರು.

ಸಂಸ್ಥೆಯ ಖಜಾಂಚಿ ಉಪಪ್ರಾಚಾರ್ಯ ಮಾಂತೇಶ ನರಸನಗೌಡ, ಸದಸ್ಯ ಎಸ್. ವೈ.ಪಾಟೀಲ ಮಾತನಾಡಿದರು.

ಪತ್ರಿಕಾಗೋಷ್ಠಿಯಲ್ಲಿ ಕಾರ್‍ಯದರ್ಶಿ ಮಲ್ಲಿಕಾರ್ಜುನ ಜಿರಲಿ, ಚಿದಾನಂದ ಸಿದ್ದಾಪೂರಮಠ, ಬಸವರಾಜ ಕಲ್ಯಾಣಶೆಟ್ಟಿ, ಜಗದೀಶ ಮನ್ನಿಕಟ್ಟಿ, ಸುರೇಶ ಹಿರೇಮಠ, ಸಿದ್ರಾಮ ನಾವಿ, ಸಿದ್ಧರಾಮಯ್ಯ ಮಠಪತಿ ಇದ್ದರು.

**ಬೆಳಗಾವಿ ಮಹಾನಗರ ಪಾಲಿಕೆ**
ಸಿಟಿಎಸ್.ನಂ.4821/26, 4821/27, ಆರ್.ಎಸ್.ನಂ.1005,
ಸುಭಾಷನಗರ, ಬೆಳಗಾವಿ. ದೂರವಾಣಿ : 0831–2405304,
Email : itstaff_ulb_belgaum@yahoo.com, Website : www.belgaumcity.mrc.gov.in

ಗುತ್ತಿಗೆ ಸಂಖ್ಯೆ : ಮ.ನ.ಬೆ./ಅ.ಶಾ./ಘ.ವ.ನಿ./ಟಿಎನ್‌ಡಿ/ಇಪ್ರೋಕ–05/2025–26 ದಿನಾಂಕ : 16–07–2025

**ಟೆಂಡರ್ ಪ್ರಕಟಣೆ**
(ಕರ್ನಾಟಕ ಸಾರ್ವಜನಿಕ ಸಂಗ್ರಹಣೆ ಪೋರ್ಟಲ್)

**ಬೆಳಗಾವಿ ಮಹಾನಗರ ಪಾಲಿಕೆ** ವ್ಯಾಪ್ತಿಯಲ್ಲಿ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಆದೇಶ 1999 – 2000 ಪ್ರಕಾರ ಆಕ್ಟ್ 2000 ನಿಯಮದಂತೆ **ಮಹಾನಗರ ಪಾಲಿಕೆ ಬೆಳಗಾವಿ ಇವರಿಂದ ಬೆಳಗಾವಿ ಮಹಾನಗರ ಪಾಲಿಕೆಯ 2025–26 ನೇ ಸಾಲಿನ ಸಾಮಾನ್ಯ ನಿಧಿಯಲ್ಲಿ ಅನುಮೋದನೆಗೊಂಡಿರುವ 1) Procurement of Chemicals and Sanitary Material for Permanent Wards and 2) Procurement of Safety Gears and Equipments for Permanent Wards ಕಾಮಗಾರಿಗಳಿಗೆ ಟೆಂಡರ್‌ನ್ನು** ಕರ್ನಾಟಕ ಸಾರ್ವಜನಿಕ ಸಂಗ್ರಹಣೆ ಪೋರ್ಟಲ್ ಮುಖಾಂತರ ಅಹ್ವಾನಿಸಲಾಗಿದೆ.

**ಸದರಿ ಟೆಂಡರ್ ಸಲ್ಲಿಸುವ ಕೊನೆಯ ದಿನಾಂಕ : 23–07–2025 ರಂದು ಇರುತ್ತದೆ.**

ಹೆಚ್ಚಿನ ವಿವರಗಳನ್ನು ಕರ್ನಾಟಕ ಸಾರ್ವಜನಿಕ ಸಂಗ್ರಹಣೆ ಪೋರ್ಟಲ್ **ವೆಬ್‌ಸೈಟ್ : https://www.kppp.karnataka.gov.in** ನಲ್ಲಿ ವೇಳಾ ಪಟ್ಟಿಯೊಂದಿಗೆ ಪಡೆಯಬಹುದಾಗಿದೆ. ಒಂದು ವೇಳೆ ತಾಂತ್ರಿಕ ಕಾರಣಗಳಿಂದ ಸದರಿ ಟೆಂಡರಿನಲ್ಲಿ ಯಾವುದಾದರು ಬದಲಾವಣೆಯಾದಲ್ಲಿ ಸದರಿ ಬದಲಾವಣೆಯ ವಿವರಗಳನ್ನು ಕರ್ನಾಟಕ ಸಾರ್ವಜನಿಕ ಸಂಗ್ರಹಣೆ ಪೋರ್ಟಲನಲ್ಲಿ ಮಾತ್ರ ಪ್ರಕಟಿಸಲಾಗುವುದು.

**ಸಹಿ/– ಆಯುಕ್ತರು,**
**ಮಹಾನಗರ ಪಾಲಿಕೆ, ಬೆಳಗಾವಿ.**

ಡಿಐಪಿಆರ್/ಬೆಳಗಾವಿ/658/ಮಣಿಪಾಲ್/2025–26

BELAGINA SURYODHYA KANNADA DAILY MORNING Editor, Printer, PUblisher and Owned By GURURAJ IRAPPA KADAM Plot No.2743 NEAR KEB POWER HOUSE RAMTEERTH NAGAR, SHIVAJI NAGAR BELAGAVI-590016
DIST-BELAGAVI,STATE KARNATAKA PRINTED At M/S LAXMI PRINTERS, No. 627,Auto Nagar,Belagavi,Dist- Belagavi Karnataka, RNI No. KARKAN/2019/77640, Volume : 07, Issue :140, Postal Reg No. PMG/KA/NK/BM/135/25-27 / POST AT Vantamury Colony Post Office